25 April 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಕಡಿಮೆ ಆಸೆಗಳು ಜೀವನದಲ್ಲಿ ಸುಂದರ ಕ್ಷಣಗಳನ್ನು ರೂಪಿಸುತ್ತವೆ!

-ಸ್ನೇಹಾ ಆನಂದ್

info.varthaman@gmail.com



ಮೈಮಾಲಿನ್ಯಕ್ಕಿಂತ ಮನೋಮಾಲಿನ್ಯ ಹೆಚ್ಚು ಅಪಾಯಕಾರಿ ಪುಟ ಸಂ. 2



ಕುಡಿಯುವ ನೀರಿನ ಸಮಸ್ಯೆ ನಿವಾರಿಸಿ: ರಾಮಲಿಂಗಾರೆಡ್ಡಿ ಸೂಚನೆ ಪುಟ ಸಂ. 3



ಸಂಸದ ಯದುವೀರ್‌ಗೆ ಮಕ್ಕಳ ಆಸ್ಪತ್ರೆ ಅವ್ಯವಸ್ಥೆ ದರ್ಶನ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 155 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಜಮೀರ್ ಅಗತ್ಯ ನಮಗಿಲ್ಲ: ಕುಮಾರಸ್ವಾಮಿ ತೀಕ್ಷ್ಣ ಪ್ರತಿಕ್ರಿಯೆ

**ಹಾಸನ:** ಬೆಂದ ಮನೆಯಲ್ಲಿ ಗಳ ಹಿರಿಯುವ ಕೆಲಸಕ್ಕೆ ಕೈಹಾಕಲ್ಲ. ಅದರಲ್ಲೂ ಜಮಿರ್ ಅಹ್ಮದ್ ಅಂತಹವರನ್ನು ಜೆಡಿಎಸ್ ಗೆ ಸೇರಿಸಿಕೊಳ್ಳುವ ಅವಶ್ಯಕತೆ ನಮಗೆ ಇಲ್ಲ. ಈ ಬಗ್ಗೆ ಮತ್ತೆ ಪ್ರಶ್ನೆ ಕೇಳಬೇಡಿ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ಮಾಧ್ಯಮಗಳ ಪ್ರಶ್ನೆಗೆ ಗರಂ ಆಗಿ ಪ್ರತಿಕ್ರಿಯೆ ನೀಡಿದ ಅವರು, ಅವರನ್ನು ಪಕ್ಷಕ್ಕೆ ಸೇರಿಸಿಕೊಳ್ಳುವ ಅವಶ್ಯಕತೆಯಿಲ್ಲ. ಈಗಾಗಲೇ ಅನುಭವಿಸಿದ್ದೇನೆ. ರಾಜಕೀಯದಲ್ಲಿ ಶಕ್ತಿ ಬರುತ್ತದೆ ಎಂದು ಹೇಳಿ ಈ ಕೆಲಸಕ್ಕೆ ಕೈಹಾಕುವುದಿಲ್ಲ ಎಂದು ಸ್ಪಷ್ಟಪಡಿಸಿದರು.





ಬದುಕುಳಿಯಲಿಕ್ಕೆ ನಾನು ಪಟ್ಟಿರೋ ಕಷ್ಟ, ನನಗೆ ಗೊತ್ತು. ಇವತ್ತು ನಾನು ಇಲ್ಲಿ ಬಂದು ನಿಂತಿರೋದಕ್ಕೆ ಭಗವಂತ ಕಾರಣ. ನನಗೆ ದೇವರು 5ನೇ ಬಾರಿ ಜೀವನ ಕೊಟ್ಟಿದ್ದಾನೆ. ನನಗಾದ ಅನುಭವ ನಿಮ್ಮ ಜೊತೆ ಹೇಳುತ್ತೇನೆ. ಬದುಕಲು ನಾನು ಎಷ್ಟು ದುಡ್ಡು ಖರ್ಚು ಮಾಡಿದ್ದೇನೋ ಗೊತ್ತಿಲ್ಲ. ಬಡವರು ಪಾಪ ಎಲ್ಲಿ ತರ್ತಾರೆ ಅಷ್ಟೊಂದು ಹಣ ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

ಕಾಂಗ್ರೆಸ್ ಇವತ್ತು ಅಧಿಕಾರ ನಡೆಸುತ್ತಿರೋದು ಆ ವರ್ಗದ ಜನಗಳಿಂದ ಎಂದು ಜಮೀರ್ ಹೇಳ್ತಾ ಇದ್ದಾರೆ. ಇವತ್ತು ಆ ಪರಿಸ್ಥಿತಿಗೆ ರಾಜ್ಯ ತಂದಿಟ್ಟಿದ್ದಾರೆ. ಪ್ರತಿನಿತ್ಯ ಅನ್ನ ತಿಂತಿರೋದೆ ಆ ಒಂದು ವರ್ಗದಿಂದ ಅಂತ ಹೇಳ್ತಾವರಲ್ವಾ? ಅದನ್ನ ಯಾರಾದರೂ ಕಾಂಗ್ರೆಸ್‌ನವರು ವಿರೋಧ ಮಾಡಿದ್ದೀರಾ? ಅದರಿಂದ ಅದು ಎಲ್ಲೆಲ್ಲಿಗೆ ಹೋಗುತ್ತೆ ನೋಡ್ತೋಣ ಎಂದು ಕಿಡಿಕಾರಿದರು.

## ಇಂಜನಿಯರಿಂಗ್ ಶುಲ್ಕ ಹೆಚ್ಚಳ: ಇನ್ನೂ ನಿರ್ಧಾರವಿಲ್ಲ – ಸುಧಾಕರ್

**ಬೆಂಗಳೂರು:** ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಶೇ.20ರಷ್ಟು ಶುಲ್ಕ ಹೆಚ್ಚಳಕ್ಕೆ ಮನವಿ ಮಾಡಿವೆ. ಆದರೆ ಈ ಬಗ್ಗೆ ಇನ್ನೂ ಯಾವುದೇ ಅಂತಿಮ ನಿರ್ಧಾರ ಕೈಗೊಳ್ಳಲಾಗಿಲ್ಲ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ವೈದ್ಯಕೀಯ ಮತ್ತು ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ತಿಳಿಸಿದರು.

ಹಿಂದಿನ ಸರ್ಕಾರ ವಾರ್ಷಿಕವಾಗಿ ಶೇ. 10ರಷ್ಟು ಹೆಚ್ಚಳಕ್ಕೆ ಅನುಮತಿ ನೀಡಿತ್ತು. ಆದರೆ ಈಗಿನ ಸರ್ಕಾರ ಅದನ್ನು ರದ್ದುಗೊಳಿಸಿ ಪ್ರತಿ ವರ್ಷ ಪ್ರತ್ಯೇಕವಾಗಿ ನಿರ್ಧಾರ ಮಾಡುತ್ತಿದೆ. ಈ ವರ್ಷ ಶೇ.7.5ರಷ್ಟು



ಹೆಚ್ಚಳದ ಬಗ್ಗೆ ಇನ್ನೂ ಅಧಿಕೃತ ನಿರ್ಧಾರವಾಗಿಲ್ಲ ಎಂದು ಹೇಳಿದರು.

ಹೆಚ್ಚುವರಿ ಶುಲ್ಕ ನಿಯಂತ್ರಣ: ಕೆಲವು ಕಾಲೇಜುಗಳು ನಿಗದಿತ 'ಸಿಲೆಬಸ್ ಶುಲ್ಕ'ಕ್ಕಿಂತ ಹೆಚ್ಚು ಹಣ ವಸೂಲಿ ಪುಟ 2ಕ್ಕೆ

## ಜನಿವಾರ ತೆಗೆಸಿದವರ ವಿರುದ್ಧ ಕಠಿಣ ಕ್ರಮ

**ಬೆಂಗಳೂರು:** ಸಿ.ಇ.ಟಿ ಪರೀಕ್ಷಾ ಕೇಂದ್ರದಲ್ಲಿ ಜನಿವಾರ ತೆಗೆಸಿದ ಪ್ರಕರಣದಲ್ಲಿ ಸಿಬ್ಬಂದಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಜನಿವಾರದ ಘಟನೆ ಕುರಿತು ಮಾಹಿತಿ ಬಂದಿಲ್ಲ. ಘಟನೆ ನಡೆದಿದ್ದರೆ ಸಂಬಂಧಿತ ಸಿಬ್ಬಂದಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಅನಾನುಕೂಲವಾಗದಂತೆ, ಪಾರದರ್ಶಕವಾಗಿ ಹಾಗೂ ಯಾವುದೇ ಪರೀಕ್ಷಾ ಅಕ್ರಮ ನಡೆಯದಂತೆ ಕಟ್ಟುನಿಟ್ಟಾಗಿ ಸಿಇಟಿ ಪರೀಕ್ಷೆ ನಡೆಸಲಾಗಿದೆ. ವಿದ್ಯಾರ್ಥಿಗಳು ಪರೀಕ್ಷಾ ಕೊಠಡಿಗೆ ಆಗಮಿಸುವುದರಿಂದ ಪರೀಕ್ಷೆ ಮುಗಿಸುವವರೆಗೆ ಸಿಸಿಟಿವಿ ಮೂಲಕ ನಿಗಾ ವಹಿಸಲಾಗಿದೆ ಎಂದು ಹೇಳಿದ್ದಾರೆ.

ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಕ್ರಮ ನಡೆಯದಂತೆ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಲಾಗಿದೆ. ಖಾಸಗಿ ಮತ್ತು ಸರ್ಕಾರಿ ಕಾಲೇಜುಗಳ ಕೊಠಡಿಗಳನ್ನು ಬಳಸಿಕೊಂಡು ಕಡಿಮೆ ವೆಚ್ಚದಲ್ಲಿ ಪರೀಕ್ಷೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

# ಒಳಮೀಸಲಾತಿ ಮರು ಹಂಗಡಣೆ

## ಬಲಗೈಗೆ 5.25, ಎಡಗೈಗೆ 5.25, ಇತರರಿಗೆ 4.5ರಷ್ಟು ಮೀಸಲಾತಿ ಹಂಚಿಕೆ

**ಬೆಂಗಳೂರು:** ರಾಜ್ಯದ ದಲಿತ ಸಮುದಾಯದ ಬಹುಕಾಲದ ಬೇಡಿಕೆಯಾದ ಒಳಮೀಸಲಾತಿಗೆ ಸಂಬಂಧಿಸಿದಂತೆ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಣಯ ಕೈಗೊಂಡಿದೆ.

ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಶುಕ್ರವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಎಡಗೈ ಹಾಗೂ ಬಲಗೈ ಸಮುದಾಯಕ್ಕೆ ತಲಾ ಶೇ.5.25ರಷ್ಟು ಮೀಸಲಾತಿ ಮತ್ತು ಇತರರಿಗೆ ಶೇ.4.5ರಷ್ಟು ಮೀಸಲಾತಿ ಹಂಚಿಕೆ ಮಾಡಲಾಗಿದೆ ಎಂದು ತೀರ್ಮಾನ ಕೈಗೊಳ್ಳಲಾಗಿದೆ.

ವಿಶೇಷ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಎಸ್ ಸಿ ಒಳಮೀಸಲಾತಿಗೆ ಸಂಬಂಧಿಸಿದಂತೆ ತಾಂತ್ರಿಕ ಸಮಿತಿ ಮಾಡಬೇಕೆಂದು ಕಳೆದ ಸಂಪುಟ ಸಭೆಯಲ್ಲಿ ತೀರ್ಮಾನ

### ಸಂಪುಟ ಸಭೆಯಲ್ಲೂ ಚರ್ಚೆಯಾಗಿತ್ತು

**ಕಳೆದ ಏಪ್ರಿಲ್ 16ರಂದು ನಡೆದಿದ್ದ ಸಂಪುಟ ಸಭೆಯಲ್ಲೂ ಒಳಮೀಸಲು ವಿಚಾರವಾಗಿ ಚರ್ಚೆಯಾಗಿತ್ತು. ಒಳಮೀಸಲು ಹಂಚಿಕೆ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಪರಿಶಿಷ್ಟ ಎಡಗೈ ಸಮುದಾಯದ ಸಚಿವರು ಅಂದಿನ ಸಭೆಯಲ್ಲಿ ಒತ್ತಾಯಿಸಿದ್ದರು. ಹೀಗಾಗಿ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ನೇತೃತ್ವದಲ್ಲಿ ತಾಂತ್ರಿಕ ಮತ್ತು ಕಾನೂನಾತ್ಮಕ ಅಂಶಗಳ ಪರಾಮರ್ಶೆಗೆ ತಾಂತ್ರಿಕ ಸಮಿತಿ ರಚಿಸಸಲಾಗಿತ್ತು. ಕಾನೂನು ಹಾಗೂ ಸಮಾಜ ಕಲ್ಯಾಣ ಇಲಾಖೆ ಹೆಚ್ಚುವರಿ ಮುಖ್ಯಕಾರ್ಯದರ್ಶಿಗಳು ಮತ್ತು ಅಡ್ವೋಕೇಟ್ ಜನರಲ್ ಈ ಸಮಿತಿಯಲ್ಲಿದ್ದರು.**



ಆಗಿತ್ತು. ಸಮಿತಿ ಶುಕ್ರವಾರ ವರದಿ ನೀಡಿದೆ. ಇದೀಗ ಶೇ.15ರಷ್ಟು ಪ್ರಮಾಣದಂತೆ ದಲಿತ ಎಡಗೈ ಸಮುದಾಯಕ್ಕೆ 5.3, ಬಲಗೈ ಸಮುದಾಯಕ್ಕೆ 5.3 ಹಾಗೂ ಇತರರಿಗೆ 4.4 ಹಂಚಿಕೆ ಮಾಡುವಂತೆ ವರದಿ ನೀಡಿತ್ತು. ಆದರೆ, ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆದ ಬಳಿಕ ಮೀಸಲಾತಿ ಪ್ರಮಾಣವನ್ನು 5.25, 5.25 ಹಾಗೂ 4.5 ಹಂಚಿಕೆ ಮಾಡಲಾಗಿದೆ ಎಂದು ತಿಳಿಸಿದರು.

ಶೇ.50 ಮೀಸಲಾತಿಗೆ ಅನುಗುಣವಾಗಿ ಒಳಮೀಸಲಾತಿ ನಿಗದಿ ಮಾಡಲಾಗಿದೆ. ಶೇ.56ರ ಮೀಸಲಾತಿ ಮಾಡಬೇಕು ಎಂಬುದು ನಮ್ಮ ಸಂಕಲ್ಪ. ಆದರೆ, ಈ ವಿಚಾರ ನ್ಯಾಯಾಲಯದಲ್ಲಿ ಇರುವುದರಿಂದ, ಅದು ಇತ್ಯರ್ಥವಾಗುವವರೆಗೆ ಶೇ.6 ಅನ್ನು ಬ್ಯಾಕ್ ಲಾಗ್ ಎಂದು ಪರಿಗಣಿಸಲಾಗುವುದು. ನ್ಯಾಯಾಲಯದ ತೀರ್ಪಿಗೆ ಅನುಗುಣವಾಗಿ ಮುಂದಿನ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

ರೋಸ್ಟರ್ ಬಿಂದು ಗೊಂದಲವನ್ನು ಸರಿಪಡಿಸಲು ಎಲ್ಲರಿಗೂ ಒಪ್ಪಿತವಾಗುವ ತೀರ್ಮಾನ ತೆಗೆದುಕೊಂಡಿದ್ದೇವೆ. ಆ ಪ್ರಕಾರ, 1 ಅಥವಾ 2 ಹುದ್ದೆಗಳು ಇದ್ದ ಸಂದರ್ಭದಲ್ಲಿ ಅವುಗಳನ್ನು ಎಸ್‌ಸಿ ಜನರಲ್ ಎಂದು ಮಾಡಲಾಗುವುದು. ಎ,ಬಿ,ಸಿ ವರ್ಗದವರು ಆ ಹುದ್ದೆಗೆ ಸ್ಪರ್ಧಿಸಬಹುದು. ಅಲ್ಲದೇ ಸಿ ವರ್ಗದ ಹುದ್ದೆಗಳಲ್ಲಿ ಶೇ 20 ರಷ್ಟು ಹುದ್ದೆಗಳನ್ನು 59 ಅಲೆಮಾರಿ ಜಾತಿಗಳಿಗೆ ಮೀಸಲಾಗಿ ಇಡಲಾಗುವುದು ಎಂದು ಸಿದ್ದರಾಮಯ್ಯ ವಿವರಿಸಿದರು.



### ಹೊಸ ಮೀಸಲಾತಿಯಡಿ ನೇಮಕಾತಿ

ಸಚಿವ ಸಂಪುಟ ಸಭೆಯ ನಿರ್ಧಾರದಂತೆ ಎಸ್ ಸಿ ಒಳಮೀಸಲಾತಿಯಲ್ಲಿ ಪ್ರವರ್ಗ ಎ– 5.25, ಬಿ–5.25, ಸಿ–4.5 ಎಂದು ನಿರ್ಧಾರ ಮಾಡಲಾಗಿದೆ. ಇದನ್ನು ಸರ್ವಾನುಮತದಿಂದ ಯಾವುದೇ ಅಪಸ್ವರ ಇಲ್ಲದೆಯೇ ಸಂಪುಟದಲ್ಲಿ ಒಪ್ಪಿಕೊಳ್ಳಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ನ್ಯಾಯಾಲಯದ ಮುಂದಿನ ಆದೇಶದವರೆಗೆ ಇದೇ ಅನುಪಾತ ಅನ್ವಯವಾಗಲಿದೆ. ನೇಮಕಾತಿ ವೇಳೆ ಪ್ರವರ್ಗ ಎ–5.25, ಬಿ–5.25, ಸಿ–4.5 ಮೀಸಲಾತಿಯೊಂದಿಗೆ ಅಧಿಸೂಚನೆಯನ್ನು ಮತ್ತೊಮ್ಮೆ ಪ್ರಕಟ ಮಾಡಲಾಗುವುದು ಎಂದು ಹೇಳಿದರು.

ಬಜೆಟ್ ನಲ್ಲಿ 56,432 ಹುದ್ದೆಗಳ ಭರ್ತಿ ಮಾಡುವುದಾಗಿ ಘೋಷಿಸಿದ್ದೇವೆ. ಈ 56,432 ಹುದ್ದೆಗಳ ಭರ್ತಿ ವೇಳೆ ಇದೇ ಮೀಸಲಾತಿ ಅನುಪಾತ ಅನ್ವಯವಾಗಲಿದೆ. ವಿಶೇಷ ಸಂಪುಟ ಸಭೆಯಲ್ಲಿ ನಿರ್ಧರಿಸಿದ ಅನುಪಾತ ಮುಂದುವರಿಯಲಿದೆ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

## ಅತ್ಯಾಚಾರ: ಸಂತ್ರಸ್ತೆಗೆ ಮಾಸಿಕ 75 ಸಾವಿರ ನೀಡಲು ಆದೇಶ

**ಮಂಗಳೂರು:** ಬಿಜೆಪಿ ಮುಖಂಡನ ಪುತ್ರನ ವಿರುದ್ಧ ಅತ್ಯಾಚಾರ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂತ್ರಸ್ತೆಗೆ ಪ್ರತಿ ತಿಂಗಳು 75 ಸಾವಿರ ರೂ. ಜೀವನಾಂಶ ನೀಡಲು ಹೈಕೋರ್ಟ್ ಆದೇಶ ನೀಡಿದೆ.

ಪುತ್ತೂರಿನ ಬಿಜೆಪಿ ಮುಖಂಡ ಜಗನ್ನಿವಾಸ್ ರಾವ್ ಪುತ್ರ ಕೃಷ್ಣ ಜೆ.ರಾವ್ ಮೇಲೆ ಅತ್ಯಾಚಾರ ದೂರು ದಾಖಲಾಗಿದೆ. ಮದುವೆ ಭರವಸೆ ನೀಡಿ ಯುವತಿಯನ್ನು ಆರೋಪಿ ವಂಚಿಸಿದ್ದ. ಯುವತಿ ಗರ್ಭಿಣಿಯಾದ ಬಳಿಕ ಕೃಷ್ಣ ರಾವ್ ಕೈಕೊಟ್ಟಿದ್ದ. ಯುವತಿ ಮಗುವಿಗೆ ಜನ್ಮ ನೀಡಿದರೂ ಮದುವೆಯಾಗಲು ನಿರಾಕರಿಸಿದ್ದ. ಬಳಿಕ ಆತನನ್ನು ಬಂಧಿಸಲಾಗಿತ್ತು.

ಈಗ ಕ್ರಿಮಿನಲ್ ಪ್ರಕರಣಗಳಿಗೆ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿದೆ. ಸಂತ್ರಸ್ತೆ ಹಾಗೂ ಮಗುವಿಗೆ ತಿಂಗಳಿಗೆ 75, 000 ರೂ. ಜೀವನಾಂಶ ನೀಡಲು ಕೋರ್ಟ್ ಆದೇಶ ಹೊರಡಿಸಿದೆ. ಒಂದು ವಾರದೊಳಗೆ ಮೊದಲ ಕಂತು ಪಾವತಿಸಲು ಹೈಕೋರ್ಟ್ ಸೂಚನೆ ನೀಡಿದೆ. ಮುಂದಿನ ಎಲ್ಲಾ ನ್ಯಾಯಾಂಗ ಪ್ರಕ್ರಿಯೆಗಳಿಗೆ ತಾತ್ಕಾಲಿಕ ತಡೆ ನೀಡಲಾಗಿದೆ. ನ್ಯಾಯಮೂರ್ತಿ ನಾಗಪ್ರಸನ್ನ ಅವರ ಏಕಸದಸ್ಯ ಪೀಠದಿಂದ ಆದೇಶ ನೀಡಿದೆ.


## ಕಾಡಾನೆ ದಾಳಿ: ಇಬ್ಬರಿಗೆ ಗಾಯ



ವಿವರ ಪುಟ–02

## ಸಿಡಿಲು ಬಡಿದು ಇಬ್ಬರು ಸಾವು

**ಬೀದರ್:** ಸಿಡಿಲು ಬಡಿದು ಇಬ್ಬರು ಯುವ ರೈತರು ದಾರುಣವಾಗಿ ಸಾವನ್ನಪ್ಪಿದ ಘಟನೆ ಭಾಲ್ಕಿ ತಾಲೂಕಿನ ನಾವದಗಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ರೇವಣಸಿದ್ದ ಮತ್ತು ಜೇವರ್ಗಿಯ ಯಲ್ಲಾಲಿಂಗ (28) ಸಿಡಿಲಿಗೆ ಬಲಿಯಾದ ದುರ್ದೈವಿ ಯುವಕರಾಗಿದ್ದಾರೆ. ಗುರುವಾರ ಸಂಜೆ (ಏ.23) ಜಮೀನಿನಲ್ಲಿ ಕೃಷಿ ಕೆಲಸ ಮಾಡುತ್ತಿದ್ದಾಗ ಮಳೆ ಶುರುವಾಗಿದೆ. ಹೀಗಾಗಿ ಇಬ್ಬರು ರೈತರು ಜಮೀನಿನಲ್ಲಿದ್ದ ಮಾವಿನ ಮರದ ಕಳಗಡೆ ನಿಂತಿದ್ದರು. ಈ ವೇಳೆ ಮಾವಿನ ಮರಕ್ಕೆ ಸಿಡಿಲು ಅಪ್ಪಳಿಸಿದ್ದು, ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಖಟಕ್



ಚಿಂಚೋಳಿ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

## ಏ.29ರವರೆಗೆ ಮಳೆ ಸಾಧ್ಯತೆ

**ಬೆಂಗಳೂರು:** ರಾಜ್ಯದಲ್ಲಿ ಏ.29ರವರೆಗೆ ಹಾಗೂ ಬೆಂಗಳೂರಿನಲ್ಲಿ ಮೇ 5ರವರೆಗೆ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬಿಸಿಲ ಬೇಗೆಯಿಂದ ಬಳಲುತ್ತಿರುವ ರಾಜ್ಯದ ಜನರಿಗೆ ವರುಣದೇವ ತಂಪೆರೆಯುವ ಸಾಧ್ಯತೆಯಿದೆ. ಕರಾವಳಿ, ದಕ್ಷಿಣ ಕನ್ನಡ, ಉತ್ತರ ಕರ್ನಾಟಕ ಹಾಗೂ ದಕ್ಷಿಣ ಒಳನಾಡಿನಲ್ಲಿ ಏ.29ರವರೆಗೆ ಗಾಳಿ ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಪುಟ 2ಕ್ಕೆ

## 7 ಎಎಪಿ ಸಂಸದರು ಬಿಜೆಪಿ ಸೇರ್ಪಡೆ

### ಅರವಿಂದ ಕೇಜ್ರಿವಾಲ್‌ಗೆ ಆಘಾತ ನೀಡಿದ ರಾಘವ್ ಚಡ್ಡಾ, ಮಿತ್ತಲ್

**ನವದೆಹಲಿ:** ರಾಜ್ಯಸಭಾ ಸದಸ್ಯರಾದ ರಾಘವ್ ಚಡ್ಡಾ, ಅಶೋಕ್ ಮಿತ್ತಲ್ ಮತ್ತು ಸಂದೀಪ್ ಪಾಠಕ್ ಶುಕ್ರವಾರ ಎಎಪಿ ತೊರೆದು ಬಿಜೆಪಿಗೆ ಸೇರಿದ್ದಾರೆ. ಈ ಮೂಲಕ ಎಎಪಿ ಸಂಸದರು ಕೇಜ್ರಿವಾಲ್‌ಗೆ ದೊಡ್ಡ ಆಘಾತ ನೀಡಿದ್ದಾರೆ.

ಸಂದೀಪ್ ಪಾಠಕ್ ಮತ್ತು ಅಶೋಕ್ ಮಿತ್ತಲ್ ಅವರೊಂದಿಗೆ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ರಾಘವ್ ಚಡ್ಡಾ, ಆಮ್ ಆದ್ಮಿ ಪಕ್ಷದಿಂದ 7 ಸಂಸದರು ಬಿಜೆಪಿಗೆ ಸೇರ್ಪಡೆಯಾಗಲಿದ್ದೇವೆ. ರಾಜ್ಯಸಭೆಯಲ್ಲಿ ಎಎಪಿಗೆ ಸೇರಿದ 2/3ನೇ ಸದಸ್ಯರಾದ ನಾವು ಭಾರತದ ಸಂವಿಧಾನದ ನಿಬಂಧನೆಗಳ ಪ್ರಕಾರವೇ ಬಿಜೆಪಿಯೊಂದಿಗೆ ವಿಲೀನಗೊಳ್ಳಲು ನಿರ್ಧರಿಸಿದ್ದೇವೆ ಎಂದು ಹೇಳಿದರು.

ನಾನು ನನ್ನ ರಕ್ತ ಮತ್ತು ಬೆವರಿನಿಂದ ಪೋಷಿಸಿ ನನ್ನ ಯೌವನದ 15 ವರ್ಷಗಳನ್ನು ನೀಡಿದ ಆಮ್ ಆದ್ಮಿ ಪಕ್ಷ ಈಗ ಅದರ ತತ್ವಗಳು, ಮೌಲ್ಯಗಳು ಮತ್ತು ಮೂಲ ನೈತಿಕತೆಗಳಿಂದ ಸಂಪೂರ್ಣವಾಗಿ ವಿಮುಖವಾಗಿದೆ. ಪಕ್ಷ ದೇಶಕ್ಕಾಗಿ ಅಥವಾ ರಾಷ್ಟ್ರೀಯ ಹಿತಾಸಕ್ತಿಗಾಗಿ ಕೆಲಸ ಮಾಡುತ್ತಿಲ್ಲ. ಆದರೆ ವೈಯಕ್ತಿಕ ಲಾಭಕ್ಕಾಗಿ ಕೆಲಸ ಮಾಡುತ್ತಿದೆ.



ಇಂದು ನಾನು ಎಎಪಿಯಿಂದ ದೂರವಿದ್ದು ಜನರ ಬಳಿಗೆ ಹೋಗುತ್ತಿದ್ದೇನೆ ಎಂದು ರಾಘವ್ ಚಡ್ಡಾ ತಿಳಿಸಿದರು.

ರಾಘವ್ ಚಡ್ಡಾ, ಅಶೋಕ್ ಕುಮಾರ್ ಮಿತ್ತಲ್ ಮತ್ತು ಸಂದೀಪ್ ಪಾಠಕ್ ಅವರು 2022ರಿಂದ ಆಮ್ ಆದ್ಮಿ ಪಕ್ಷದಿಂದ ರಾಜ್ಯಸಭಾ ಸದಸ್ಯರಾಗಿದ್ದಾರೆ. ಮೂರನೇ ಎರಡರಷ್ಟು ಸಂಸದರು ಒಟ್ಟಿಗೆ ಸೇರ್ಪಡೆಯಾಗಿರುವುದರಿಂದ ಅವರ ಸಂಸತ್ ಸ್ಥಾನಕ್ಕೆ ಯಾವುದೇ ಧಕ್ಕೆ ಉಂಟಾಗುವುದಿಲ್ಲ.

## ಸಿಇಟಿ ಪರೀಕ್ಷೆ: ಜನಿವಾರ ತೆಗೆಸಿದ್ದ ಮೂವರ ಅಮಾನತು

**ಬೆಂಗಳೂರು:** ನಗರದ ಮಡಿವಾಳದ ಕೃಪಾನಿಧಿ ಕಾಲೇಜು ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳ ಜನಿವಾರವನ್ನು ಬಲವಂತವಾಗಿ ತೆಗೆಸಿದ್ದ ಪ್ರಕರಣದಲ್ಲಿ ಮೂವರು ಸಿಬ್ಬಂದಿ ಅಮಾನತು ಮಾಡಲಾಗಿದೆ. ಸುಧಾಕರ್, ಗಿರಿಜಮ್ಮ, ಆರ್.ಸರಿತಾ ಅವರನ್ನು ಅಮಾನತು ಮಾಡಿ ತನಿಖೆಗೆ ಆದೇಶಿಸಲಾಗಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಬೆಂಗಳೂರು ನಗರ ಡಿಸಿಗೆ ಕ್ರಮಕೈಗೊಳ್ಳಲು ಪತ್ರ ಬರೆದಿತ್ತು.

ಏಪ್ರಿಲ್ 23ರಂದು ಆನಂದ್ ಸುಧೀರ್ ರಾವ್ ಸೇರಿದಂತೆ ಐದಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ತಪಾಸಣೆ ನೆಪದಲ್ಲಿ ಅಡ್ಡಗಟ್ಟಿದ ಸಿಬ್ಬಂದಿ ಜನಿವಾರ ತೆಗೆಸಿದ್ದರು. ಇದಕ್ಕೆ ವಿದ್ಯಾರ್ಥಿಗಳು ವಿರೋಧ ವ್ಯಕ್ತಪಡಿಸಿದಾಗ, ಜನಿವಾರ ತೆಗೆಯದಿದ್ದರೆ ಪರೀಕ್ಷಾ ಕೇಂದ್ರದಿಂದ ಹೊರಹೋಗಿ ಎಂದು ಧಮಕಿ ಹಾಕಿದ್ದರು. ಕೊನೆಗೆ ಪೋಷಕರು ಅನಿವಾರ್ಯವಾಗಿ ಜನಿವಾರವನ್ನು ತೆಗೆಸಿ ಪರೀಕ್ಷಾ ಕೊಠಡಿಗೆ ಕಳುಹಿಸಿದ್ದರು. ಈ ಬಗ್ಗೆ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿತ್ತು.

# ದೆಹಲಿಯಲ್ಲಿ ಡಿಕೆಶಿ 'ಪವರ್ ಪಾಲಿಟಿಕ್ಸ್'

## ಉಪ ಚುನಾವಣೆ ಫಲಿತಾಂಶಕ್ಕೂ ಮೊದಲೇ ಗರಿಗೆದರಿದ ರಾಜ್ಯ ರಾಜಕೀಯ

**ಬೆಂಗಳೂರು:** ಉಪ ಚುನಾವಣೆ ಫಲಿತಾಂಶ ಪ್ರಕಟವಾಗುವ ಮೊದಲೇ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿ ಅಂಗಳದಲ್ಲಿ 'ಪವರ್ ಪಾಲಿಟಿಕ್ಸ್' ಆರಂಭಿಸಿದ್ದಾರೆ. ಅಧಿಕಾರ ಹಸ್ತಾಂತರ ಪ್ರಕ್ರಿಯೆ ಆರಂಭಿಸುವಂತೆ ಹೈಕಮಾಂಡ್ ಮೇಲೆ ಒತ್ತಡ ಹೇರಲು ಮುಂದಾಗಿದ್ದಾರೆ.

ದಾವಣಗೆರೆ ಉಪ ಚುನಾವಣೆ ಬಳಿಕ ರಾಜ್ಯ ಕಾಂಗ್ರೆಸ್‌ನಲ್ಲಿ ನಾನಾ ಬೆಳವಣಿಗೆಗಳು ನಡೆಯುತ್ತಿವೆ. ಈ ಮಧ್ಯೆ ಸಿಎಂ ಸಿದ್ದರಾಮಯ್ಯ ಅವರು ಆಪ್ತ ಸಚಿವರ ಜೊತೆ ಸಭೆ ನಡೆಸಿದ್ದಾರೆ. ಈ ಬೆಳವಣಿಗೆ ಮಧ್ಯೆ ಡಿಕೆಶಿ ದೆಹಲಿಯಲ್ಲಿ ಗಾಂಧಿ ಕುಟುಂಬದ ನಾಯಕರನ್ನು ಭೇಟಿಯಾಗಲು ಮುಂದಾಗಿದ್ದಾರೆ.

ಸಿಎಂ ಸಿದ್ದರಾಮನವರು ಸಂಪುಟ ಪುನಾರಚನೆಗೆ ಹೈಕಮಾಂಡ್ ಮೇಲೆ ಒತ್ತಡ ತರಲು ಆಪ್ತ ಸಚಿವರ ನಿವಾಸದಲ್ಲಿ ರಹಸ್ಯ ಸಭೆ ನಡೆಸಿದ್ದಾರೆ. ಇನ್ನೊಂದು ಕಡೆ ಡಿ.ಕೆ ಸಹೋದರರು ದೆಹಲಿಯಲ್ಲಿ ಬೀಡುಬಿಟ್ಟು ಅಧಿಕಾರ ಹಸ್ತಾಂತರ ವಿಚಾರದಲ್ಲಿ ಸ್ಪಷ್ಟತೆ ಪಡೆಯಲು ಮುಂದಾಗಿದ್ದಾರೆ. ಎರಡು ಬೆಳವಣಿಗೆಯನ್ನು ಗಮನಿಸಿದರೆ ಫಲಿತಾಂಶ ಪ್ರಕಟವಾದ ನಂತರ ಇವರೆಡರ ಪೈಕಿ ಒಂದು ಬದಲಾವಣೆ ಗ್ಯಾರಂಟಿ ಎಂದು ವಿಶ್ಲೇಷಿಸಲಾಗುತ್ತಿದೆ.



ಮಾಹಿತಿ ಬಹಿರಂಗಪಡಿಸಲ್ಲ: ನವದೆಹಲಿಗೆ ಗುರುವಾರ ಸಂಜೆ ತಲುಪಿರುವ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿಯಾ ಆಗಿರುವುದಾಗಿ ತಿಳಿಸಿದ್ದಾರೆ. ಆದರೆ, ಯಾರನ್ನೆಲ್ಲಾ ಭೇಟಿ ಮಾಡಿದೆ ಎಂಬುದನ್ನು ಬಹಿರಂಗಪಡಿಸುವುದಿಲ್ಲ. ದೆಹಲಿಗೆ ನಾನು ಗಾಳಿ ಕುಡಿಯಲು ಬಂದಿಲ್ಲ ಎಂದು ಮಾರ್ಮಿಕವಾಗಿ ನುಡಿದರು.

ತಮಿಳುನಾಡು, ಕೇರಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಚುನಾವಣೆ ಪ್ರವಾಸ ಮಾಡಿದ್ದೆ. ಎಲ್ಲೆಲ್ಲಿ ಏನಾಗಿದೆ ಎಂದು ನಮ್ಮ ನಾಯಕರಿಗೆ ಮಾಹಿತಿ ನೀಡಬೇಕಿದೆ. ಈ ಮೂರು ರಾಜ್ಯಗಳಲ್ಲಿ ಪ್ರಚಾರ ಮಾಡಲು ಪಕ್ಷ ನನಗೆ ಜವಾಬ್ದಾರಿ ನೀಡಿತ್ತು. ಕರ್ನಾಟಕದಲ್ಲಿ ಚುನಾವಣೆ ಮಾಡುವುದು ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿಯಾಗಿ ನನ್ನ ಕರ್ತವ್ಯ. ಅದನ್ನು ಮಾಡುತ್ತೇನೆ ಎಂದು ತಿಳಿಸಿದರು.

ರಾಜ್ಯದಲ್ಲಿ ಬದಲಾವಣೆಗಳ ಬಗ್ಗೆ ಚರ್ಚೆ ಮಾಡುತ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಜವಾಬ್ದಾರಿ ಸ್ಥಾನದಲ್ಲಿರುವ ನಾನು ಈ ವಿಚಾರವಾಗಿ ಮಾಧ್ಯಮಗಳ ಮುಂದೆ ಚರ್ಚೆ ಮಾಡಲು ಆಗುವುದೇ? ನಾನು ಮಾಧ್ಯಮಗಳ ಮುಂದೆ ಮಾತಾಡುವುದಿಲ್ಲ. ನೀವು ನನ್ನಿಂದ ಈ ಬಗ್ಗೆ ಮಾಹಿತಿ ಪಡೆಯುವ ಪ್ರಯತ್ನವನ್ನೂ ಮಾ ಪುಟ 2ಕ್ಕೆ

## ಮೇ 10ಕ್ಕೆ ಡಿಕೆಶಿ ಮುಹೂರ್ತ

### ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆ: ಶಾಸಕ ಸುರೇಶ್ ಗೌಡ ಅಚ್ಚರಿ ಹೇಳಿಕೆ

**ತುಮಕೂರು:** ಕರ್ನಾಟಕ ರಾಜಕೀಯದಲ್ಲಿ ಪಂಚ ರಾಜ್ಯಗಳ ಚುನಾವಣಾ ಫಲಿತಾಂಶ ನಂತರ ಭಾರೀ ಬದಲಾವಣೆ ನಡೆಯಲಿವೆ. ಕಾಂಗ್ರೆಸ್ ಸರ್ಕಾರದ ಆಂತರಿಕ ಕಚ್ಚಾಟದಿಂದಾಗಿ ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆ ಜಾರಿಯಾದರೂ ಅಚ್ಚರಿಯಿಲ್ಲ ಎಂದು ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ.ಸುರೇಶ್ ಗೌಡ ಅಭಿಪ್ರಾಯಪಟ್ಟಿದ್ದಾರೆ.

ಕಾಂಗ್ರೆಸ್ ನಾಯಕರ ನಡುವಿನ ಶೀತಲ ಸಮರದ ಬಗ್ಗೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನಡುವಿನ ನಡೆ ಸರ್ಕಾರವನ್ನು ಪತನದ ಅಂಚಿಗೆ ತಳ್ಳುತ್ತಿವೆ ಎಂದು ಆರೋಪಿಸಿದರು.

ಸಿಎಂ ರೇಸ್‌ನಲ್ಲಿ ಕೈ ನಾಯಕರ ಮಧ್ಯೆ ಸ್ಪರ್ಧೆ ನಡೆಯುತ್ತಿದೆ. ಡಾ.ಜಿ.ಪರಮೇಶ್ವರ್, ಸತೀಶ್ ಜಾರಕಿಹೊಳಿ ಮತ್ತು ಎಂ.ಬಿ.ಪಾಟೀಲ್ ಮುಖ್ಯಮಂತ್ರಿ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಡಿ.ಕೆ. ಶಿವಕುಮಾರ್ ಅವರು ಈಗಾಗಲೇ ಮುಖ್ಯಮಂತ್ರಿಯಾಗಲು ತಯಾರಿ ನಡೆಸಿದ್ದಾರೆ. ಮೇ 10ರಂದು ಮುಹೂರ್ತ ಕೂಡ ನಿಗದಿಯಾಗಿದೆ ಎಂಬ ಸ್ಫೋಟಕ ಪುಟ 2ಕ್ಕೆ

# ಮೈಮಾಲಿನ್ಯಕ್ಕಿಂತ ಮನೋಮಾಲಿನ್ಯ ಹೆಚ್ಚು ಅಪಾಯಕಾರಿ



ಮೈಸೂರು: ಪರಿಸರ ಮಾಲಿನ್ಯ, ಮೈಮಾಲಿನ್ಯಕ್ಕಿಂತ ಮನೋಮಾಲಿನ್ಯ ಹೆಚ್ಚು ಅಪಾಯಕಾರಿ ಎಂದು ಮಹಾರತ್ನ ಟ್ರಸ್ಟ್ ಸಂಸ್ಥಾಪಕ, ಖ್ಯಾತ ಗಾಯಕ ಮೈಸೂರು ಮಹಾಲಿಂಗ ಎಂ.ಲಕ್ಷ್ಮೀಪುರ ಎಚ್ಚರಿಸಿದರು.

ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಏರ್ಪಡಿಸಿದ್ದ ಸಾಂಸ್ಕೃತಿಕ, ಕ್ರೀಡಾ ವೇದಿಕೆ ಹಾಗೂ ಎನ್‌ಎಸ್‌ಎಸ್ ಘಟಕದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಮೊಬೈಲ್ ಸಂಸ್ಕೃತಿ ಬಂದ ನಂತರ ಮನಸ್ಸುಗಳು ಛಿದ್ರ ಛಿದ್ರವಾಗಿವೆ. ಈ ಬಗ್ಗೆ ಜಾಗ್ರತರಾಗಿರಬೇಕು ಎಂದರು.

ಕೃತಕ ಬುದ್ಧಿಮತ್ತೆ ಆವರಿಸುತ್ತಿರುವ ಈ ಕಾಲದಲ್ಲಿ ಮುಂದೆ ಸ್ಮರಣ ಶಕ್ತಿಯೂ ಕಡಿಮೆಯಾಗುತ್ತದೆ. ಇದನ್ನೆಲ್ಲಾ ಅರ್ಥಮಾಡಿ ಕೊಂಡು ಪದವಿಯ ನಂತರ ಐಎಎಸ್, ಕೆಎಎಸ್ ಮೊದಲಾದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಮೂಲಕ ಜವಾಬ್ದಾರಿ ಯುತವಾಗಿ ಬದುಕು ಕಟ್ಟಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಅಡ್ಡದಾರಿಗಳ ಮೂಲಕ ಸಾಧನೆ ಅಸಾಧ್ಯ. ಇದು ಸ್ಪರ್ಧಾತ್ಮಕ ಯುಗ. ಅವಕಾಶಗಳ ಯುಗ. ನಮ್ಮ ಶಕ್ತಿ ಮತ್ತು ದೌರ್ಬಲ್ಯ ಏನು? ಎಂಬುದನ್ನು ತಿಳಿದುಕೊಂಡು ನಿರಂತರ ಪರಿಶ್ರಮ ಮತ್ತು ಏಕಾಗ್ರತೆಯಿಂದ ಗುರಿಯನ್ನು ತಲುಪುವ ಕಡೆ ಗಮನ ಕೇಂದ್ರೀಕರಿಸಬೇಕು. ಇದಕ್ಕಾಗಿ ಬುದ್ಧ, ಬಸವ, ಅಂಬೇಡ್ಕರ್, ವಿವೇಕಾನಂದ, ಅಕ್ಕ ಮಹಾದೇವಿ ಮೊದಲಾದವರ ಆತ್ಮಕಥನ ಓದಬೇಕು ಎಂದು ಅವರು ಸಲಹೆ ಮಾಡಿದರು.

ಸಮಾರೋಪ ಭಾಷಣ ಮಾಡಿದ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ವಿದ್ಯಾರ್ಥಿನಿಯರು ಕೇವಲ ಪಠ್ಯಕ್ಕೆ ಸೀಮಿತವಾಗದೆ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಯಲ್ಲಿ ತೊಡಗಿಸಿಕೊಂಡಾಗ ಮಾತ್ರ ವ್ಯಕ್ತಿತ್ವ ವಿಕಸನ ಸಾಧ್ಯ. ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಮತ್ತು ಸೇವಾ ಮನೋಭಾವ, ಸಮಾಜಮುಖಿ ಚಿಂತನೆಯನ್ನು ಎನ್‌ಎಸ್‌ಎಸ್‌ನಂತಹ ವೇದಿಕೆಗಳು ಮಾಡುತ್ತವೆ ಎಂದರು.

ಹೊಸಮಠದ ಕಿರಿಯ ಶ್ರೀಗಳಾದ ಸಿದ್ದಬಸವ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಪ್ರಾಂಶುಪಾಲ ಡಾ. ಎಂ. ಶಾರದಾ ಅಧ್ಯಕ್ಷತೆ ವಹಿಸಿದ್ದರು.ವಿವಿಧ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿನಿಯರಿಗೆ ಬಹುಮಾನ ವಿತರಿಸಲಾಯಿತು. ಜಿ. ಎಂ. ಅಶ್ವಿನಿ ಪ್ರಾರ್ಥಿಸಿದರು. ನಿತ್ಯ ಸ್ವಾಗತಿಸಿದರು. ಹರ್ಷಿತಾ ಕಾರ್ಯಕ್ರಮ ನಿರೂಪಿಸಿ, ಲೀಲಮ್ಮ ವಂದಿಸಿದರು. ನಂತರ ಬಿ.ಎ ಹಾಗೂ ಬಿ.ಕಾಂ. ವಿದ್ಯಾರ್ಥಿನಿಯರು ಸಾಂಸ್ಕೃತಿಕ ಕಾರ್ಯಕ್ರಮವನ್ನು ನಡೆಸಿಕೊಟ್ಟರು.

# ಜೀವಿತ ಭವಿಷ್ಯ ಮತ್ತಷ್ಟು ಉಜ್ವಲವಾಗಲಿ



ಚನ್ನಪಟ್ಟಣ: 2025-26 ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡದಲ್ಲಿ 125 ಕ್ಕೆ 125 ಅಂಕ ಪಡೆಯುವ ಮೂಲಕ ಸಾಧನೆ ಮಾಡಿರುವ ತಾಲೂಕಿನ ಬೇವೂರು ಶ್ರೀ ಸಿದ್ಧರಾಮೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿನಿಗೆ ಜೀವಿತ ಅವರ ಮುಂದಿನ ಭವಿಷ್ಯ ಮತ್ತಷ್ಟು ಉಜ್ವಲವಾಗಲಿ ಎಂದು ವಿದ್ಯಾಸಂಸ್ಥೆಯ ಕಾರ್ಯದರ್ಶಿ ಬೇವೂರು ಯೋಗೀಶ್‌ಗೌಡ ಶುಭ ಹಾರೈಸಿದರು.

ಸಾಧನೆ ಮಾಡಿರುವ ವಿದ್ಯಾರ್ಥಿನಿ ಜೀವಿತ ಅವರಿಗೆ ಬೇವೂರು ಶ್ರೀ ಸಿದ್ಧರಾಮೇಶ್ವರ ವಿದ್ಯಾಸಂಸ್ಥೆ ಮತ್ತು ಕಕಜ ವೇದಿಕೆಯಿಂದ ಸಿಹಿ ತಿನ್ನಿಸಿ ಸನ್ಮಾನಿಸಿ ಅಭಿನಂದಿಸಿ ಅವರು ಮಾತನಾಡಿ ನಮ್ಮ ಸಂಸ್ಥೆಯ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆದು ಸಂಸ್ಥೆಯ ಜೊತೆಗೆ ಪೋಷಕರಿಗೂ ಕೀರ್ತಿ ತಂದಿದ್ದಾರೆ. ಇವರಲ್ಲಿ ವಿಶೇಷವಾಗಿ ಮಾತೃ ಭಾಷೆಯಾಗಿರುವ ಕನ್ನಡ ಭಾಷೆಯಲ್ಲಿ 125 ಕ್ಕೆ 125 ಅಂಕ ಪಡೆದು ಸಾಧನೆ ಮಾಡಿರುವುದು ನಮ್ಮ ಸಂಸ್ಥೆಗೆ ಹೆಮ್ಮೆಯ ಸಂಗತಿಯಾಗಿದೆ. ಜೀವಿತ ಅವರು ಮುಂದಿನ ಶಿಕ್ಷಣದಲ್ಲಿ ಸಹ ಎಲ್ಲಾ ವಿಭಾಗದಲ್ಲಿ ಉತ್ತಮ ಫಲಿತಾಂಶ ಪಡೆದು ಸಾಧನೆ ಮಾಡಿ ಪೋಷಕರಿಗೆ ಮತ್ತು ಸಂಸ್ಥೆಗೆ ಕೀರ್ತಿ ತರಲಿ ಎಂದು ಶುಭ ಕೋರಿದರು.

ಜೊತೆಗೆ ಶಾಲೆಗೆ ಉತ್ತಮ ಫಲಿತಾಂಶ ಬರಲು ಕಾರಣವಾದ ಎಲ್ಲಾ ಶಿಕ್ಷಕರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು. ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ದೊಡ್ಡಮಾದೇಗೌಡ, ಉಪಾಧ್ಯಕ್ಷ ಜಿತೇಂದ್ರ ಕುಮಾರ್, ಖಜಾಂಚಿ ಮನು, ಉಪಪ್ರಾಂಶುಪಾಲರಾದ ಗೌರಮ್ಮ, ನಿರ್ದೇಶಕರುಗಳಾದ ನವೀನ್‌ಕುಮಾರ್, ಚೇತನ್, ಶಿವಕುಮಾರ್, ದೈಹಿಕ ಶಿಕ್ಷಣ ಶಿಕ್ಷಕ ನಾಗೇಶ್‌ಗೌಡ, ಕನ್ನಡ ಶಿಕ್ಷಕ ಮಂಜುನಾಥ್, ಸಿಬ್ಬಂದಿಗಳಾದ ಚೈತ್ರಾ, ಅಭಿಷೇಕ್ ಸೇರಿದಂತೆ ಇತರರು ಇದ್ದರು.

ಮೊದಲ ಪುಟದಿಂದ

## ಇಂಜಿನಿಯರಿಂಗ್ ಶುಲ್ಕ ಹೆಚ್ಚಳ ಇನ್ನೂ ನಿರ್ಧರಿಸಿಲ್ಲ: ಸುಧಾಕರ್

ಮಾಡುತ್ತಿರುವ ಬಗ್ಗೆ ದೂರುಗಳು ಬಂದಿವೆ. ಈ ಕುರಿತು ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಸಿಲೆಬಸ್ ಶುಲ್ಕವನ್ನು ಕೆಇಎ ಮೂಲಕವೇ ಸಂಗ್ರಹಿಸುವ ಬಗ್ಗೆ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯಚಟುವಟಿಕೆಗಳ ಬಗ್ಗೆ ಉತ್ತಮ ಮೆಚ್ಚುಗೆ ವ್ಯಕ್ತವಾಗಿದೆ. ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಲಾಗುತ್ತಿದೆ. ಈ ವರ್ಷ ನೀಟ್ ಫಲಿತಾಂಶಕ್ಕೂ ಮುನ್ನವೇ ಇಂಜಿನಿಯರಿಂಗ್ ಸೀಟು ಭರ್ತಿ ಮಾಡುವ ಬಗ್ಗೆ ಚಿಂತನೆ ನಡೆದಿದೆ ಎಂದು ತಿಳಿಸಿದರು.

## ಮೇ 10ಕ್ಕೆ ಡಿಕೆಶಿ ಮುಹೂರ್ತ

ಮಾಹಿತಿಯನ್ನು ಅವರು ಹಂಚಿಕೊಂಡಿದ್ದಾರೆ. ರಾಜ್ಯ ಸರ್ಕಾರದ ಆಡಳಿತ ವೈಖರಿಯಿಂದ ಜನರು ಬೇಸತ್ತಿದ್ದಾರೆ. ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ. ಕೇವಲ ಕುರ್ಚಿ ಉಳಿಸಿಕೊಳ್ಳುವ ಆಟ ನಡೆಯುತ್ತಿದೆ. ಕಾಂಗ್ರೆಸ್ ಒಳಜಗಳದಿಂದಾಗಿ ರಾಜ್ಯದ ಆಡಳಿತ ಯಂತ್ರ ಕುಸಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಏ.29ರವರೆಗೆ ಮಳೆ ಸಾಧ್ಯತೆ

ಬೆಂಗಳೂರಿಗರಿಗೂ ಬೆಂಕಿ ಬಿಸಿಲಿನಿಂದ ಕೊಂಚ ರಿಲೀಫ್ ಸಿಗುವ ಸಾಧ್ಯತೆಯಿದೆ. ಏ.28ರಿಂದ ಮೇ 5ರವರೆಗೆ ಭಾರೀ ಗಾಳಿ, ಮಳೆಯಾಗಲಿದೆ ಎನ್ನಲಾಗಿದೆ. ಕಳೆದ ಕೆಲ ದಿನಗಳಿಂದ ವಿಪರೀತ ಸೆಕೆ, ಏರಿದ ಉಷ್ಣಾಂಶದಿಂದ ಜನರು ಬಸವಳಿದಿದ್ದಾರೆ.

## ಕಾಡಾನೆ ದಾಳಿ: ಇಬ್ಬರಿಗೆ ಗಾಯ

ಮೈಸೂರು: ಹಂಪಾಪುರ ಗ್ರಾಮದ ಹೊರವಲಯದಲ್ಲಿ ಶುಕ್ರವಾರ ಬೆಳಿಗ್ಗೆ ವಾಯುವಿಹಾರಕ್ಕೆ ತೆರಳಿದ್ದ ಇಬ್ಬರ ಮೇಲೆ ಕಾಡಾನೆ ದಾಳಿ ನಡೆಸಿ ಗಾಯಗೊಳಿಸಿದೆ. ಹಂಪಾಪುರದ ಸಿದ್ದೇಗೌಡ ಮತ್ತು ಮೈಸೂರು ತಾಲ್ಲೂಕಿನ ಮದ್ದೂರು ಗ್ರಾಮದ ಮರಿಲಿಂಗ ಗಾಯಗೊಂಡವರು.

ರಸ್ತೆಯಲ್ಲಿ ವಾಯುವಿಹಾರ ಮಾಡುತ್ತಿದ್ದ ಸಂದರ್ಭ ಜಮೀನನ ಕಡೆಯಿಂದ ಬಂದ ಕಾಡಾನೆ ದಾಳಿ ನಡೆಸಿದೆ. ಸಿದ್ದೇಗೌಡ ಮತ್ತು ಮರಿಲಿಂಗ ಭಯಭೀತರಾಗಿ ಓಡಲು ಯತ್ನಿಸಿ, ಸಾಧ್ಯವಾಗದೆ ಕೆಳಗೆ ಬಿದ್ದಿದ್ದಾರೆ. ನಂತರ ಆನೆ ಸೊಂಡಲಿನಿಂದ ಅವರನ್ನು ತಳ್ಳಿ ಗಾಯಗೊಳಿಸಿದೆ ಎನ್ನಲಾಗಿದೆ. ಅವರ ಚೀರಾಟದ ಕಾರಣದಿಂದ ಆನೆ ಓಡಿದೆ ಎಂದು ತಿಳಿದುಬಂದಿದೆ. ಗಾಯಗೊಂಡವರನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

## ದೆಹಲಿಯಲ್ಲಿ ಡಿಕೆಶಿ 'ಪವರ್ ಪಾಲಿಟಿಕ್'

ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆಲವು ಸಚಿವರ ಗೌಪ್ಯ ಸಭೆ ಕುರಿತ ಪ್ರಶ್ನೆಗೆ ಉತ್ತರಿಸಿ, ಮುಖ್ಯಮಂತ್ರಿ ಆಪ್ತ ಸಚಿವರು ಭೇಟಿ ಮಾಡಿ ಚರ್ಚೆ ಮಾಡಿರುವ ಬಗ್ಗೆ ಮಾಹಿತಿ ಇಲ್ಲ. ಯಾರು ಯಾರ ಆಪ್ತರು, ಯಾರಿಗೆ ಆಪ್ತರಲ್ಲ ಎಂಬುದು ನನಗೆ ಗೊತ್ತಿಲ್ಲ. ನಾನು ಈ ಸಭೆಗಳ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ ಎಂದು ಹೇಳಿದರು. ಹೈಕಮಾಂಡ್ ಭೇಟಿ ಕುರಿತು ವಿವರಗಳನ್ನು ಬಹಿರಂಗಪಡಿಸದಿರುವುದು ಹಾಗೂ ರಾಜ್ಯದ ರಾಜಕೀಯ ಬೆಳವಣಿಗೆಗಳ ಬಗ್ಗೆ ಮೌನ ವಹಿಸಿರುವುದು, ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಆಂತರಿಕ ಚರ್ಚೆಗಳ ಬಗ್ಗೆ ಇನ್ನಷ್ಟು ಕುತೂಹಲ ಹೆಚ್ಚಿಸಿದೆ.

## ಧನ್ಯ(ದೀಕ್ಷ) ಉತ್ತಮ ಸಾಧನೆ



ಮೈಸೂರು: ಮೈಸೂರಿನ ಭಾರತೀಯ ವಿದ್ಯಾಭವನ ಶಾಲೆ ವಿದ್ಯಾರ್ಥಿನಿ ವಿ. ಧನ್ಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.96% ಅಂಕ ಗಳಿಸಿ ಸಾಧನೆ ಮಾಡಿದಾಳೆ.

ಒಟ್ಟು 625 ಅಂಕಗಳಿಗೆ ಕಳೆದ ಮಾರ್ಚ ತಿಂಗಳಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಧನ್ಯ ಒಟ್ಟು 602 ಅಂಕ ಗಳಿಸಿದಾಳೆ ಕನ್ನಡ-119, ಇಂಗ್ಲಿಷ್-95, ಹಿಂದಿ-100, ಗಣಿತ-96, ವಿಜ್ಞಾನ-94, ಹಾಗೂ ಸಮಾಜ ವಿಜ್ಞಾನ-98 ಅಂಕವನ್ನು ಗಳಿಸುವ ಮೂಲಕ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದಾಳೆ ಎಂದು ಶಾಲೆ ಮುಖ್ಯೋಪಾಧ್ಯಾಯರು ತಿಳಿಸಿದ್ದಾರೆ. ಧನ್ಯ ಮೈಸೂರಿನ ಹೆಬ್ಬಾಳು ವಾಣಿವಿಲಾಸ ಬಡವಾಣೆ ನಿವಾಸಿಗಳಾದ ಶ್ರೀಮತಿ ಲಿಖಿತ ಮತ್ತು ವಿ. ವಿನೋದ್ ದಂಪತಿಗಳ ಪುತ್ರಿ.

# ಖರ್ಗೆ ಹೇಳಿಕೆ ಖಂಡಿಸಿ ಪ್ರತಿಭಟನೆ

## ಎಐಸಿಸಿ ಅಧ್ಯಕ್ಷ ಹೇಳಿಕೆಗೆ ಬಿಜೆಪಿ ಯುವಮೋರ್ಚಾ ಕಿಡಿ




ಮೈಸೂರು:ಪ್ರಧಾನಿ ನರೇಂದ್ರಮೋದಿಯವರ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆಯನ್ನು ಖಂಡಿಸಿ ನಗರದಲ್ಲಿ ಬಿಜೆಪಿ ನಗರ ಯುವಮೋರ್ಚಾ ಕಾರ್ಯಕರ್ತರು ಪ್ರತಿಭಟಿಸಿದರು.

ನಗರದ ಗಾಂಧಿ ವೃತ್ತದಲ್ಲಿ ಜಮಾವಣೆಗೊಂಡ ಬಿಜೆಪಿ ನಗರ ಯುವಮೋರ್ಚಾ ಕಾರ್ಯಕರ್ತರು ಖರ್ಗೆ ಅವರು ಹೇಳಿಕೆ ಖಂಡಿಸಿ ನಾನಾ ನಾಮಫಲಕಗಳನ್ನು ಹಿಡಿದು ಹಲವು ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು. ಶಾಸಕ ಶ್ರೀವತ್ಸ ಮಾತನಾಡಿ, ಕಾಂಗ್ರೆಸ್ ಚಾಳಿಯೇ ಇಂತಹ ಹೇಳಿಕೆಯಾಗಿದೆ. ರಾಷ್ಟ್ರಪತಿಯನ್ನು ಅವಳ್ಯಾರು ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದು ನೆನಪಿಸಿಕೊಳ್ಳುತ್ತೇವೆ. ರಾಷ್ಟ್ರಪತಿಯವರನ್ನು ಅವಳು ಎನ್ನುವುದು ಹಾಗೂ ಪ್ರಧಾನಿಯನ್ನು ಭಯೋತ್ಪಾದಕ ಎನ್ನುವುದು ಇವರ ಸಂಸ್ಕೃತಿಯಾಗಿದೆ. ಪದ ಬಳಸಿದ ಮೇಲೆ ಮಾಧ್ಯಮಗಳು ತಿರುಚಿವೆ ಎನ್ನುತ್ತಿದ್ದಿರಿ. ಯಾವ ಪದವನ್ನು ಎಲ್ಲಿ ಬಳಸಬೇಕೆನ್ನುವ ಅರಿವಿಲ್ಲದವರು ಅಧ್ಯಕ್ಷರಾಗಿದ್ದೀರಿಯೇ? ವಿರೋಧ ಪಕ್ಷವಾಗಿ ಬಿಜೆಪಿ ಚಿಂತನೆಯನ್ನು ವಿರೋಧಿಸಿ. ಆದರೆ, ವ್ಯಕ್ತಿ ವಿರೋಧ ಮಾಡುವುದು ಸರಿಯಲ್ಲ. ಭಯೋತ್ಪಾದಕರನ್ನು ತಯಾರು ಮಾಡಿದ್ದೇ ಕಾಂಗ್ರೆಸ್ ಪಕ್ಷವಾಗಿದೆ. ಇದಕ್ಕೆ ಹಲವು ನಿದರ್ಶನಗಳು ನಮಲ್ಲಿವೆ. ನೀವು ಮಾಡಿರುವ ಇಂತಹ ಚಟುವಟಿಕೆಗಳಿಗೆ ಉತ್ತೇಜನ ನೀಡಿ ಪ್ರಧಾನಿಯವರಿಗೆ ಇಂತಹ ಹೇಳಿಕೆ ನೀಡುವುದು ಸರಿಯಲ್ಲ ಎಂದರು.

ಚುನಾವಣಾ ರಾಜಕೀಯಕ್ಕಾಗಿ ಇಂತಹ ಹೇಳಿಕೆ ಸರಿಯಲ್ಲ. ಏಳು ವರ್ಷದ ಬಿಜೆಪಿ ಅವಧಿಯಲ್ಲಿ ಒಂದೇ ಒಂದು ಹಗರಣ ನಡೆಯದ ರೀತಿ ಭ್ರಷ್ಟಚಾರ ಮುಕ್ತ ಸ್ವಚ್ಛ ಆಡಳಿತ ನೀಡುತ್ತಿದ್ದೇವೆ. ಸುಮ್ಮನೆ ಬಾಯಿಗೆ ಬಂದಂತೆ ಮಾತನಾಡುವ ಸಂಸ್ಕೃತಿಯನ್ನು ಕಾಂಗ್ರೆಸ್ ಬಿಡಬೇಕೆಂಬ ಒತ್ತಾಯವನ್ನು ಈ ಮೂಲಕ ಮಾಡುತ್ತೇನೆಂದರು.

ಬಿಜೆಪಿ ಯುವಮೋರ್ಚಾ ನಗರಾಧ್ಯಕ್ಷ ರಾಕೇಶ್ ಮಾತನಾಡಿ, ಮಲ್ಲಿಕಾರ್ಜುನ ಖರ್ಗೆಯವರು 50 ವರ್ಷದ ಹಿರಿಯ ರಾಜಕಾರಣಿಗಳಾಗಿಯೂ ಇಂತಹ ಹೇಳಿಕೆ ನೀಡಿರುವುದು ಖಂಡನೀಯ. ಅವರ ಹಿರಿತನಕ್ಕೆ ಇಂತಹ ಹೇಳಿಕೆ ಸರಿಯಲ್ಲ. ಈ ಕೂಡಲೇ ಅವರು ದೇಶದ ಜನರ ಕ್ಷಮೆಯಾಚಿಸಬೇಕು. ಖರ್ಗೆಯವರ ಹೇಳಿಕೆ ಖಂಡಿಸಿ ದೇಶ ಹಾಗೂ ರಾಜ್ಯದ ಎಲ್ಲಾ ಘಟಕಗಳಲ್ಲಿಯೂ ಬಿಜೆಪಿ ಕರೆ ನೀಡಿರುವ ಪ್ರತಿಭಟನೆ ಬೆಂಬಲಿಸಿ ನಗರದಲ್ಲಿಯೂ ಪ್ರತಿಭಟನೆ ನಡೆಸುತ್ತಿರುವುದಾಗಿ ಹೇಳಿದರು.

ಬಿಜೆಪಿ ರಾಜ್ಯ ಸಮಿತಿ ಸದಸ್ಯ ಗಿರಿಧರ್, ಮುಖಂಡರಾದ ಜೋಗಿ ಮಂಜು, ಡಿ.ಲೋಹಿತ್, ಕೆ.ಎಂ.ನಿಶಾಂತ್ ಇನ್ನಿತರರು ಉಪಸ್ಥಿತರಿದ್ದರು.

## ಮಣಿಪಾಲ್ ಆಸ್ಪತ್ರೆಯಿಂದ ಅತ್ಯಾಧುನಿಕ ಇಬಸ್ ತಂತ್ರಜ್ಞಾನ ಬಿಡುಗಡೆ

ಮೈಸೂರು: ನಗರದ ಮಣಿಪಾಲ್ ಆಸ್ಪತ್ರೆಯು ಶ್ವಾಸಕೋಶದ ಗಂಭೀರ ಸಮಸ್ಯೆಗಳನ್ನು ಅತ್ಯಂತ ನಿಖರವಾಗಿ ಮತ್ತು ಸುಲಭವಾಗಿ ಪತ್ತೆಹಚ್ಚುವ ಎಂಡೋಬ್ರಾಂಕಿಯಲ್ ಅಲ್ಟ್ರಾಸೌಂಡ್ ಎಂಬ ಅತ್ಯಾಧುನಿಕ ತಂತ್ರಜ್ಞಾನವನ್ನು ನಗರದಲ್ಲಿ ಮೊದಲ ಬಾರಿಗೆ ಪರಿಚಯಿಸಿದೆ.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿ ನಡೆಸಿದ ಮಣಿಪಾಲ್ ಆಸ್ಪತ್ರೆಯ ಡಾ.ಆರ್.ಲಕ್ಷ್ಮಿ ನರಸಿಂಹನ್ ಮಾತನಾಡಿ, ನಮ್ಮ ಎದೆಯ ಭಾಗದಲ್ಲಿ ಹೃದಯ, ಶ್ವಾಸಕೋಶ ಮತ್ತು ಪ್ರಮುಖ ರಕ್ತನಾಳಗಳಿರುವ ಜಾಗದಲ್ಲಿ ಉಂಟಾಗುವ ಸಮಸ್ಯೆಗಳನ್ನು ಪತ್ತೆಹಚ್ಚುವುದು ಸವಾಲಿನ ಕೆಲಸವಾಗಿತ್ತು. ಹಿಂದೆ ಇಂತಹ ಸಂದರ್ಭಗಳಲ್ಲಿ ಶಸ್ತ್ರಚಿಕಿತ್ಸೆ ಅನಿವಾರ್ಯವಾಗಿತ್ತು.




ಆದರೆ ಇಬಸ್ ತಂತ್ರಜ್ಞಾನದಲ್ಲಿ ಶಸ್ತ್ರಚಿಕಿತ್ಸೆ ಇಲ್ಲದೆ, ಅಲ್ಟ್ರಾಸೌಂಡ್ ಸಹಾಯದಿಂದ ಶ್ವಾಸನಾಳದ ಒಳಗೆ ಹೋಗಿ, ನೈಜ ಸಮಯದಲ್ಲಿ ಗೆಡ್ಡೆ ಅಥವಾ ಸೋಂಕನ್ನು ವೀಕ್ಷಿಸಬಹುದು. ಅಲ್ಲದೆ, ಅತ್ಯಂತ ನಿಖರವಾಗಿ ಅಲ್ಲಿನ ಅಂಗಾಂಶದ ಮಾದರಿಯನ್ನು (ಟಿಶ್ಯೂ ಸ್ಯಾಂಪಲ್) ಸಂಗ್ರಹಿಸಬಹುದು. ಇದರಿಂದ ರೋಗ ಪತ್ತೆ ಸುಲಭವಾಗುತ್ತದೆ ಎಂದರು. ಶ್ವಾಸಕೋಶ ವಿಭಾಗದ ವೈದ್ಯೆ ಡಾ.ಕೆ.ಸ್ಫೂರ್ತಿ ಮಾತನಾಡಿ, ಇಬಸ್ ಎಂಬುದು ಕ್ಯಾನ್ಸರ್, ಕ್ಷಯರೋಗ, ಮತ್ತು ಶ್ವಾಸಕೋಶದ ಗೆಡ್ಡೆಗಳನ್ನು ಪತ್ತೆಹಚ್ಚಲು ಇರುವ ಅತ್ಯಂತ ಸುರಕ್ಷಿತ ವಿಧಾನವಾಗಿದೆ. ಎಂದು ತಿಳಿಸಿದರು. ಮಣಿಪಾಲ್ ಆಸ್ಪತ್ರೆಯ ನಿರ್ದೇಶಕ ಬಿ.ಜೆ.ಸಂದೀಪ್ ಪಟೇಲ್ ಮಾತನಾಡಿದರು.

**ಯಶಸ್ವಿ ಚಿಕಿತ್ಸೆ:** 54 ವರ್ಷದ ತಾಯಮ್ಮ ಹಲವು ತಿಂಗಳುಗಳಿಂದ ಜ್ವರ ಮತ್ತು ನಿರಂತರ ಕೆಮ್ಮಿನಿಂದ ಬಳಲುತ್ತಿದ್ದರು. ಪರೀಕ್ಷೆ ಮಾಡಿದಾಗ ಅವರ ಶ್ವಾಸಕೋಶದ ಅತ್ಯಂತ ಸೂಕ್ಷ್ಮ ಪ್ರದೇಶದಲ್ಲಿ (ಎದೆಯ ಮಧ್ಯಭಾಗ) ಒಂದು ಗೆಡ್ಡೆ ಇರುವುದು ಪತ್ತೆಯಾಯಿತು. ಇದು ಹೃದಯ ಮತ್ತು ಶ್ವಾಸಕೋಶದ ನಡುವಿನ ಬಹಳ ಕಿರಿದಾದ ಜಾಗವಾದ್ದರಿಂದ ಸಾಮಾನ್ಯ ಪರೀಕ್ಷೆಗಳಿಂದ ನಿಖರವಾದ ಮಾಹಿತಿ ತಿಳಿಯುತ್ತಿರಲಿಲ್ಲ. ಹಲವು ಆಸ್ಪತ್ರೆಗಳಿಗೆ ಹೋಗಿದ್ದರೂ ಕಾಯಿಲೆ ಏನೆಂದು ಪತ್ತೆಯಾಗದೆ ಕುಟುಂಬದವರು ಆತಂಕಕ್ಕೆ ಒಳಗಾಗಿದ್ದರು. ಬಳಿಕ ಹೊಸ ತಂತ್ರಜ್ಞಾನದಿಂದ ಕಾಯಿಲೆ ಪತ್ತೆ ಹಚ್ಚಿ ಚಿಕಿತ್ಸೆ ನೀಡಿರುವುದಾಗಿ ಇದೇ ವೇಳೆ ತಿಳಿಸಿದರು.

**28 ಅತ್ಯುತ್ತಮ ವಿದ್ಯಾರ್ಥಿಗಳನ್ನು ವಿವಿಧ ವಿಭಾಗಗಳ ಹಿನ್ನೆಲೆಯಲ್ಲಿ ಗೌರವ**

# ಸಂತ ಜೋಸೆಫರ ಕಾಲೇಜಿನಲ್ಲಿ 13ನೇ ಪದವಿ ಪ್ರಧಾನ

ಮೈಸೂರು: ಮೈಸೂರು ಡಯೋಸಿಷನ್ ಎಜುಕೇಷನಲ್ ಸೊಸೈಟಿಯ ಅಂಗ ಸಂಸ್ಥೆಯಾದ ಸಂತ ಜೋಸೆಫರ ಪ್ರಥಮ ದರ್ಜೆ ಕಾಲೇಜಿನಲ್ಲಿ 13ನೇ ಪದವಿ ಪ್ರಧಾನ ಸಮಾರಂಭ ಕಾಲೇಜಿನ ಆವರಣದಲ್ಲಿ ಸಂಭ್ರಮದಿಂದ ಆಯೋಜಿಸಲಾಯಿತು.

ಮೈಸೂರು ಡಯೋಸಿಷನ್ ಎಜುಕೇಷನಲ್ ಸೊಸೈಟಿಯ ಅಧ್ಯಕ್ಷ ಹಾಗೂ ಮೈಸೂರು ಧರ್ಮಕ್ಷೇತ್ರದ ಧರ್ಮಾಧ್ಯಕ್ಷ ಡಾ.ಎಸ್.ಜೆ.ಫ್ರಾನ್ಸಿಸ್ ಸೆರಾವೊ ಕಾರ್ಯಕ್ರಮದ ಅಧ್ಯಕ್ಷೀಯ ಭಾಷಣದಲ್ಲಿ ನಮ್ಮ ಕಾಲೇಜು ಕೇವಲ ಶೈಕ್ಷಣಿಕ ಸಾಧಕರನ್ನು ಮಾತ್ರವಲ್ಲದೆ, ಮಾನಸಿಕವಾಗಿ ಸಮತೋಲನ ಮತ್ತು ಬೌದ್ಧಿಕವಾಗಿ ಸೃಜನಶೀಲರಾದ ಪದವೀಧರರನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡುತ್ತಿದೆ. ಜೀವನದಲ್ಲಿ ಸಾಧಿಸಬೇಕಾದ ನಿರ್ದಿಷ್ಟ ಗುರಿಗಳತ್ತ ಗಮನಹರಿಸುವ ಮಹತ್ವವನ್ನು ಸ್ಪಷ್ಟಪಡಿಸಿದರು. ವಿದ್ಯಾರ್ಥಿಗಳು ಕೇವಲ ಅಧಿಕಾರ ಮತ್ತು ಕ್ಷಣಿಕ ಸುಖದ ಹಿಂದೆ ಹೋಗದೆ. ಪರಿಪೂರ್ಣ ಜೀವನವನ್ನು ರೂಪಿಸಿಕೊಳ್ಳುವತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದರು.



ಮೈಸೂರು ವಿಶ್ವವಿದ್ಯಾನಿಲಯದ ಬಿ.ಐ.ಎಂ.ಎಸ್ ನ ನಿವೃತ್ತ ಪ್ರಾಧ್ಯಾಪಕ ಡಾ.ಡಿ.ಆನಂದ್ ಮಾತನಾಡಿ, ಪದವಿ ಪಡೆದ ನಂತರ ಯುವಕರು ಸಾಮಾಜಿಕ-ನಾಗರೀಕ ಜವಾಬ್ದಾರಿಗಳನ್ನು ಸ್ವೀಕರಿಸಲು ಸಿದ್ಧರಿರಬೇಕು. ದೇಶದ ಭವಿಷ್ಯವು ಯುವಕರ ಮೇಲೆ ಅವಲಂಬಿತವಾಗಿದ್ದು, ಯುವಕರನ್ನು ಸಮಾಜವು ಮುಕ್ತ ಕಣ್ಣುಗಳಿಂದ ನೋಡುತ್ತಿರುತ್ತದೆ. ಹಾಗಾಗಿ ನೀವು ಎಚ್ಚರದಿಂದಿರಬೇಕೆಂದು ಹೇಳಿದರು.

ಎಂ.ಡಿ.ಇ.ಎಸ್‌ನ ಕಾರ್ಯದರ್ಶಿ ಎಡ್ವರ್ಡ್ ವಿಲಿಯಂ ಸಲ್ಡಾನ್ಹಾ, ಖಜಾಂಚಿ ನವೀನ್ ಕುಮಾರ್, ಕಾಲೇಜಿನ ವಾಣಿಜ್ಯ ವಿಭಾಗದ ಮುಖ್ಯಸ್ಥೆ ಎನ್. ಚಂದ್ರಕಲಾ ಇನ್ನಿತರರು ಉಪಸ್ಥಿತರಿದ್ದರು. 28 ಅತ್ಯುತ್ತಮ ವಿದ್ಯಾರ್ಥಿಗಳನ್ನು ವಿವಿಧ ವಿಭಾಗಗಳ ಹಿನ್ನೆಲೆಯಲ್ಲಿ ಗೌರವಿಸಲಾಯಿತು. ಶೈಕ್ಷಣಿಕ ಉತ್ಕೃಷ್ಟತೆಗಾಗಿ ಪ್ರೊ.ಮಣಿ ಸಿ.ಮ್ಯಾಥ್ಯೂ, ಎಂ. ಪಲ್ಲವಿ, ವೈ.ಎಸ್.ಮೋಕ್ಷಾ, ಕೆ.ವಿ.ಇಂಚರ, ಜಿ.ತ್ರಿಶಾ ಪಡೆದಿರುತ್ತಾರೆ. ಉತ್ತಮ ವಿದ್ಯಾರ್ಥಿಯಾಗಿ ಸುಮನ್, ಟಿ.ಪೌಲಿನ್, ಎಂ.ಎಂ.ಸಂಜನಾ ದಮಯಂತಿ, ಆರ್.ದರ್ಶನ್ ಪ್ರಶಸ್ತಿ ಪಡೆದರು. ಸಾಂಸ್ಕೃತಿಕ ವಿಭಾಗದಲ್ಲಿ ಆರ್.ಸಿಂಚನಾ, ರೋಷನ್ ಡೆನೆಲ್ಡಿ ಆಲ್ಮೇಡಾ, ಕ್ರೀಡಾ ವಿಭಾಗದಲ್ಲಿ ಪೃಥ್ವಿ ಪಿ ಶೆಟ್ಟಿ, ಎನ್.ಎಲ್.ದುರ್ಗಾಭವಾನಿ, ಹಿಶಿತಾ ಸೋಮಯ್ಯ, ಎನ್.ಸಿ.ಸಿ ವಿಭಾಗದಲ್ಲಿ ಟಿ.ಪಿ.ಪಲ್ಲವಿ, ಟಿ.ಎಸ್.ವಿನಂತಿ, ರಕ್ಷಾ ತಂಗಮ್ಮ ಮತ್ತು ಪಿ.ಎನ್.ಮೋಕ್ಷ್ ಪಡೆದರು.

# ಸ್ತ್ರೀಯರ ಬಗ್ಗೆ ಕಾಳಜಿ ಇದ್ದರೆ ಸಂಸತ್‌ನಲ್ಲೇ ಮೀಸಲಾತಿ ಜಾರಿಗೊಳಿಸಲಿ

ರಾಮನಗರ: ಬಿಜೆಪಿಗೆ ನಿಜವಾಗಿಯೂ ಮಹಿಳೆಯರ ಬಗ್ಗೆ ರಾಜಕೀಯ ಕಾಳಜಿ ಇದ್ದರೆ ಪ್ರಸ್ತುತ ಲೋಕಸಭೆಯ 543 ಸ್ಥಾನಗಳಲ್ಲೇ ಮಹಿಳಾ ಮೀಸಲಾತಿಯನ್ನು ಜಾರಿಗೊಳಿಸಲಿ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಕೋಕಿಲಾ ರಾಣಿ ಸವಾಲು ಮಾಡಿದ್ದಾರೆ.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. 2023ರಲ್ಲಿ ಸಂಸತ್ ನಲ್ಲಿ ಮಹಿಳಾ ಮೀಸಲಾತಿ ಮಸೂದೆ ಅಂಗೀಕಾರಗೊಂಡಿದೆ. ಅದನ್ನು ಜಾರಿ ಮಾಡಿ ತೋರಿಸಲಿ ಎಂದರು. ಕಾಂಗ್ರೆಸ್ ಎಂದಿಗೂ ಮಹಿಳಾ ಮೀಸಲಾತಿಯ ಪರ ಇದೆ. ವಿರೋಧ ಪಕ್ಷಗಳಿಗೆ ಮಹಿಳಾ ವಿರೋಧಿಗಳೆಂಬ ಹಣೆ ಪಟ್ಟಿ ಕಟ್ಟುವ ಸಲುವಾಗಿಯೇ ಎನ್ ಡಿಎ ನೇತೃತ್ವದ ಕೇಂದ್ರ ಸರ್ಕಾರ ಮಹಿಳಾ ಮೀಸಲಾತಿ ಮಸೂದೆ ಜೊತೆಗೆ ಕ್ಷೇತ್ರ ಮರು ವಿಂಗಡಣೆಯನ್ನು ಸೇರಿಸಿ ಸಂವಿಧಾನದ ತಿದ್ದುಪಡಿಗೆ ಮುಂದಾಗಿ ವಿಫಲವಾಯಿತು. ಇದೊಂದು ಬಿಜೆಪಿಯ ರಾಜಕೀಯ ಗಿಮಿಕ್ ಎಂದು ಜರಿದರು.

ಆದರೆ, ಪಂಚರಾಜ್ಯಗಳ ಚುನಾವಣೆ ನಡೆಯುತ್ತಿರುವ ಸಮಯದಲ್ಲಿ ಮಹಿಳಾ ಮೀಸಲಾತಿ ಮಸೂದೆ ಜೊತೆಗೆ ಕ್ಷೇತ್ರ ಪುನರ್ ವಿಂಗಡಣೆ ಸೇರಿಸಿದ್ದೇಕೆ ಎಂದು ಅವರು ಪ್ರಶ್ನಿಸಿದರು. ಮಸೂದೆಗೆ ಸೋಲಾಗುತ್ತಿದ್ದಂತೆ ಬಿಜೆಪಿಗರು ಮಾಡಿದ ತಪ್ಪನ್ನು ಕಾಂಗ್ರೆಸ್ಸಿಗರ ಮೇಲೆ ಹೊರಿಸುತ್ತಿದ್ದಾರೆ ಎಂದು ಟೀಕಿಸಿದರು.



ಎನ್ ಡಿಎ ಸರ್ಕಾರ 2027ರ ಜನಗಣತಿ ಆಧರಿಸಿ ಕ್ಷೇತ್ರ ಮರು ವಿಂಗಡಣೆ ಮಾಡಲಿ, ಅದನ್ನು ಬಿಟ್ಟು ತನ್ನ ಅನುಕೂಲಕ್ಕೆ ತಕ್ಕಂತೆ 2029ರ ಲೋಕಸಭಾ ಚುನಾವಣೆ ಗಮನದಲ್ಲಿಟ್ಟುಕೊಂಡು ರಾಜಕಾರಣ ಮಾಡುತ್ತಿರುವುದು ಸರಿಯಲ್ಲ ಎಂದು ಕೋಕಿಲಾ ರಾಣಿ ಕಿಡಿಕಾರಿದರು.

### 2011ರ ಜನಗಣತಿ ಆಧರಿಸಿ ಡಿಲಿಮಿಟೇಷನ್ ಏಕೆ? ಕಲ್ಪನಾ ಶಿವಣ್ಣ

ಕೆಪಿಸಿಸಿ ಸದಸ್ಯೆ ಕಲ್ಪನಾ ಶಿವಣ್ಣ ಮಾತನಾಡಿ, 2023ರಲ್ಲೇ ಲೋಕಸಭೆ ಮತ್ತು ರಾಜ್ಯ ಸಭೆಗಳಲ್ಲಿ ಪಾಸಾಗಿ ರಾಷ್ಟ್ರಪತಿಯಿಂದ ಅನುಮೋದನೆಗೊಂಡು ಗೆಜೆಟ್ಟಾದ ಕಾಯ್ದೆಯನ್ನು 2026ರ ಎಪ್ರಿಲ್ 16ರ ತನಕ ನೋಟಿಫಿಕೇಶನ್ ಮಾಡಲಿಲ್ಲವೇಕೆ. ಮಹಿಳಾ ಮೀಸಲಾತಿಯನ್ನು ತ್ವರಿತವಾಗಿ ಜಾರಿ ಮಾಡುವ ಉದ್ದೇಶದಿಂದಲೇ 2026ರ ಸಂವಿಧಾನ ತಿದ್ದುಪಡಿ ಮಸೂದೆ ತಂದಿದ್ದಲ್ಲಿ ಅದಕ್ಕೆ 2011ರ ಜನಗಣತಿ ಆಧರಿಸಿ ಡಿಲಿಮಿಟೇ?ನ್ ಮಾಡುವ ಕುತಂತ್ರದ ಉಪ ?ರತ್ತುಗಳನ್ನು ಸೇರಿಸಿದ್ದೇಕೆ ಎಂದರು.

ಮಹಿಳಾ ಮೀಸಲಾತಿಯೊಳಗೆ ಒಬಿಸಿಗಳಿಗೆ ಒಳಮೀಸಲಾತಿ ಇಲ್ಲವೆಂಬ ಆಕ್ಷೇಪಗಳಿಂದಾಗಿ ಮಹಿಳಾ ಮೀಸಲಾತಿ ಅನುಮೋದನೆಗೊಳ್ಳುತ್ತಿರಲಿಲ್ಲ. ಇದು ಗೊತ್ತಿದ್ದರೂ ಬಿಜೆಪಿ ಸರ್ಕಾರ , ಒಬಿಸಿ ಒಳಮೀಸಲಾತಿ ಕೊಟ್ಟು ಮಹಿಳಾ ಮೀಸಲಾತಿ ಜಾರಿಗೆ ತರುವ ಪ್ರಯತ್ನವನ್ನು ಮಾಡಲಿಲ್ಲ. ಆದರೆ, ಮಹಿಳಾ ಮೀಸಲು ಮಸೂದೆ ಜೊತೆಗೆ ಕ್ಷೇತ್ರ ಮರು ವಿಂಗಡಣೆ ಸೇರಿಸಿ ದೇಶವನ್ನು ಒಡೆಯುವ ಹುನ್ನಾರ ಮಾಡಿತು. ಅದನ್ನು ವಿಫಲಗೊಳಿಸುವ ಮೂಲಕ ಕಾಂಗ್ರೆಸ್ ನೇತೃತ್ವದ ಇಂಡಿಯಾ ಕೂಟ ದೇಶದ ಐಕ್ಯತೆಯನ್ನು ಕಾಪಾಡಿತು ಎಂದು ಹೇಳಿದರು. ಕಾರ್ಮಿಕ ಘಟಕದ ಜಿಲ್ಲಾಧ್ಯಕ್ಷ ಪುಟ್ಟರಾಜು ಮಾತನಾಡಿ 2023ರಲ್ಲಿಯೇ ಕಾಂಗ್ರೆಸ್ ಸೇರಿದಂತೆ ಸರ್ವ ಪಕ್ಷಗಳ ಸರ್ವಾನುಮೋದನೆಯೊಂದಿಗೆ ಸಂವಿಧಾನಕ್ಕೆ ತಿದ್ದುಪಡಿ ತಂದು ಮಹಿಳಾ ಮೀಸಲಾತಿಯನ್ನು ಕಾನೂನು ಮಾಡಿದ ಮೇಲೆ ಹೊಸ ಸಂವಿಧಾನ ತಿದ್ದುಪಡಿಯ ಅಗತ್ಯವೇನಿತ್ತು. ಆ ಕಾಯ್ದೆಯನ್ನು ನೋಟಿಫಿಕೇಶನ್ ಏಕೆ ಮಾಡಿಲ್ಲ. ತಮ್ಮನ್ನು ನಾರಿ ರಕ್ಷಕರು ಎಂದು ಹೇಳಿಕೊಳ್ಳುವ ಪ್ರಧಾನಿ ಮೋದಿರವರು ಮಣಿಪುರ, ಕಥುವಾ, ಉನ್ನಾವ್ ಗಳಲ್ಲಿ ಹಾಗೂ ಮಹಿಳಾ ಪೈಲ್ವಾನರಿಗೆ ಲೈಂಗಿಕ ಕಿರುಕುಳ ಪ್ರಕರಣಗಳಲ್ಲಿ ಬಿಜೆಪಿ ನಾಯಕರೇ ಮಹಿಳಾ ಪೀಡಕರಾಗಿದ್ದರೂ ಮೌನ ವಹಿಸಿದ್ದೇಕೆ ಎಂದರು. ಕೆಡಿಪಿ ಸದಸ್ಯೆ ಸುಕನ್ಯಾ, ಅನಿತಾ, ಭೂ ನ್ಯಾಯ ಮಂಡಳಿ ಸದಸ್ಯೆ ಲೇಖಾ, ಗ್ಯಾರಂಟಿ ಸಮಿತಿ ಸದಸ್ಯರಾದ ವಾಣಿ, ಪು?ಲತಾ, ನಾಗರಾಜು, ಆರಾಧನಾ ಸಮಿತಿ ಸದಸ್ಯೆ ಪದ್ಮಾವತಿ, ನಗರಸಭಾ ಮಾಜಿ ಸದಸ್ಯೆ ಹಸಿನಾ ಬಾನು ಇದ್ದರು.

# ಕುಡಿಯುವ ನೀರಿನ ಸಮಸ್ಯೆ ನಿವಾರಿಸಿ

## ಎಲ್ಲ ಅಗತ್ಯ ಕ್ರಮಗಳನ್ನು ವಹಿಸಲು ಸಚಿವ ರಾಮಲಿಂಗಾರೆಡ್ಡಿ ಸೂಚನೆ



ರಾಮನಗರ: ಜಿಲ್ಲೆಯ ಶಾಸಕರು ಮತ್ತು ಅಧಿಕಾರಿಗಳು ನೀಡಿದ ಮಾಹಿತಿಯನ್ನು ಆಧರಿಸಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಎಲ್ಲ ಅಗತ್ಯ ಕ್ರಮಗಳನ್ನು ವಹಿಸುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಪಂ ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ 2025–26ನೇ ಸಾಲಿನ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮಗಳೂ ಸೇರಿದಂತೆ) ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಭೆಯಲ್ಲಿ ಹಾಜರಿದ್ದ ಶಾಸಕರುಗಳು, ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಜಿಲ್ಲೆಯಲ್ಲಿ ಅವಶ್ಯವಿರುವ ಕಡೆ ಬೋರ್‌ವೆಲ್‌ಗಳು ಕೊರೆಯಲು ಅನುಮತಿ ನೀಡಬೇಕು, 15ನೇ ಹಣಕಾಸು ಯೋಜನೆಯಡಿ ಯಾವುದೇ ಅನುದಾನ ಬಿಡುಗಡೆಯಾಗದಿರುವುದರಿಂದ ಜಿಲ್ಲೆಯ ಟಾಸ್ಕ್‌ಫೋರ್ಸ್ ಸಮಿತಿ ಹಾಗೂ ಜಿಲ್ಲಾ ವಿಪತ್ತು ನಿಧಿ ಅನುದಾನವನ್ನು ಬಳಸಲು ಸೂಚನೆ ಕೊಡಬೇಕು ಎಂದು ಮಾಡಿದ ಮನವಿಗೆ ಸ್ಪಂದಿಸಿದ ಸಚಿವರು, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಚನೆ ಕೊಟ್ಟರು.

ಪ್ರಸ್ತುತ ಜಿಲ್ಲೆಯ 33 ಗ್ರಾಮ ಪಂಚಾಯಿತಿಗಳ 62 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗಿದ್ದು, ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಜ್ಞಾನಮೂರ್ತಿ ಎನ್.ಕೆ. ಅವರು ಸಭೆಯ ಗಮನ ಸೆಳೆದರು, ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ಪ್ರಸಕ್ತ ವರ್ಷ ಬೇಸಿಗೆ ತೀವ್ರವಾಗಿದ್ದು, ಈಗಾಗಲೇ ಜಿಲ್ಲೆಯ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿದೆ. ಮುಂಬರುವ ದಿನಗಳಲ್ಲಿ ನೀರಿನ ಸಮಸ್ಯೆ ಮತ್ತಷ್ಟು ಎದುರಾಗುವ ಸಂಭವವಿರುವುದರಿಂದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಅಗತ್ಯ ಕ್ರಮ ವಹಿಸಬೇಕು ಎಂದರು.

### ದೂರುಗಳಿಗೆ ಅವಕಾಶ ಕೊಡಬೇಡಿ, ಆರೋಗ್ಯ ಇಲಾಖಾಧಿಕಾರಿಗಳಿಗೆ ಸೂಚನೆ

ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು ಜಿಲ್ಲೆಯಲ್ಲಿರುವ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ, ಔಷಧಿ ಕೊರತೆ, ವೈದ್ಯಕೀಯ ಪರಿಕರಗಳ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಆಸ್ಪತ್ರೆಗಳಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಬೇಕು. ಯಾವುದೇ ದೂರುಗಳು ಬಾರದಂತೆ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಎಲ್ಲಾ ರೀತಿಯ ಕ್ರಮಗಳನ್ನು ವಹಿಸುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ನಿರ್ದೇಶಿಸಿದರು.

### ದರ್ಖಾಸ್ತು ಪೋಡಿ: ಅಧಿಕಾರಿಗಳ ಬಗ್ಗೆ ಬಾಲಕೃಷ್ಣ ದೂರು

ಸಭೆಯಲ್ಲಿ ಹಾಜರಿದ್ದ ಮಾಗಡಿ ಕ್ಷೇತ್ರದ ಶಾಸಕ ಎಚ್.ಸಿ.ಬಾಲಕೃಷ್ಣ, ಜಿಲ್ಲೆಯಲ್ಲಿ ದರ್ಖಾಸ್ತು ಪೋಡಿ ಆಂದೋಲನ, ಪೌತಿ ಖಾತೆ ಆಂದೋಲನ ಸೇರಿದಂತೆ ಇನ್ನಿತರ ಕಾರ್ಯಕ್ರಮಗಳು ನಡೆಯುವಾಗ ಸಾರ್ವಜನಿಕರಿಗೆ, ಜನಪ್ರತಿನಿಧಿಗಳಿಗೆ ಮಾಹಿತಿ ನೀಡಿದರೆ ಇದರಿಂದ ಸಾರ್ವಜನಿಕರಿಗೆ ಉಪಯೋಗವಾಗಲಿದೆ ಜಮೀನಿನ ಪೋಡಿ, ಪಹಣಿ, ಇಂಡೀಕರಣ ಇನ್ನಿತರ ದಾಖಲೆಗಳಿಗೆ ಸಂಬಂಧಿಸಿದಂತೆ ಗ್ರಾಮ ಲೆಕ್ಕಾಧಿಕಾರಿಗಳು, ಕಂದಾಯ ನಿರೀಕ್ಷಕರು ನೀಡಿದ ವರದಿಗೆ ತಹಶೀಲ್ದಾರರು ಯಾವುದೇ ಕ್ರಮ ಕೈಗೊಳ್ಳದಿರುವುದು ಜನರಿಗೆ ತೊಂದರೆ ಉಂಟು ಮಾಡುತ್ತಿದೆ ಎಂದು ಅಸಮಧಾನ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಅಧಿಕಾರಿಗಳು ಕ್ಷೇತ್ರ ಭೇಟಿ ನೀಡಿ ಪರಿಶೀಲಿಸಬೇಕು. ಕಡತಗಳನ್ನು ಶೀಘ್ರವಾಗಿ ವಿಲೇ ಮಾಡುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯನಿರ್ವಹಿಸಬೇಕು ಎಂದು ಭೂ ಮಾಪನಾ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ ಅಧಿಕಾರಿಗಳಿಗೆ ಹಾಗೂ ತಹಶೀಲ್ದಾರರಿಗೆ ಸೂಚಿಸಿದರು.

ಸ್ಮಶಾನ ಭೂಮಿ ಲಭ್ಯತೆ ಕುರಿತು ಪರಿಶೀಲಿಸಿದ ಸಚಿವರು ಜಿಲ್ಲೆಯ ಎಲ್ಲಾ 838 ಕಂದಾಯ ಗ್ರಾಮಗಳಿಗೂ ಸ್ಮಶಾನ ಭೂಮಿ ಇದೆ. ಹೆಚ್ಚು ಜನಸಂಖ್ಯೆ ಇದ್ದಲ್ಲಿ ಮತ್ತೊಂದು ಸ್ಮಶಾನ ಭೂಮಿ ಒದಗಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಸಭೆಯಲ್ಲಿ ಮಾಹಿತಿ ನೀಡಿದರು. ಅವಶ್ಯವಿರುವ ಕಡೆ ಮತ್ತೊಂದು ಸ್ಮಶಾನ ಭೂಮಿಗೆ ಪ್ರಸ್ತಾವನೆ ಕಳುಹಿಸುವಂತೆ ಸಚಿವರು ತಿಳಿಸಿದರು. ಸಂಧ್ಯಾ ಸುರಕ್ಷಾ, ವಿಧವಾವೇತನ, ವಿಕಲಚೇತನರ ಮಾಸಾಶನ ಸೇರಿದಂತೆ ಇನ್ನಿತರ ಪಿಂಚಣಿ ಯೋಜನೆಗಳ ಸೌಲಭ್ಯ ಕೋರಿ ಸಲ್ಲಿಕೆಯಾಗುವ ಅರ್ಜಿಗಳಿಗೆ ಶೀಘ್ರ ಸ್ಪಂದಿಸಿ ಸೌಲಭ್ಯ ಕಲ್ಪಿಸಬೇಕೆಂದು ಸೂಚಿಸಿದರು.

ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ 2018–19ನೇ ಸಾಲಿನಿಂದ ಪ್ರಸಕ್ತ ಸಾಲಿನ ವರೆಗೆ ಗಂಗಾ ಕಲ್ಯಾಣ ಯೋಜನೆಯಡಿ ಕಲ್ಪಿಸಲಾಗುವ ಸೌಲಭ್ಯವನ್ನು ಪೂರ್ಣಗೊಳಿಸಿರುವುದಿಲ್ಲ. ಅರ್ಹ ಫಲಾನುಭವಿಗಳಿಗೆ ಬೋರ್ವೆಲ್ ಹಾಕಿಸಿಕೊಡಲು ಕಳೆದ ಆರ್ಥಿಕ ವರ್ಷ ಟೆಂಡರ್ ಕರೆದಿರುವುದಿಲ್ಲ ರಾಜ್ಯಮಟ್ಟದಲ್ಲಿ ಆಗಬೇಕಾದ ಕಾರಣ ಸಂಬಂಧಿಸಿದ ಸಚಿವರೊಂದಿಗೆ ಪತ್ರ ಬರೆದು ಚರ್ಚಿಸುವುದಾಗಿ ತಿಳಿಸಿದರು.

### ಸುರಕ್ಷಿತ ಸಂಚಾರ: ಕ್ರಮಕ್ಕೆ ಎಂ.ಎಲ್.ಸಿ. ಸುಧಾಮ್‌ದಾಸ್ ಆಗ್ರಹ

ವಾಹನಗಳ ಹಾಗೂ ಪಾದಚಾರಿಗಳ ಸುಗಮ ಹಾಗೂ ಸುರಕ್ಷಿತ ಸಂಚಾರಕ್ಕೆ ಅನುವಾಗಲು ರಸ್ತೆ ಬದಿಗಳಲ್ಲಿ ಬೆಳೆದಿರುವ ಗಿಡಗಳನ್ನು ಸ್ವಚ್ಛಗೊಳಿಸುವುದು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಾಗೂ ಲೋಕೋಪಯೋಗಿ ಇಲಾಖೆ ಜವಾಬ್ದಾರಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಸುಧಾಮ್ ದಾಸ್ ಅವರು ಪ್ರಸ್ತಾಪಿಸಿದಾಗ ಜಿಲ್ಲೆಯಲ್ಲಿರುವ ಎಲ್ಲಾ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯರಸ್ತೆಗಳ ಬದಿಗಳಲ್ಲಿ ಬೆಳೆದಿರುವ ಜಂಗಲ್‌ಅನ್ನು ತೆರವುಮಾಡಿ, ಡಾಂಬರು ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳನ್ನು ಮುಚ್ಚಿ ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರಿಗೆ ಇಲಾಖೆ ಅಧಿಕಾರಿಗಳು ಪರೀಕ್ಷಾ ವೇಳಾ ಸಮಯದಲ್ಲಿ ಶಾಲಾ ಮಕ್ಕಳ ವಾಹನಗಳನ್ನು ತಡೆದು ಪರಿಶೀಲಿಸುವುದು ಕಂಡು ಬಂದಿದೆ. ಇದರಿಂದ ಶಾಲಾ ಮಕ್ಕಳು ಪರೀಕ್ಷೆಗೆ ತೊಂದರೆ ಉಂಟಾಗುವ ಬಗ್ಗೆ ದೂರುಗಳು ಬಂದಿದೆ. ಮುಂದಿನ ದಿನಗಳಲ್ಲಿ ಶಾಲಾ ಮಕ್ಕಳಿಗೆ ತೊಂದರೆಯಾಗದಂತೆ ಸಾರಿಗೆ ಇಲಾಖೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಜಿಲ್ಲೆಯಲ್ಲಿ ಅವಶ್ಯವಿರುವ ಕಡೆ ಕೆ.ಎಸ್.ಆರ್.ಟಿ.ಸಿ, ಬಿ.ಎಂ.ಟಿ.ಸಿ ಬಸ್‌ಗಳ ವ್ಯವಸ್ಥೆಗಳನ್ನು ಈಗಾಗಲೇ ಕಲ್ಪಿಸಲಾಗಿದೆ ಮತ್ತಷ್ಟು ಪ್ರಸ್ತಾವನೆಗಳು ಬಂದಲ್ಲಿ ಅಗತ್ಯತೆ ಹಾಗೂ ಬೇಡಿಕೆಗಳಿಗನುಗುಣವಾಗಿ ಬಸ್ ಸೌಕರ್ಯ ಕಲ್ಪಿಸಲಾಗುವುದು ಎಂದು ಹೇಳಿದರು.

ವಿವಿಧ ಇಲಾಖೆಗಳ ಹಲವು ಯೋಜನೆಗಳಡಿ ಜಿಲ್ಲೆಯ ತಾಲ್ಲೂಕುಗಳಿಗೆ ಗುರಿಗಳನ್ನು ನಿಗಧಿಪಡಿಸುವಾಗ ತಾಲ್ಲೂಕು ಜನಪ್ರತಿನಿಧಿಗಳಿಂದ ತಾರತಮ್ಯ ದೂರುಗಳು ಬಂದಿದೆ ಇನ್ಮುಂದೆ ಎಲ್ಲಾ ಯೋಜನೆಗಳಡಿ ಫಲಾನುಭವಿಗಳ ಯೋಜನೆಗಳನ್ನು ಎಲ್ಲಾ ತಾಲ್ಲೂಕುಗಳಿಗೂ ಸಮವಾಗಿ ಹಂಚಿಕೆ ಮಾಡಬೇಕು. ಕೆಲವೊಂದು ಬಾರಿ ಮಾತ್ರ ಬೇಡಿಕೆ ಹಾಗೂ ಅವಶ್ಯತೆಕಗಳಿಗನುಣವಾಗಿ ಹಂಚಿಕೆ ಮಾಡಬೇಕು ಎಂದು ಸಚಿವರು ತಿಳಿಸಿದರು.

ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಇಕ್ಬಾಲ್ ಹುಸೇನ್, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್, ವಿಧಾನಪರಿಷತ್ ಸದಸ್ಯರಾದ ಸುಧಾಮ್ ದಾಸ್, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರಾದ ಸೂರಜ್ ಹೆಗಡೆ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷರಾದ ಗಂಗಾಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಅನ್ಮೋಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್‌ಗೌಡ, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ವೇದಿಕೆಯಲ್ಲಿದ್ದರು.

ಕೆಡಿಪಿ ಸಭೆಯ ನಾಮನಿರ್ದೇಶಿತ ಸದಸ್ಯರಾದ ಗುರುಮೂರ್ತಿ, ಮುಕುಂದ, ಸುಕನ್ಯಾ, ದೌಲತ್ ಪಾಷ ಅವರು ವಿವಿಧ ಸಮಸ್ಯೆಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿದರು.

## ಕಾಡಾನೆ ದಾಳಿ ತಪ್ಪಿಸಲು ಅರಣ್ಯ ಇಲಾಖಾಧಿಕಾರಿಗಳಿಗೆ ಸಚಿವರ ಸೂಚನೆ

**ಕೆ.ಡಿ.ಪಿ ಸಭೆಯ ಆರಂಭದಲ್ಲಿ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ, ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ನಿರಂತರವಾಗಿ ಕಾಡಾನೆಗಳ ದಾಳಿ ಹೆಚ್ಚಾಗಿದ್ದು, ರೈತರುಗಳಿಗೆ ನಷ್ಟ ಉಂಟಾಗುವುದರ ಜೊತೆಗೆ ಜೀವ ಹಾನಿಗಳಾಗುವ ಸಾಧ್ಯತೆ ಹೆಚ್ಚಾ ಗಿದೆ. ಆನೆ ದಾಳಿ ತಪ್ಪಿಸಲು ಅರಣ್ಯ ಇಲಾಖೆ ಅಧಿ ಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿ ದರು. ಇದಕ್ಕೆ ಪ್ರತಿಕ್ರಿಯಿಸಿದ ಡಿಸಿಎಫ್ ರಾಮ ಕೃಷ್ಣಯ್ಯ, ಜಿಲ್ಲೆಯ ಕನಕಪುರ ಹಾಗೂ ಚನ್ನಪಟ್ಟಣ ತಾಲ್ಲೂಕಿನ ಕಾಡಂಚಿನ 67 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಬ್ಯಾರಿಕೇಡ್ ನಿರ್ಮಿಸಲು ಉದ್ದೇಶಿಸ ಲಾಗಿದೆ. ಈ ಪೈಕಿ 46 ಕಿಲೋ ಮೀಟರ್ ವ್ಯಾಪ್ತಿ ಯಲ್ಲಿ ಈಗಾಗಲೇ ಬ್ಯಾರಿಕೇಡ್ ನಿರ್ಮಿಸಲಾಗಿದೆ ಎಂದು ಅವರು ಸಭೆಗೆ ಮಾಹಿತಿ ನೀಡಿದರು.**

## ಎಂಸಿಎಸ್ ಪ್ರೌಢ ಶಾಲೆಗೆ: ಶೇ.100 ಫಲಿತಾಂಶ







ಚಾಮರಾಜನಗರ: 2025–26ನೇ ಸಾಲಿನ ಎಸ್ ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಗರದ ಸೋಮವಾರ ಪೇಟೆಯ ಎಂ.ಸಿ.ಎಸ್. ಪ್ರೌಢಶಾಲೆಯು ಶೇ 100 ರಷ್ಟು ಫಲಿತಾಂಶ ಪಡೆದಿದ್ದು, ಪ್ರಾರಂಭದಿಂದಲ್ಲೂ ಶೇ.100 ರಷ್ಟು ಫಲಿತಾಂಶವನ್ನು ಪಡೆಯುತ್ತಾ ಬಂದಿದೆ.

ಈ ವರ್ಷವೂ ಶಾಲೆಯ 30 ಮಕ್ಕಳು ಪರೀಕ್ಷೆ ಬರೆದಿದ್ದು, 1 ವಿದ್ಯಾರ್ಥಿನಿ ಅತ್ಯುನ್ನತ ದರ್ಜೆಯಲ್ಲಿ, 10 ಮಕ್ಕಳು ಅತ್ಯುನ್ನತ ದರ್ಜೆಯಲ್ಲಿ, 8ಮಕ್ಕಳು ದ್ವಿತೀಯ ದರ್ಜೆಯಲ್ಲಿ 11 ಮಕ್ಕಳು ಉತ್ತೀರ್ಣರಾಗುವ ಮೂಲಕ ಶಾಲೆ ಕೀರ್ತಿ ತಂದಿದ್ದಾರೆ. ತೇರ್ಗಡೆ ಹೊಂದಿರುವ ಎಲ್ಲ ಮಕ್ಕಳಿಗೂ ಸಂಸ್ಥೆಯ , ಆಡಳಿತಾಧಿಕಾರಿ ಎಂ.ನಾಗರಾಜು ಪ್ರಾಂಶುಪಾಲ ಕೆ. ಶಶಿಧರಮೂರ್ತಿ ಮುಖ್ಯೋಪಾಧ್ಯಾಯ ಹೆಚ್.ಎಂ.ಮಹದೇವಸ್ವಾಮಿ, ಶಿಕ್ಷಕ ವೃಂದ,ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿದ್ದಾರೆ.

## ಫಾಸ್ಟ್ ಪುಡ್ ವ್ಯಾಪಾರಿ ಪುತ್ರಿ ಮಾನ್ವಿ ಸಾಧನೆ

ಮೈಸೂರು: ಮೇಟಗಳ್ಳಿ ಬಿಎಂಸಿ ನಗರದ ನಿವಾಸಿ ಫಾಸ್ಟ್ ಫುಡ್ ವ್ಯಾಪಾರಿ ಎ.ಎಸ್.ಸತೀಶ್ ಹಾಗೂ ಸೌಮ್ಯ ದಂಪತಿ ಪುತ್ರಿ ನಗರದ ನಿರ್ಮಲಾ ಪಬ್ಲಿಕ್ ಶಾಲೆಯ ಎ.ಎಸ್.ಮಾನ್ವಿ 625ಕ್ಕೆ 617 ಅಂಕ ಪಡೆಯುವ ಮೂಲಕ ಶಾಲೆಗೆ ಪ್ರಥಮ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ.



ಕನ್ನಡ (124), ಇಂಗ್ಲಿಷ್ (98), ಹಿಂದಿ (100), ಗಣಿತ (95), ವಿಜ್ಞಾನ (100), ಸಮಾಜ ವಿಜ್ಞಾನ(100) ಅಂಕಗಳನ್ನು ಪಡೆದುಕೊಂಡಿದ್ದಾರೆ. ಈ ಕುರಿತು ಮಾತನಾಡಿದ ಅವರು, ಈ ಫಲಿತಾಂಶ ಖುಷಿ ತಂದಿದೆ. ಹೆಚ್ಚು ಅಂಕ ಬರುವ ನಿರೀಕ್ಷೆಯಿತ್ತು. ಶಾಲಾ ಶಿಕ್ಷಕರು, ಪೋಷಕರ ಬೆಂಬಲವೇ ನನ್ನ ಸಾಧನೆಗೆ ಕಾರಣವಾಗಿದೆ. ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಿ ಐಎಎಸ್, ಕೆಎಎಸ್ ಆಗಬೇಕೆಂಬ ಹಂಬಲ ಇದೆ ಎಂದು ಸಂತಸ ಹಂಚಿಕೊಂಡರು.

## ಕುಡಿಯಲು ಪೀಡಿಸುತ್ತಿದ್ದ ಮಗನನ್ನೇ ಕೊಂದ ತಾಯಿ

ಮೈಸೂರು: ಕುಡಿಯಲು ಹಣಕ್ಕಾಗಿ ಪೀಡಿಸುತ್ತಿದ್ದ ಎರಡನೇ ಮಗನನ್ನು ಚಾಮುಂಡಿ ಬೆಟ್ಟ ರಸ್ತೆಯ ತಾವರೆ ಕಟ್ಟೆಯ ಬಳಿ ಕರೆತಂದು ಕಲ್ಲಿನಿಂದ ಜಜ್ಜಿ ಕೊಲೆ ಮಾಡಿದ ತಾಯಿಯನ್ನು ಪೊಲೀಸರು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ನಗರದ ಕೆಸರೆಯ ಕುರಿಮಂಡಿ ನಿವಾಸಿ ಮಂಜುಳಾ(60) ಬಂಧಿತ ಆರೋಪಿ. ರಮೇಶ್ (45) ಕೊಲೆಯಾದವರು. ತಾವರೆ ಕಟ್ಟೆಯ ಬಳಿ ಏ.14ರಂದು ಬೆಳಿಗ್ಗೆ ಅಪರಿಚಿತ ಶವ ಕೊಲೆಯಾದ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ನಜರ್‌ಬಾದ್ ಠಾಣೆಯ ಪೊಲೀಸ್ ಇನ್‌ಸ್ಪೆಕ್ಟರ್ ಎಂ. ಮಹದೇವಸ್ವಾಮಿ ನೇತೃತ್ವದ ತಂಡವು ಪ್ರಕರಣ ದಾಖಲಿಸಿಕೊಂಡು, ಸಿಸಿಟಿವಿ ಮೂಲಕ ಆರೋಪಿಯ ಚಲನ ವಲನ ಗಮನಿಸಿ ಗುರುವಾರ ಬಂಧಿಸಿದರು.

'ಆರೋಪಿಯ ಪತಿ ನಿಧನರಾಗಿದ್ದು, ತಾಯಿ ಹಾಗೂ ಅವಿವಾಹಿತ ಮಗ ಒಟ್ಟಿಗೇ ವಾಸಿಸುತ್ತಿದ್ದರು. ಮಹಿಳೆಯು ಜೀವನೋಪಾಯಕ್ಕೆ ಮನೆಕೆಲಸವನ್ನು ನೆಚ್ಚಿಕೊಂಡಿದ್ದರು. ಮದ್ಯವ್ಯಸನಿಯಾಗಿದ್ದ ಮಗ ಏ.13ರ ರಾತ್ರಿ ಹಣ ಕೊಡುವಂತೆ ಜಗಳವಾಡಿ ಹಿಂಸೆ ನೀಡಿದ್ದ. ಅದರಿಂದ ಬೇಸತ್ತ ಆಕೆ, ಏ.14ರಂದು ಬೆಳಿಗ್ಗೆ 8.30ರ ವೇಳೆ ರಿಕ್ಷಾದಲ್ಲಿ ಆತನನ್ನು ಕರೆತಂದು ದೊಡ್ಡ ಹಾಗೂ ಕಲ್ಲಿನಿಂದ ತಲೆಗೆ ಹೊಡೆದು ಕೊಂದರೆಂದು ವಿಚಾರಣೆ ವೇಳೆ ಗೊತ್ತಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ. ನಗರದ ವಿವಿಧೆಡೆ 200 ಸಿಸಿಟಿವಿ ಕ್ಯಾಮೆರಾಗಳಲ್ಲಿ ಇಬ್ಬರ ಚಲನವಲನ ಗಮನಿಸಿದ ಬಳಿಕ ಆಕೆಯನ್ನು ಸೆರೆಹಿಡಿಯಲಾಗಿದೆ' ಎಂದು ನಗರ ಪೊಲೀಸ್ ಆಯುಕ್ತ ಸೀಮಾ ಲಾಟ್ಕರ್ ತಿಳಿಸಿದರು.

## ಗ್ರೀನ್ ಬಡ್ ಆಸ್ತಿ ಹರಾಜು ಮಾಡಿ, ಹಣ ಹಿಂದುರಿಗಿಸುವಂತೆ ಆಗ್ರಹ.

ಚಾಮರಾಜನಗರ, ಗ್ರೀನ್‌ಬಡ್ಸ್ ಆಸ್ತಿ ಹರಾಜು ಮಾಡಿ. ಠೇವಣಿದಾರರಿಗೆ ಹಣಹಿಂದುರಿಗಿಸುವಂತೆ ಆಗ್ರಹಿಸಿ ಮೇ.5ರಂದು ಬೆಂಗಳೂರಿಗೆ ತೆರಳಿ ಪ್ರತಿಭಟನೆ ನಡೆಸಿ, ರಾಜ್ಯಸರ್ಕಾರದ ಗಮನಸೆಳೆಯಲು ಗ್ರೀನ್‌ಬಡ್ ಕಾರ್ಯಕರ್ತರು ಹಾಗೂ ಠೇವಣಿದಾರರ ಸಮಿತಿ ಜಿಲ್ಲಾಘಟಕದ ವತಿಯಿಂದ ನಗರದ ಪ್ರವಾಸಿಮಂದಿರದಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಯಿತು.

ಗ್ರೀನ್ ಬಡ್ಸ್ ಕಂಪನಿಯಲ್ಲಿ ಲಕ್ಷಾಂತರ ಮಂದಿ ಹಣ ಹೂಡಿಕೆಮಾಡಿ. ಮೋಸಹೋಗಿದ್ದಾರೆ. ಹಣ ಹಿಂಪಡೆಯುವ ಸಂಬಂಧ ಕಾರ್ಯಕರ್ತರು ಹಾಗೂ ಠೇವಣಿದಾರರ ಸಮಿತಿ ಅಸ್ತಿತ್ವಕ್ಕೆ ತರುವುದರ ಮೂಲಕ ರೈತಸಂಘಟನೆಗಳ ಜತೆಗೂಡಿ. ಹೋರಾಟ ನಡೆಸಲಾಯಿತು. ನಮ್ಮ ಹೋರಾಟದ ಫಲವಾಗಿ ರಾಜ್ಯಸರ್ಕಾರ ವಿಶೇಷ ಸಕ್ಷಮ ಪ್ರಾಧಿಕಾರ ರಚನೆ ಮಾಡಿ, ಗ್ರೀನ್ ಬಡ್ಸ್ ಕಂಪನಿಯ ಶೇ80 ರಷ್ಟು ಆಸ್ತಿಯನ್ನು ವಶಪಡಿಸಿಕೊಂಡಿದೆ. ಆದರೆ ಆಸ್ತಿಯನ್ನು ಹರಾಜು ಹಾಕಿ ಠೇವಣಿದಾರರಿಗೆ ಹಣಕೊಡಿಸುವ ಕಾರ್ಯಮಾಡಿಲ್ಲ, ಇದರಿಂದ ಕಾರ್ಯಕರ್ತರು ಆತಂಕಪಡುವ ಸ್ಥಿತಿ ಎದುರಾಗಿದೆ. ರಾಜ್ಯ ಸಕ್ಷಮ ಪಾಧಿಕಾರ ವತಪಡಿಸಿಕೊಂಡಿರುವ ಆಸ್ತಿಯನ್ನು

ಸಂದರ್ಭದಲ್ಲಿ ಮೈಸೂರು ಜಿಲ್ಲಾಧ್ಯಕ್ಷ ಜಗದೀಶ್, ನಂಜನಗೂಡು ತಾಲ್ಲೂಕು ಘಟಕದ ತಗಡೂರು ಮಹದೇವಪ್ಪ, ಚಾಮರಾಜನಗರ ಜಿಲ್ಲಾಧ್ಯಕ್ಷ ಎಸ್.ಎಂ.ಶ್ರೀಕಂಠಪಸಾದ್, ಉಪಾಧ್ಯಕ್ಷ ಮಹದೇವನಾಯಕ, ಯಳಂದೂರುಪಟಕದ ಸಡಕ್ಷರಿ, ಗುಂಡ್ಲುಪೇಟೆಘಟಕದ ಶಿವಮಲಪ್ಪ, ಕೃಷ್ಣರಾಜು, ಮಹದೇವಸ್ವಾಮಿ, ಠೇವಣಿದಾರರು ಹಾಜರಿದ್ದರು.

## ಕಕಜವೇದಿಕೆಯಿಂದ ರಾಜ್ ಹುಟ್ಟುಹಬ್ಬ ಆಚರಣೆ



ಚನ್ನಪಟ್ಟಣ: ವರನಟ ಡಾ.ರಾಜ್‌ಕುಮಾರ್‌ಅವರು ತಮ್ಮ ಅಭಿನಯದ ಮೂಲಕವೇ ನಾಡಪ್ರೇಮದ ಜೊತೆಗೆ ದಾನಧರ್ಮದ, ಮಾನವೀಯ ಮೌಲ್ಯಗಳ ಸಂದೇಶ ಸಾರಿದ್ದು ಅವರ ಹುಟ್ಟುಹಬ್ಬದ ಪ್ರಯುಕ್ತ ಬಿಸಿಲ ತಾಪದಿಂದ ಬಸವಳಿದ ಜನತೆಗೆ ನೀರು, ಮಜ್ಜಿಗೆ ವಿತರಣೆ ಮಾಡುವ ಸಂಕಲ್ಪಕ್ಕೆ ಮುಂದಾಗಿದ್ದೇವೆ ಎಂದು ಕಕಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಅಭಿಪ್ರಾಯಿಸಿದರು.

ಪಟ್ಟಣದ ಕಾವೇರಿ ವೃತ್ತದಲ್ಲಿ ಕಕಜವೇ, ರೇಷ್ಮೆ ಸೀಮೆ, ರಮೇಶ್‌ಪ್ರಿಂಟರ್ಸ್ ಹಾಗೂ ಸಮಾನ ಮನಸ್ಕರ ಮೂಲಕ ಶುಕ್ರವಾರ ಸಾರ್ವಜನಿಕರಿಗೆ ನೀರು, ಮಜ್ಜಿಗೆ ವಿತರಣೆ ಮಾಡಿ ಡಾ. ರಾಜ್‌ಹುಟ್ಟುಹಬ್ಬದ ಆಚರಿಸಿ ಮಾತನಾಡಿ, ವರುಣನ ಮುನಿಸಿನಿಂದ ಬಿಸಿಲಿನ ತಾಪ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಬಿಸಿಲ ತಾಪಕ್ಕೆ ಜನಜಾನುವಾರುಗಳು ನೀರಿನ ದಾಹ ತಣಿಸಲಾಗದೆ ಪರಿತಪಿಸುವಂತಾಗಿದೆ. ಎಂದರು.

ಸಮಾಜ ಸೇವಕರು ಹಾಗೂ ಡಾ. ರಾಜ್ ಅಭಿಮಾನಿಗಳಾದ ಎಲೇಕೇರಿ ರವೀಶ್, ಉದ್ಯಮಿ ಯು.ಪಿ. ಧರಣೀಶ್‌ಅವರು ಮಾತನಾಡಿದರು. ಸಂದರ್ಭದಲ್ಲಿ ಸಾರ್ವಜನಿಕರಿಗೆ ನೀರು, ಮಜ್ಜಿಗೆ ವಿತರಣೆ ಮಾಡಲಾಯಿತು. ಸಂದರ್ಭದಲ್ಲಿ ಮಂಗಳವಾರಪೇಟೆ ಬಿ.ಸಿ. ಯೋಗೇಶ್‌ಗೌಡ, ಕೃಷ್ಣಪ್ರಸಾದ್ ಮರಿಅಂಕೇಗೌಡ, ಬೀರೇಶ್, ಸಿದ್ದಪ್ಪಾಜಿ, ರಂಜಿತ್ ಗೌಡ, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ಕಾರ್ಪೊರೇಟರ್ ರವಿ, ಹೊಸದೊಡ್ಡಿ ರಮೇಶ್, ಅವಿನಾಶ್ ಪತ್ರಕರ್ತ, ನಿಂಗೇಗೌಡ, ಕೃಷ್ಣೇಗೌಡ, ಮಾಲೂರು ಗಂಗರಾಜು, ರಾಜು ವಿಠಲೇನಹಳ್ಳಿ, ಹೊಟ್ಟಿಗನಹೊಸಹಳ್ಳಿ ರಮೇಶ್, ಕಬಡ್ಡಿ ರಾಕೇಶ್, ಕುಮಾರ್ ಕುಂತೂರುದೊಡ್ಡಿ, ತಗಚಗೆರೆ ನಾಗೇಶ್, ಕೃಷ್ಣ ಚಕ್ಕೆರೆ, ಬಿಳಿಯಪ್ಪ ಮೋಳೆದೊಡ್ಡಿ, ಚೌ.ಪು.ಸ್ವಾಮಿ, ಚಂದ್ರು ಮಳೂರುಪಟ್ಟಣ, ಟಯೋಟ ಪ್ರಸನ್ನ, ಸಿ.ಸಿ. ವೆಂಕಟೇಗೌಡ ನಿವೃತ್ತ ಪ್ರಾಂಶುಪಾಳರು, ಮಂಜೇಶ್ ಶೆಟ್ಟಿಹಳ್ಳಿ, ಶಿವಕುಮಾರ್, ಕುಮಾರ್ ಇಗ್ಗಲೂರು, ಶಿವು ಇತರರು ಇದ್ದರು.

## ಭಗೀರಥರ ಪ್ರಯತ್ನ ಎಲ್ಲರಿಗೂ ಸ್ಪೂರ್ತಿ



ಚಾಮರಾಜನಗರ, ಮಹರ್ಷಿ ಭಗೀರಥರ ತತ್ವಾದರ್ಶಗಳು ಎಲ್ಲರಿಗೂ ಸ್ಪೂರ್ತಿಯಾಗಿದ್ದು ಇಂದಿನ ಪೀಳಿಗೆಗೆ ಅತ್ಯಂತ ಸ್ಪೂರ್ತಿದಾಯಕವಾಗಿದೆ ಎಂದು ತಾಲೂಕು ಉಪ್ಪಾರ ಸಂಘದ ಅಧ್ಯಕ್ಷ ಪಿ.ಲಿಂಗರಾಜು ಹೇಳಿದರು

ತಾಲೂಕಿನ ಬೂದಿತಿಟ್ಟು ಗ್ರಾಮದ ಉಪ್ಪಾರ ಸಮುದಾಯ ಭವನದಲ್ಲಿ ನಡೆದ ಶ್ರೀ ಮಹರ್ಷಿ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಮಾಡಿ ಮಾತನಾಡಿದರು.ಮಹರ್ಷಿ ಭಗೀರಥರ ಜೀವನವು ಛಲ, ದೃಢಸಂಕಲ್ಪ ಮತ್ತು ನಿಸ್ವಾರ್ಥ ಸೇವೆಗೆ ಸಾಕಾರ ರೂಪವಾಗಿದೆ. ಭಗೀರಥರು ಕಠಿಣ ತಪಸ್ಸಿನ ಮೂಲಕ ಸ್ವರ್ಗದಲ್ಲಿದ್ದ ಗಂಗೆಯನ್ನು ಭೂಮಿಗೆ ತಂದು, ತನ್ನ ಪೂರ್ವಜರ ಆತ್ಮಕ್ಕೆ ಶಾಂತಿ ಒದಗಿಸಿದರು. ಇದು ಅಸಾಧ್ಯವೆಂದು ತೋರುವ ಕೆಲಸವನ್ನು ದೃಢನಿರ್ಧಾರದಿಂದ ಸಾಧಿಸಬಹುದು ಎಂಬುದನ್ನು ತೋರಿಸುತ್ತದೆ ಎಂದರು.

ಉಪ್ಪಾರ ಸಮುದಾಯಕ್ಕೆ ಶಿಕ್ಷಣವೇ ಆಸ್ತಿಯಾಗಿರುವ ಕಾರಣದಿಂದ ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಿ ವಿದ್ಯಾವಂತರನ್ನಾಗಿ ಮಾಡಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ.ಮಾಜಿ ಉಪಾಧ್ಯಕ್ಷ ಪಿ.ಸಿದ್ದರಾಜು, ಯಜಮಾನರಾದ ಮಹೇಶ್, ಶಂಕರ್, ಅಂಕಪ್ಪ, ಮುಖಂಡರಾದ ಚಾವಡಶೆಟ್ಟಿ, ಮಹದೇವಶೆಟ್ಟಿ, ಲಿಂಗರಾಜು, ಮಹದೇವಶೆಟ್ಟಿ, ರಮೇಶ್, ಮಹದೇವಸ್ವಾಮಿ, ಮಹೇಶ್, ಸೋಮಣ್ಣ,ಶಾಂತರಾಜು ಇತರರು ಹಾಜರಿದ್ದರು.

**ಡಾ.ರಾಜ್‌ಕುಮಾರ್ ಅವರ ಪುತ್ಥಳಿಗೆ ಮಾಲಾರ್ಪಣೆ**

# ಕನ್ನಡಕ್ಕೆ ಗೌರವ ತಂದುಕೊಟ್ಟ ಮಹಾನ್ ಚೇತನ ರಾಜಕುಮಾರ್: ಕೆ.ಹರೀಶ್ ಗೌಡ



ಮೈಸೂರು: ಗೋಕಾಕ್ ಹೋರಾಟದಲ್ಲಿ ಭಾಗವಹಿಸಿ ಮಾತೃಭಾಷೆಗಯಾದ ಕನ್ನಡ ಭಾಷೆಗೆ ಗೌರವ ತಂದುಕೊಟ್ಟ ಮಹಾನ್ ಚೇತನ ಡಾ.ರಾಜಕುಮಾರ್ ಎಂದು ಶಾಸಕ ಕೆ.ಹರೀಶ್ ಗೌಡ ತಿಳಿಸಿದರು.

ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಡಾ.ರಾಜಕುಮಾರ್ ಜಯಂತಿ ಅಂಗವಾಗಿ ಡಾ:ರಾಜ್ ಕುಮಾರ್ ಉದ್ಯಾನವನದಲ್ಲಿ ಡಾ. ರಾಜ್ ಕುಮಾರ್ ಅವರ ಪುತ್ಥಳಿಗೆ ಮಾಲಾ ರ್ಪಣೆ ಮಾಡಿ ಮಾತನಾಡಿದರು. ಅಂದು ಡಾ. ರಾಜ್‌ಕುಮಾರ್ ಗೋಕಾಕ್ ಚಳವಳಿಯ ಮೂಲಕ ನಡೆಸಿದ ಹೋರಾಟವು ನಮ್ಮ ಮಾತೃಭಾಷೆಗೆ ಇಷ್ಟೊಂದು ಗೌರವ ಮತ್ತು ಬೆಲೆಯನ್ನು ತಂದು ಕೊಡಲು ಸಾಧ್ಯವಾ ಯಿತು ಎಂದು ತಮ್ಮ ಅನಿಸಿಕೆ ಯನ್ನು ವ್ಯಕ್ತಪಡಿಸಿ ದರು. ಕನ್ನಡ ನಾಡು, ನುಡಿ ಎಂದರೆ ಡಾ: ರಾಜ್ ಕುಮಾರ್ ಅವರಿಗೆ ಅತೀವ ಪ್ರೀತಿ ಅವರು ನಟಿಸಿದ ಚಲನಚಿತ್ರದಲ್ಲಿ ಮಾತ್ರವಲ್ಲ ಗೋಕಕ್ ಹೋರಾಟದಲ್ಲೂ ಕಾಣಬಹುದು. ಡಾ: ರಾಜ್ ಕುಮಾರ್ ಅವರಿಗೆ ಕನ್ನಡದ ಮೇಲಿದ್ದ ಅಭಿಮಾನ ಯುವಜನರಿಗೆ ಮಾದರಿಯಾಗಬೇಕು ಎಂದರು. ಡಾ.ರಾಜ್‌ಕುಮಾರ್ ಅವರು ನಟಿಸಿರುವ ಸಿನಿಮಾಗಳು ಮನರಂಜನೆಯ ಜೊತೆಗೆ ಒಂದು ನೀತಿಪಾಠವನ್ನು ತಿಳಿಸುತ್ತದೆ. ಅವರ ಸಿನಿಮಾಗಳ ನೀತಿಪಾಠದಿಂದ ಬಹಳಷ್ಟು ಜನರು ತಮ್ಮ ಜೀವನ ಶೈಲಿಯನ್ನು ಬದಲಾವಣೆ ಮಾಡಿಕೊಂಡು ಸಮಾ ಜಕ್ಕೆ ಮಾದರಿಯಾಗಿದ್ದಾರೆ. ಅವರ ಸಿನಿಮಾಗಳಲ್ಲಿದ್ದ ಸಂಭಾಷಣೆ ಮತ್ತು ಸಾಹಿತ್ಯದ ಸೊಗಡನ್ನು ಇಂದು ಬೇರೆ ಸಿನಿಮಾಗಳಲ್ಲಿ ಕಾಣಲು ಅಸಾಧ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಸಕ ಶ್ರೀವತ್ಸ ಮಾತನಾಡಿ ಡಾ.ರಾಜಕುಮಾರ್ ನಟನೆಯ ಜೊತೆ ಅವರ ವ್ಯಕ್ತಿತ್ವ ಜನರ ಮನಸ್ಸಿನಲ್ಲಿ ಇಂದಿಗೂ ಅಜರಾಮರ ರಾಗಿ ಉಳಿಯಲು ಸಾಧ್ಯವಾಗಿದೆ. ಅವರ ವ್ಯಕ್ತಿತ್ವ ಹಾಗೂ ಕನ್ನಡ ಭಾಷೆಯ ಮೇಲೆ ಅವರಿಗಿದ್ದ ಪ್ರೀತಿ ಪ್ರತಿಯೊಬ್ಬರಿಗೆ ದಾರಿದೀಪವಾಗಬೇಕು. ಡಾ.ರಾಜಕುಮಾರ್ ಅವರ ಚಿತ್ರಗಳು ಅತ್ಯಂತ ಶುದ್ಧವಾಗಿದ್ದು, ಕುಟುಂಬದ ಪ್ರತಿಯೊಬ್ಬರು ಒಟ್ಟಿಗೆ ಕುಳಿತು ನೋಡಬಹುದಾದಂತಹ ಚಿತ್ರಗಳಾಗಿರುತ್ತಿದ್ದವು. ಚಿಕ್ಕವಯಸ್ಸಿನಲ್ಲಿ ಹಳ್ಳಿಗಳಲ್ಲಿ ಟೆಂಟ್ ಥಿಯೇಟರ್‌ಗಳಲ್ಲಿ ಸಿನಿಮಾ ನೋಡುತ್ತಿದ್ದ ದಿನಗಳನ್ನು ನೆನಪಿಸಿಕೊಂಡರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕಿ ಎಸ್.ಎಚ್. ನಿರ್ಮಲ ಮಾತನಾಡಿ ಡಾ.ರಾಜ್ ಕುಮಾರ್ ಹಾಡಿ ರುವ ಹಾಡುಗಳು ರೋಮಾಂಚನ ಮೂಡಿಸುತ್ತದೆ. ಅವರ ನಟನೆಗೆ ಪದ್ಮಭೂಷಣ, ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪಡೆದರೂ ಅಹಂಕಾರ ತೋರದೆ ಅಭಿಮಾನಿಗಳನ್ನು 'ದೇವರು' ಎಂದು ಕರೆದರು. ಡಾ.ರಾಜ್ ಕುಮಾರ್ ಕುರಿತು ಗೀತಗಾಯನ ಕಾರ್ಯಕ್ರಮವನ್ನು ಡಾ.ಐ.ಡಿ. ಲೋಹಿತ್ ತಂಡದವರು ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲೆಯ ಡಾ.ರಾಜಕುಮಾರ್ ಅಭಿಮಾನಿ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ಉಪಾಧ್ಯಕ್ಷ ಗೋವಿಂದ ರಾಜು, ಗೌರವ ಸಲಹೆಗಾರರಾದ ಸಿದ್ದಪ್ಪ ಮತ್ತು ಸ್ವಾಮಿ, ಕಾರ್ಯದರ್ಶಿ ರಮೇಶ್, ಡಾ.ರಾಜ್ ಶಿವಸೈನ್ಯ ಅಭಿಮಾನಿಗಳ ಸಂಘದ ಅಧ್ಯಕ್ಷ ಬಿ.ಎನ್ ರವಿ, ಸದಸ್ಯರಾದ ಮಹೇಶ್, ದೊರೆ, ಮಂಜು ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ಮುನ್ನೆಚ್ಚರಿಕೆ, ಆರಂಭಿಕ ಪತ್ತೆಯೇ ಪ್ರಾಣರಕ್ಷೆಗೆ ದಾರಿ

### ಡಾ.ವಿನಯಕುಮಾರ್ ಮುತ್ತಗಿ




ಮೈಸೂರು: ಮುನ್ನೆಚ್ಚರಿಕೆ ಮತ್ತು ಆರಂಭಿಕ ಪತ್ತೆಯೇ ಪ್ರಾಣರಕ್ಷೆಗೆ ದಾರಿ ಎಂದು ಮೈಸೂರಿನ ಭಾರತ್ ಕ್ಯಾನ್ಸರ್ ಆಸ್ಪತ್ರೆಯ ಹಿರಿಯ ವಿಕಿರಣ ಕ್ಯಾನ್ಸರ್ ತಜ್ಞ ಡಾ.ವಿನಯಕುಮಾರ್ ಮುತ್ತಗಿ ಹೇಳಿದರು.

ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಆಯೋಜಿಸಿದ್ದ ತಲೆ ಮತ್ತು ಕುತ್ತಿಗೆ ಕ್ಯಾನ್ಸರ್ ಜಾಗೃತಿ ಮಾಸ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಿಗರೇಟ್, ಬೀಡಿ, ಗುಟ್ಕಾ ಮತ್ತು ತಂಬಾಕು ಅಗಿಯುವುದು ಕ್ಯಾನ್ಸರ್‌ಗೆ ಮುಖ್ಯ ಕಾರಣವಾಗಿದ್ದು, ಜನರಲ್ಲಿ ಇದರ ಬಗ್ಗೆ ಜಾಗೃತಿ ಮೂಡಿಸುವುದು ಅವಶ್ಯಕ, ತಲೆ ಮತ್ತು ಕುತ್ತಿಗೆಯ ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲಿ ಪತ್ತೆಹಚ್ಚಿದರೆ ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯವಿದೆ. ಜನರು ತಂಬಾಕು ಮತ್ತು ಮದ್ಯಪಾನದಂತಹ ವ್ಯಸನಗಳಿಂದ ದೂರವಿರಬೇಕು ಮತ್ತು ಸಮರ್ಪಕ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು, ಯಾವುದೇ ಅಸಹಜ ಲಕ್ಷಣಗಳು ಕಂಡುಬಂದಲ್ಲಿ ಕೂಡಲೇ ತಜ್ಞ ವೈದ್ಯರನ್ನು ಸಂಪರ್ಕಿಸಿ ತಪಾಸಣೆ ಮಾಡಿಸಿಕೊಳ್ಳುವುದು ಅತ್ಯಗತ್ಯ ಎಂದು ತಿಳಿಸಿದರು.

ಜೆಎಸ್‌ಎಸ್ ಆಸ್ಪತ್ರೆಯ ನಿರ್ದೇಶಕ ಡಾ.ಸಿ.ಪಿ.ಮಧು ಮಾತನಾಡಿ ಪ್ರತಿವರ್ಷ ಏಪ್ರಿಲ್ 3ನೇ ವಾರ ತಲೆ ಮತ್ತು ಕುತ್ತಿಗೆ ಕ್ಯಾನ್ಸರ್ ಜಾಗೃತಿ ದಿನವನ್ನಾಗಿ ಆಚರಿಸಲಾಗುತ್ತದೆ ಈ ವರ್ಷದ ಅಭಿಯಾನವು ಆರಂಭಿಕ ಪತ್ತೆ ಮತ್ತು ತಡೆಗಟ್ಟುವಿಕೆ ಜೀವ ಉಳಿಸುತ್ತದೆ ಎಂಬ ಆಶಯದೊಂದಿಗೆ ನಡೆಯುತ್ತಿದೆ ಎಂದರು, ಇತ್ತೀಚಿನ ದಿನಗಳಲ್ಲಿ ಈ ಕಾಯಿಲೆಗೆ ಉತ್ತಮ ಔಷಧಿಗಳು ಲಭ್ಯವಿದೆ ಕ್ಯಾನ್ಸರ್ ಎಂದರೆ ಭಯಭೀತರಾಗುವ ಅವಶ್ಯಕತೆ ಇಲ್ಲ ಚಿಕಿತ್ಸೆ ಪಡೆದು ಸಾಮಾನ್ಯರಂತೆ ಜೀವಿಸಬಹುದು ಹಾಗೂ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಕ್ಯಾನ್ಸರ್ ಕಾಯಿಲೆಗೆ ಉತ್ತಮ ಚಿಕಿತ್ಸೆ ಲಭ್ಯವಿದೆ ಎಂದು ತಿಳಿಸಿದರು.

ಜೆಎಸ್‌ಎಸ್ ಆಸ್ಪತ್ರೆಯ ವೈದ್ಯಕೀಯ ಆಂಕಾಲಾಜಿ ವಿಭಾಗದ ಪ್ರಾಧ್ಯಾಪಕ ಡಾ.ಪಿ.ಕೆ.ಕಿರಣ್ ಮಾತನಾಡಿ, ಈ ದಿನದ ಕಾರ್ಯಕ್ರಮದ ಉದ್ದೇಶ ತಲೆ ಮತ್ತು ಕುತ್ತಿಗೆಯ ಕ್ಯಾನ್ಸರ್ ಬಗ್ಗೆ ಅರಿವು ಮತ್ತು ಜಾಗೃತಿ ಮೂಡಿಸುವುದು, ಇವತ್ತಿನ ದಿನಗಳಲ್ಲಿ ದೇಹದಲ್ಲಿ ಯಾವುದೇ ಲಕ್ಷಣಗಳು ಕಂಡು ಬಂದರೆ ಉದಾಹರಣೆಗೆ ಬಾಯಲ್ಲಿ ಹುಣ್ಣು, ಗಂಟಲು ನೋವು, ಧ್ವನಿಯಲ್ಲಿ ಅಸಹಜ ಬದಲಾವಣೆ ಅಥವಾ ಕರ್ಕಶ ಇದ್ದರೆ ಅದನ್ನು ನಿರ್ಲಕ್ಷಿಸದೆ ಬೇಗ ವೈದ್ಯರ ಬಳಿ ತೋರಿಸಿ ಚಿಕಿತ್ಸೆ ಪಡೆದರೆ ಕ್ಯಾನ್ಸರ್ ಅನ್ನು ಸೋಲಿಸಬಹುದು ಎಂದರು.

ಜೆಎಸ್‌ಎಸ್ ಆಸ್ಪತ್ರೆಯ ಕಿವಿ,ಮೂಗು ಮತ್ತು ಗಂಟಲು ವಿಭಾಗದ ಹಿರಿಯ ವೈದ್ಯೆ ಡಾ.ಎಂ.ಬಿ.ಭಾರತಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ನಾರಾಯಣಪ್ಪ, ಸರ್ಜಿಕಲ್ ಆಂಕಾಲಜಿ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ.ರವಿ ಕೃಷ್ಣಪ್ಪ, ಇಎನ್‌ಟಿ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ.ಎಸ್.ಸಂದೀಪ್, ಅರಿವಳಿಕೆ ವಿಭಾಗದ ಮುಖ್ಯಸ್ಥ ಡಾ.ಬಿ.ಪಿ.ಮಂಜುಳ, ಆಂಕಾಲಜಿ ವಿಭಾಗದ ಡಾ.ಸುಮಿತ್, ಇಎನ್‌ಟಿ ವಿಭಾಗದ ಡಾ.ಅಮೃತಾ ಇನ್ನಿತರರು ಉಪಸ್ಥಿರಿದ್ದರು.

## ನೀರು ಕುಡಿಯಲು ಬಂದು ಕೆಸರಿನಲ್ಲಿ ಸಿಲುಕಿ ನಿತ್ರಾಣಗೊಂಡಿದ್ದ ಆನೆ ಸಾವು

ಚಾಮರಾಜನಗರ, ನೀರು ಕುಡಿಯಲು ಬಂದು ಕೆಸರಿನಲ್ಲಿ ಸಿಲುಕಿಕೊಂಡು ನಿತ್ರಾಣಗೊಂಡಿದ್ದ ಹೆಣ್ಣಾನೆ ಚಿಕಿತ್ಸೆಗೆ ಸ್ಪಂದಿಸದೆ ಬುಧವಾರ ಸಂಜೆ ಕೊನೆಯುಸಿರೆಳೆದಿದೆ.

ಮಲೆ ಮಹದೇಶ್ವರ ವನ್ಯಜೀವಿಧಾಮದ ಬಫರ್ ವಲಯದ ಹನೂರು ತಾಲೂಕಿನ ಅಜ್ಜೀಪುರ ಸಮೀಪದ ಉಡುತೊರೆ ಹಳ್ಳ ಜಲಾಶಯಕ್ಕೆ ಶನಿವಾರದಂದು ಕಾಡಾನೆಗಳು ನೀರು ಕುಡಿಯಲು ಎಂದಿನಂತೆ ಬಂದಿದ್ದವು. ಈ ಪೈಕಿ 3 ಕಾಡಾನೆಗಳು ಕೆಸರಿನಲ್ಲಿ ಸಿಲುಕಿಕೊಂಡಿದ್ದವು. ವಿಚಾರ ತಿಳಿಯುತ್ತಿದ್ದಂತೆ ಅರಣ್ಯ ಇಲಾಖೆ ಅಧಿಕಾರಿಗಳು ಉಡುತೊರೆ ಹಳ್ಳ ಜಲಾಶಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅಗ್ನಿಶಾಮಕ ದಳದ ಸಿಬ್ಬಂದಿಗಳು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಜಂಟಿ ಕಾರ್ಯಾಚರಣೆ ನಡೆಸಿ ಮೂರು ಆನೆಗಳನ್ನು ರಕ್ಷಣೆ ಮಾಡಿದ್ದರು.

ಎರಡು ಆನೆಗಳು ಚೇತರಿಸಿಕೊಂಡು ಕಾಡಿನತ್ತ ತೆರಳಿದರೇ ಒಂದಾನೆ ಮಾತ್ರ ತೀವ್ರವಾಗಿ ನಿತ್ರಾಣಗೊಂಡಿತ್ತು. ನಾಗರಹೊಳೆ ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ ಪಶುವೈದ್ಯಾಧಿಕಾರಿ ಡಾ. ರಮೇಶ್ ನಿರಂತರವಾಗಿ ಚಿಕಿತ್ಸೆ ಕೊಟ್ಟರೂ ಜೊತೆಗೆ ಸಾಕಾನೆ ಮಹೇಂದ್ರನನ್ನು ಬಿಟ್ಟು ಅಸ್ವಸ್ಥಗೊಂಡಿರುವ ಆನೆಯನ್ನು ಮೇಲೆಳಿಸಲು ಅರಣ್ಯ ಇಲಾಖೆ ಸಿಬ್ಬಂದಿಗಳು ಇನ್ನಿಲ್ಲದ ಪ್ರಯತ್ನ ಮಾಡಿದರು ಕೂಡ ಚೇತರಿಕೆ ಕಾಣಲಿಲ್ಲ. ಆನೆಗೆ ಇಷ್ಟವಾದ ಕಬ್ಬು, ಕಲ್ಲಂಗಡಿ ಹಣ್ಣು ಸೇರಿದಂತೆ ಇನ್ನಿತರ ಮೇವುಗಳನ್ನು ಸ್ಥಳದಲ್ಲಿ ಇಡಲಾಗಿದ್ದರೂ ಆನೆ ಮಾತ್ರ ಮೇಲೇಳದೇ ಮೃತಪಟ್ಟಿದೆ.

ಕಳೆದ ಮೂರು ದಿನಗಳಿಂದಲೂ ಸಹ ನಾಗರಹೊಳೆ ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ ಪಶು ವೈದ್ಯಾಧಿಕಾರಿ ಡಾ. ರಮೇಶ್ ನೇತೃತ್ವದಲ್ಲಿ ನಿತ್ರಾಣಗೊಂಡಿದ್ದ ಕಾಡಾನೆಗೆ ಸಾಕಷ್ಟು ಔಷಧೋಪಚಾರಗಳು ನಡೆಯುತ್ತಿತ್ತು. ಮೂರು ದಿನಗಳಿಂದ ನಿರಂತರವಾಗಿ ಚಿಕಿತ್ಸೆಯನ್ನು ನೀಡಲಾಗುತ್ತಿತ್ತು. ಸ್ಥಳದಲ್ಲಿಯೇ ಆನೆಗೆ ಬೇಕಾದಂತಹ ಪೌಷ್ಟಿಕ ಆಹಾರ ಸಹಿತವಾಗಿ ವೈದ್ಯಾಧಿಕಾರಿಗಳು ಕೂಡ ಅಲ್ಲೇ ಮೊಕ್ಕಾಂ ಹೂಡಿದ್ದರು. ಆದರೆ ಚಿಕಿತ್ಸೆ ಫಲಿಸದೆ ಆನೆ ಕೊನೆ ಉಸಿರೆಳೆದಿದೆ ಎಂದು ಮಲೆ ಮಹದೇಶ್ವರ ವನ್ಯಜೀವಿಧಾಮದ ಡಿಸಿಎಫ್ ತಿಳಿಸಿದ್ದಾರೆ.

# ನೆಲ್–ಜಲ್ ಮಿತ್ರ ತರಬೇತಿ



ಗುಂಡ್ಲುಪೇಟೆ: ಜಿಟಿಟಿಸಿ ತರಬೇತಿ ಕೋರ್ಸ್‌ಗಳನ್ನು ಬಳಸಿಕೊಂಡು ಯುವಕರು ಸ್ವಂತ ಉದ್ಯೋಗ ಕೈಗೊಳ್ಳಲು ಮುಂದಾಗ ಬೇಕು ಎಂದು ಶಾಸಕ ಹೆಚ್ ಎಂ ಗಣೇಶ ಪ್ರಸಾದ್ ಹೇಳಿದರು

ಪಟ್ಟಣದ ಜಿಟಿಟಿಸಿ ಕಾಲೇಜಿನಲ್ಲಿ ಕೌಶಲ್ಯಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಗುಂಡ್ಲುಪೇಟೆ ಇವರ ಸಂಯುಕ್ತಾಶ್ರಯದಲ್ಲಿ ನೆಲ್–ಜಲ್ ಮಿತ್ರ ತರಬೇತಿ ಕಾರ್ಯಕ್ರಮ ಸಮಾರೋಪ ಸಮಾರಂಭ ಉದ್ಘಾಟಿಸಿ ಮತ್ತು ಪ್ರಮಾಣ ಪತ್ರ ವಿತರಿಸಿ ಮಾತನಾಡಿದ ಅವರು ಸ್ಥಳೀಯ ವಿದ್ಯಾರ್ಥಿಗಳು ಡಿಪ್ಲೋಮೋ ಕೋರ್ಸ್ ಮಾಡುವ ಮೂಲಕ ಉಜ್ವಲ ಉದ್ಯೋಗ ಭವಿಷ್ಯ ಕಟ್ಟಿಕೊಳ್ಳಲು ಸಾಧ್ಯವಿದೆ. ಇದರಲ್ಲಿ ಹಲವಾರು ವಿಭಾಗಗಳಿದ್ದು, ಅತ್ಯಂತ ಹೆಚ್ಚು ಸ್ಪರ್ಧಾತ್ಮಕವಾದ ಈ ವಿಭಾಗದಲ್ಲಿ ಸಾಕಷ್ಟು ಡಿಪ್ಲೋಮಾ ಕೋರ್ಸ್‌ಗಳು ಲಭ್ಯವಿವೆ. ಎಂದರು ನಲ್?ಜಲ್ ತರಬೇತಿ ಪಡೆದವರಿಗೆ ಅವರವರ ಊರಿನಲ್ಲಿ ನೀರುಗಂಟಿಗಳಾಗಿ ಕಾರ್ಯನಿರ್ವಹಿಸಲು ಅವ ಕಾಶ ನೀಡಲಾಗುತ್ತಿದೆ ಎಂದು ಹೇಳಿದರು ನಂತರ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ವಿಜಯ್ ರವರು ಮಾತನಾಡಿದರು ಇದೇ ಸಂದರ್ಭದಲ್ಲಿ ನಲ್–ಜಲ್ ಮಿತ್ರ ತರಬೇತಿ ಪಡೆದ ತರಬೇತಿದಾರರಿಗೆ ಪ್ರಮಾಣ ಪತ್ರ ವಿತರಿಸಿದರು ಈ ಕಾರ್ಯಕ್ರಮದಲ್ಲಿ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಸಹಾಯಕ ನಿರ್ದೇಶಕ ಮಲ್ಲೇಶ್. ಜಿಲ್ಲಾ ಕೌಶಲ್ಯ ಅಭಿವೃದ್ಧಿ ಸಾಂಕಿಕ ಅಧಿಕಾರಿ ಬಿಕೆ ಸಂದೇಶ್. ಎನ್ ಆರ್ ಎಲ್ ಎಂ ಜಿಲ್ಲಾ ವ್ಯವಸ್ಥಾಪಕ. ದೀಪಕ್ ಪಿ ಜಿ ಟಿ ಟಿ ಸಿ ಅಲ್ಪಾವಧಿ ಮುಖ್ಯಸ್ಥ ಸುಭಾಷ್ ಚಂದ್ರು ಕೆ. ಸರ್ಕಾರಿ ಉಪಕರಣಗಾರ ತರಬೇತಿ ಕೇಂದ್ರ ಪ್ರಾಂಶುಪಾಲರು ವಿನಯ್ ಎಸ್. ವಿದ್ಯಾರ್ಥಿಗಳು ಸಿಬ್ಬಂದಿ ವರ್ಗ ಹಾಜರಿದ್ದರು

# ಸಂಸ್ಕೃತಿ, ಸಂಸ್ಕಾರ ಕಲಿಯಲು ಜಾನಪದ ಮುಖ್ಯ



ಮೈಸೂರು: ಸಂಸ್ಕೃತಿ, ಸಂಸ್ಕಾರ ಕಲಿಯಲು ಜಾನಪದ ಮುಖ್ಯ ಎಂದು ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ರಾಮಪ್ಪ ಹೇಳಿದರು.

ಮೈಸೂರು ಜಿಲ್ಲಾ ಕನ್ನಡ ಜಾನಪದ ಪರಿಷತ್ ಕುವೆಂಪುನಗರ ಆದಿಚುಂಚನಗಿರಿ ರಸ್ತೆಯ ಶ್ರೀ ಕಾಗಿನೆಲೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶುಕ್ರವಾರ ಏರ್ಪಡಿಸಿದ್ದ ಸಂಸ್ಥಾಪನಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾನಪದದ ಪ್ರತಿ ಹಾಡು, ಪ್ರತಿ ಶಬ್ದಕ್ಕೂ ಅರ್ಥವಿದೆ ಎಂದರು. ಇಂತಹ ಜಾನಪದ ಪ್ರಸ್ತುತ ದಿನಗಳಲ್ಲಿ ಮಾಯವಾಗುತ್ತಿದೆ. ಇಲ್ಲವೇ ಪ್ರಾಮುಖ್ಯತೆ ಸಿಗುತ್ತಿಲ್ಲ. ಆದ್ದರಿಂದ ಸರ್ಕಾರ ಹಾಗೂ ಸಂಘ ಸಂಸ್ಥೆಗಳು ಜಾನಪದವನ್ನು ಜೀವಂತವಾಗಿಡುವ ಪ್ರಯತ್ನ ಮಾಡಬೇಕು ಎಂದು ಅವರು ಸಲಹೆ ಮಾಡಿದರು.

ಪ್ರೊ.ಹನೂರು ಕೃಷ್ಣಮೂರ್ತಿ ಅವರು ಚಿತ್ರದುರ್ಗ ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಜಾನಪದವನ್ನು ಉತ್ತೇಜಿಸುವ ಕಾರ್ಯವನ್ನು ಮಾಡುತ್ತಿದ್ದಾರೆ ಎಂದು ಅವರು ಶ್ಲಾಘಿಸಿದರು. ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಗೌರವ ಕಾರ್ಯದರ್ಶಿ ಎಂ.ಪುಟ್ಟಬಸವೇಗೌಡ ಅಧ್ಯಕ್ಷತೆ ವಹಿಸಿದ್ದರು. ಕಾಗಿನೆಲೆ ಬಿ.ಇಡಿ ಕಾಲೇಜಿನ ಪ್ರಾಂಶುಪಾಲೆ ಡಾ.ಕೆ.ಕೆ.ವಿಶಾಲಾಕ್ಷಿ ಆಶಯ ಭಾಷಣ, ಕಜಾಪ ಜಿಲ್ಲಾಧ್ಯಕ್ಷ ಕ್ಯಾತನಹಳ್ಳಿ ಪ್ರಕಾಶ್ ಪ್ರಾಸ್ತಾವಿಕ ಮಾಡಿದರು. ವಿಭಾಗೀಯ ಸಂಚಾಲಕಿ ಡಾ. ಕಾವೇರಿ ಪ್ರಕಾಶ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಅತಿಥಿಗಳಾಗಿದ್ದರು. ಇದೇ ಸಂದರ್ಭದಲ್ಲಿ ವಿವಿಧ ವಿವಿಗಳಿಂದ ಪಿಎಚ್‌ಡಿ ಹಾಗೂ ಗೌರವ ಡಾಕ್ಟರೇಟ್‌ಗೆ ಭಾಜನರಾಗಿರುವ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ರಾಮಪ್ಪ, ಜಯಲಕ್ಷ್ಮೀಪುರಂ ಸಂತ ಜೋಸೆಫರ ಕಾಲೇಜಿನ ಪ್ರಾಂಶುಪಾಲ ಎಚ್.ಎನ್. ಚಂದ್ರಶೇಖರ, ಜಾನಪದ ಗಾಯಕ ಅಮ್ಮ ರಾಮಚಂದ್ರ, ಪೂಜಾ ಕುಣಿತ ಕಲಾವಿದ ಸಿ. ಸುಂದರೇಶ್, ಸಮಾಜ ಸೇವಕ ನಂಜನಗೂಡು ತಾ. ಕೊಂಗಳ್ಳಿಯ ಬಿ.ಶಂಕರ್, ಕಜಪ ಕೆ.ಆರ್.ನಗರ ತಾ. ಅಧ್ಯಕ್ಷ ತಿಮ್ಮಶೆಟ್ಟರನ್ನು ಸನ್ಮಾನಿಸಲಾಯಿತು. ಕಜಪ ಕಾರ್ಯದರ್ಶಿ ಬೇಸೂರು ಮೋಹನ್ ಪಾಳೇಗಾರ್, ಪತ್ರಿಕಾ ಕಾರ್ಯದರ್ಶಿ ಎ.ಎಲ್.ಸುರೇಶ್ಚಂದ್ರ, ದೊರೆಸ್ವಾಮಿ, ಶಿವಕುಮಾರ್ ಮೊದಲಾದವರು ಇದ್ದರು.

# ರಾಮನಗರಕ್ಕೆ ಶೇ.92.83 ಫಲಿತಾಂಶ

| ರಾಮನಗರ ಜಿಲ್ಲೆಗೆ 26ನೇ ಸ್ಥಾನ | ಕಳೆದ ಬಾರಿ ಶೇ 80.02 ಫಲಿತಾಂಶ | ಮಾಗಡಿಯ ವಾಸವಿ ಶಾಲೆಯ ವಿದ್ಯಾರ್ಥಿನಿ ಜಿಲ್ಲೆಗೆ ಫಸ್ಟ್ | ಫಲಿತಾಂಶಗಳಿಕೆಯಲ್ಲಿ ಚನ್ನಪಟ್ಟಣ ತಾಲ್ಲೂಕು ಬೆಸ್ಟ್ |
|---|---|---|---|

## ಫಲಿತಾಂಶಗಳಿಕೆಯಲ್ಲಿ ಗ್ರಾಮೀಣ ವಿದ್ಯಾರ್ಥಿಗಳು ಮೊದಲ ಸ್ಥಾನದಲ್ಲಿ

ರಾಮನಗರ: ಕಳೆದ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ 80.02ರಷ್ಟು ಫಲಿತಾಂಶ ಗಳಿಸಿದ್ದ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆ ಈ ಬಾರಿ ಶೇ 92.83ರಷ್ಟು ಫಲಿತಾಂಶಗಳಿಸಿ ರಾಜ್ಯದಲ್ಲಿ 26ನೇ ಸ್ಥಾನಕ್ಕೆ ತೃಪ್ತಿ ಪಟ್ಟುಕೊಂಡಿದೆ. 2025–26ನೇ ಸಾಲಿನಲ್ಲಿ 11237 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಈ ಪಐಕಿ 10431 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಶೇ 92.83 ರಷ್ಟು ಫಲಿತಾಂಶ ಗಳಿಸಿಕೊಟ್ಟಿದ್ದಾರೆ.

### ತಾಲ್ಲೂಕು ವಾರು ಫಲಿತಾಂಶ

ಚನ್ನಪಟ್ಟಣ ತಾಲ್ಲೂಕಿನಲ್ಲಿ 2678 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು, ಈ ಪೈಕಿ 2545 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ಶೇ 95.03ರಷ್ಟು ಫಲಿತಾಂಶಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನದಲ್ಲಿದೆ. ಎರಡನೇ ಸ್ಥಾನದಲ್ಲಿ ಮಾಗಡಿ ತಾಲ್ಲೂಕು ಇದೆ. 2281 ವಿದ್ಯಾರ್ಥಿಗಳ ಪೈಕಿ 2154 ವಿದ್ಯಾರ್ತಿಗಳು ತೇರ್ಗಡೆಹೊಂದಿದ್ದು, ಶೇ 94.43 ಫಲಿತಾಂಶ ಲಭಿಸಿದೆ. ರಾಮನಗರ ತಾಲ್ಲೂಕಿನಿಂದ 2968 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು, ಈ ಪೈಕಿ 2766 ಮಂದಿ ಯಶಸ್ವಿಯಾಗಿದ್ದು ಶೇ 93.19 ಫಲಿತಾಂಶ ಲಭಿಸಿದೆ. ಶೇ 89.09 ಫಲಿತಾಂಶ ಪಡೆದುಕೊಂಡಿರುವ ಕನಕಪುರ ತಾಲ್ಲೂಕು ಜಿಲ್ಲೆಯಲ್ಲಿ ಕೊನೆಯ ಸ್ಥಾನದಲ್ಲಿದೆ. ಈ ತಾಲ್ಲೂಕಿನಲ್ಲಿ 3293 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದರು. ಇವರ ಪೈಕಿ 2966 ಮಂದಿ ಉತ್ತೀರ್ಣರಾಗಿದ್ದಾರೆ.

### ಬಾಲಕೀಯರೇ ಮೇಲುಗೈ

ಎಂದಿನಂತೆ ಈ ವರ್ಷವೂ ಬಾಲಕಿಯರೇ ಫಲಿತಾಂಶಗಳಿಕೆಯಲ್ಲಿ ಮೇಲುಗೈ ಸಾಧಿಸಿದ್ದಾರೆ. ಜಿಲ್ಲೆಯಲ್ಲಿ ಪರೀಕ್ಷೆ ಎದುರಿಸಿದ್ದ 5620 ಬಾಲಕರ ಪೈಕಿ 5088 ಮಂದಿ ಪಾಸಾಗಿದ್ದು, ಶೇ 90.53 ಫಲಿತಾಂಶ ಪಡೆದುಕೊಂಡಿದ್ದಾರೆ. 5600 ಬಾಲಕಿಯರ ಪೈಕಿ 5343 ಮಂದಿ ಉತ್ತೀರ್ಣರಾಗಿದ್ದು ಶೇ 95.41 ಫಲಿತಾಂಶ ಪಡೆದುಕೊಂಡಿದ್ದಾರೆ.



Dist First: Srushti M.S. Vasavi Vidyanikethan Magadi







### ಖಾಸಗಿ ಶಾಲೆಗೆ ಸರ್ಕಾರಿ ಶಾಲೆ ಸಡ್ಡು!

ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮವಾಗಿ ತಮ್ಮ ಶೈಕ್ಷಣಿಕ ಚಟುವಟಿಕೆಯನ್ನು ನಿರ್ವಹಿಸಿದ್ದಾರೆ. ಖಾಸಗಿ ಅನುದಾನ ರಹಿತ ಶಾಲೆಗಳಿಗೆ ನಾವೇನು ಕಡಿಮೆ ಇಲ್ಲ ಎಂಬುದನ್ನು ತೋರಿಸಿಕೊಟ್ಟಿದ್ದಾರೆ. ಅನುದಾನ ರಹಿತ ಖಾಸಗಿ ಶಾಲೆಗಳಿಗೆ ಶೇ93.63 ಫಲಿತಾಂಶ ಲಭಿಸಿದೆ. ಸರ್ಕಾರಿ ಶಾಲೆಗಳು ಶೇ 93.31 ಫಲಿತಾಂಶ ಪಡೆದುಕೊಂಡಿದ್ದಾರೆ. ಅನುದಾನಿತ ಖಾಸಗಿ ಶಾಲೆಗಳು ಶೇ 91.36 ಫಲಿತಾಂಶ ಪಡೆದುಕೊಂಡಿವೆ.

### ಆಂಗ್ಲ ಮಾಧ್ಯಮ ಮೇಲುಗೈ

10ನೇ ತರಗತಿಯನ್ನು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ಪರೀಕ್ಷೆಗೆ ಹಾಜರಾಗಿದ್ದ 5439 ವಿದ್ಯಾರ್ತಿಗಳ ಪೈಕಿ 4990 ವಿದ್ಯಾರ್ಥಿಗಳು ಪಾಸಾಗಿದ್ದು ಶೇ 91.74 ಫಲಿತಾಂಶಗಳಿಸಿದ್ದಾರೆ. ಇನ್ನೊಂದೆಡೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ 5697 ವಿದ್ಯಾರ್ಥಿಗಳ ಪೈಕಿ 5370 ವಿದ್ಯಾರ್ಥಿಗಳು ಯಶಸ್ವಿಯಾಗಿದ್ದು ಶೇ 94.26 ಫಲಿತಾಂಶ ಪಡೆದುಕೊಂಡಿದ್ದಾರೆ. ಉರ್ದು ಮಾಧ್ಯಮದಲ್ಲಿ ಪರೀಕ್ಷೆ ಬರೆದ 84 ವಿದ್ಯಾರ್ಥಿಗಳ ಪೈಕಿ 71ಮಂದಿ ಯಶಸ್ವಿಯಾಗಿದ್ದು ಶೇ 84.5ರಷ್ಟು ಫಲಿತಾಂಶ ಬಂದಿದೆ.

### ಜಿಲ್ಲೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾವಂತರು

ಮಾಗಡಿ ಪಟ್ಟಣದ ವಾಸವಿ ವಿದ್ಯಾನಿಕೇತನ ಶಾಲೆಯ ಸೃಷ್ಟಿ ಎಂ.ಎಸ್ ಎಂಬ ಬಾಲಕಿ ಶೇ 622 ಅಂಕಗಳನ್ನು ಗಳಿಸಿ ಜಿಲ್ಲೆಯಲ್ಲೇ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿನಿ ಎಂಬ ಕೀರ್ತಿಗೆ ಪಾತ್ರಳಾಗಿದ್ದಾಳೆ. ಕಳೆದ ಕೆಲವು ವರ್ಷಗಳಲ್ಲಿ ಈ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾ ಪ್ರಥಮ ಸ್ಥಾನದಲ್ಲಿರುವುದು ಈ ಶಾಲೆಯ ಬಗ್ಗೆ ಪ್ರಶಂಸೆಗಳು ಕೇಳಿ ಬಂದಿವೆ. 621 ಅಂಕಗಳನ್ನುಗಳಿಸಿರುವ ಮಾಗಡಿಯ ಎಣ್ಣೆಗೆರೆ ಗ್ರಾಮದ ಸ್ವಕ್ತಾ ಆಂಗ್ಲ ಮಧ್ಯಾಮ ಶಾಲೆಯ ವಿದ್ಯಾರ್ಥಿ ದೀಕ್ಷಿತ್ ವೈ.ಕೆ ಜಿಲ್ಲೆಯಲ್ಲಿ ಅತ್ಯಂತ ಹೆಚ್ಚು ಅಂಕಗಳಿಸಿದ ದ್ವಿತೀಯ ವಿದ್ಯಾರ್ಥಿ ಎಂಬ ಕೀರ್ತಿಗೆ ಪಾತ್ರನಾಗಿದ್ದಾನೆ. ಮೂರನೇ ಸ್ಥಾನದಲ್ಲಿ ಮಾಗಡಿ ತಾಲ್ಲೂಕಿನ ಕುದೂರು ಹೋಬಳಿಯ ಗುರುಕುಲ ಪ್ರೌಢಶಾಲೆಯ ಅಮೃತ್ ಗೌಡ ಮತ್ತು ರಾಮನಗರ ತಾಲ್ಲೂಕಿನ ಆನುಮಾನ ಹಳ್ಳಿಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿ ವಿಶ್ವಾಸ್ ಗೌಡ ಜಿಲ್ಲೆಯಲ್ಲಿ ತೃತೀಯ ಸ್ಥಾನದಲ್ಲಿದ್ದು, ಇವರಿಬ್ಬರು 619 ಅಂಕಗಳನ್ನು ಪಡೆದುಕೊಂಡಿದ್ದಾರೆ.

### ಗ್ರಾಮೀಣ ವಿದ್ಯಾರ್ಥಿಗಳು ಬೆಸ್ಟ್!

ಇಡೀ ಜಿಲ್ಲೆಯಲ್ಲಿ 8098 ಗ್ರಾಮೀಣ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಇವರ ಪೈಕಿ ಯಶಸ್ವಿಯಾದ 7596 ವಿದ್ಯಾರ್ಥಿಗಳು ಶೇ 93.80 ಫಲಿತಾಂಶ ಪಡೆದುಕೊಂಡಿದ್ದರೆ, ನಗರ ಪ್ರದೇಶದಲ್ಲಿ ವ್ಯಾಸಂಗ ಮಾಡಿ ಪರೀಕ್ಷೆ ಬರೆದ 3119 ವಿದ್ಯಾರ್ಥಿಗಳ ಪೈಕಿ 2835 ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಯಶಸ್ವಿಯಾಗಿದ್ದು ಶೇ 90.89 ಫಲಿತಾಂಶಗಳಿಸಿದ್ದಾರೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ತಮ್ಮ ಪ್ರತಿಭೆ ಮರೆದಿದ್ದು ಅಂಕಿ ಅಂಶಗಳು ಸ್ಪಷ್ಟಪಡಿಸಿವೆ.

## ವೈದ್ಯೋಪಕರಣಗಳ ಲೋಕಾರ್ಪಣೆ

ಗುಂಡ್ಲುಪೇಟೆ–ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಅತ್ಯಾಧುನಿಕ ಫಿಸಿಯೋಥೆರಪಿ ಉಪಕರಣಗಳು, ದಂತ ವೈದ್ಯಕೀಯ ಆರ್.ವಿ.ಜಿ ಸೆನ್ಸರ್ ಮತ್ತು ಬಿಸಿಗಾಳಿ ತಡೆ ಘಟಕವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಚಿದಂಬರ ಲೋಕಾರ್ಪಣೆಗೊಳಿಸಿದರು.

ಡಿ.ಎಚ್.ಓ ಡಾ.ಚಿದಂಬರ ಮಾತನಾಡಿ, ಗುಂಡ್ಲುಪೇಟೆ ಜನತೆಗೆ ಸುಸಜ್ಜಿತ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ತಾಲೂಕು ಆರೋಗ್ಯ ಅಧಿಕಾರಿಗಳು ಹಾಗೂ ಆಡಳಿತ ವೈದ್ಯಾಧಿಕಾರಿಗಳ ನೇತೃತ್ವದಲ್ಲಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಹೊಸ ಸೌಲಭ್ಯಗಳಾದ ಅತ್ಯಾಧುನಿಕ ಫಿಸಿಯೋಥೆರಪಿ ವಿಭಾಗ, ದಂತ ವೈದ್ಯಕೀಯ ಆರ್.ವಿ.ಜಿ ಸೆನ್ಸರ್, ಬಿಸಿಗಾಳಿ ತಡೆ ಘಟಕ ತೆರೆಯಲಾಗಿದ್ದು. ಸಾರ್ವಜನಿಕು ಸೇವೆ ಪಡೆದುಕೊಳ್ಳಬಹುದು ಎಂದು ತಿಳಿಸಿದರು. ತಾಲೂಕು ಆರೋಗ್ಯ ಅಧಿಕಾರಿ ಡಾ.ಅಲಿಂ ಪಾಷಾ, ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಮಂಜುನಾಥ್ ಸೇರಿದಂತೆ ಆಸ್ಪತ್ರೆ ವೈದ್ಯರು ಮತ್ತು ಸಿಬ್ಬಂದಿ ವರ್ಗದವರು ಹಾಜರಿದ್ದರು.



## ಡಾ.ರಾಜ್ ಸಾಂಸ್ಕೃತಿಕ ರಾಯಭಾರಿ ಎಂದು ಘೋಷಿಸಿ

ಕೆ.ಆರ್.ಪೇಟೆ,ಕರ್ನಾಟಕ ರತ್ನ, ಪದ್ಮಭೂಷಣ, ದಾದಾಸಾಹೇಬ್ ಪಾಲ್ಕೆ ಪ್ರಶಸ್ತಿ ವಿಜೇತರು, ಅಮೇರಿಕಾದ ಅತ್ಯುನ್ನ ಪ್ರಶಸ್ತಿ ಕೆಂಟಕಿ ಕರ್ನಲ್ ಅಂತಾರಾಷ್ಟ್ರೀಯ ಪ್ರಶಸ್ತಿ ವಿಜೇತ, ವರನಟ ಡಾ.ರಾಜ್‌ಕುಮಾರ್ ಕನ್ನಡ ಚಿತ್ರರಂಗದ ಅಪರೂಪದ ಕಣ್ಮಣಿಯಾಗಿದ್ದಾರೆ. ಇವರು ನಟಿಸಿದ ಎಲ್ಲಾ ಚಿತ್ರಗಳು ಸದಭಿರುಚಿಯ ಹಾಗೂ ಸಮಾಜಕ್ಕೆ ಉತ್ತಮ ಸಂದೇಶವನ್ನು ಸಾರುವ ಚಿತ್ರಗಳಾಗಿವೆ ಇವರ ಹೆಸರು ಸೂರ್ಯ–ಚಂದ್ರರು ಇರುವ ವರೆವಿಗೂ ಶಾಶ್ವತವಾಗಿ ಉಳಿಯುತ್ತದೆ ಎಂದು ತಾಲ್ಲೂಕು ಡಾ.ರಾ ಕಲಾ ಸಂಘದ ಅಧ್ಯಕ್ಷ ಪಿ.ಬಿ.ಮಂಚನಹಳ್ಳಿ ಕುಮಾರ್ ತಿಳಿಸಿದರು.

ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಬಳಿ ಇರುವ ಡಾ.ರಾಜ್‌ಕುಮಾರ್ ಕಲಾ ಸಂಘದ ಕಚೇರಿಯಲ್ಲಿ ಆಯೋಜಿಸಿದ್ದ ವತಿಯಿಂದ ದಿ:ಡಾ ರಾಜ್‌ಕುಮಾರ್ ಅವರ 97ನೇ ಹುಟ್ಟುಹಬ್ಬದ ಕಾರ್ಯಕ್ರಮದಲ್ಲಿ ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಗೌರವ ಸಲ್ಲಿಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಾ.ರಾಜ್‌ಕುಮಾರ್ ಅವರು ಪೌರಾಣಿಕ, ಸಾಮಾಜಿಕ, ಐತಿಹಾಸಿಕ ನಾಟಕಗಳು ಹಾಗೂ ಚಲನಚಿತ್ರಗಳಲ್ಲಿ ನಟಿಸುವ ಮೂಲಕ ತಾವೊಬ್ಬ ಮೇರು ನಟ ಎಂಬುದನ್ನು ತಮ್ಮ ನಟನೆಯ ಮೂಲಕ ತೋರಿಸಿಕೊಟ್ಟಿದ್ದಾರೆ. ಪ್ರತಿಯೊಂದು ಪಾತ್ರಗಳಿಗೂ ಜೀವ ತುಂಬುವ ಮೂಲಕ ಸಾಮಾಜಿಕ ಬದಲಾವಣೆಗೆ ಶ್ರಮಸಿದ್ದಾರೆ. ಇವರ ಬಂಗಾರದ ಮನುಷ್ಯ ಸಿನಿಮಾ ಬಿಡುಗಡೆ ಆದಾಗ ಸಾವಿರಾರು ಮಂದಿ ಸರ್ಕಾರಿ ಉದ್ಯೋಗ ಬಿಟ್ಟು ಕೃಷಿ ಕಡೆಗೆ ಒಲವು ತೋರಿಸುವ ಮೂಲಕ ಪ್ರಗತಿಪರ ರೈತರಾಗಿ ಹೊರಹೊಮ್ಮಿದ್ದು ಇತಿಹಾಸವಾಗಿ ಉಳಿದಿದೆ. ಸಾವಿರಾರು ನಾಟಕಗಳು, ಸುಮಾರು 206ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸುವ ಮೂಲಕ ಯಾವುದೇ ಪಾತ್ರಕ್ಕೂ ಸೈ ಎನಿಸಿಕೊಂಡಿದ್ದಾರೆ. ಇದರಿಂದ ಭಾರತ ರತ್ನ ಪ್ರಶಸ್ತಿಯ ಮೌಲ್ಯ ಇನ್ನೂ ಹೆಚ್ಚಾಗುತ್ತದೆ ಎಂದು ಕುಮಾರ್ ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಡಾ.ರಾಜ್‌ಕುಮಾರ್ ಕಲಾ ಸಂಘದ ಗೌರವಾಧ್ಯಕ್ಷ ಶಂಕರೇಗೌಡ, ಉಪಾಧ್ಯಕ್ಷ ಮರಡಹಳ್ಳಿ ನಟರಾಜ್, ತಾಲ್ಲೂಕು ಡಾ.ಪುನೀತ್‌ರಾಜ್‌ಕುಮಾರ್ ಸಂಘದ ಅಧ್ಯಕ್ಷ ಕೆ.ಎಲ್.ಮಹೇಶ್, ಹಿರಿಯ ರಂಗಭೂಮಿ ಕಲಾವಿದರಾದ ಕೆ.ಬಿ.ಕಾಳಯ್ಯ, ಹರಿಹರಪುರ ಮಹಾದೇವೇಗೌಡ, ಶಬ್ಬೀರ್‌ಅಹಮದ್, ಚಿಕ್ಕೋಸಹಳ್ಳಿ ದೇವರಾಜು, ಡ್ರಾಮ ಮಾಸ್ಟರ್ ವಿಷಕಂಠ, ಹೊಸಹೊಳಲು ದೇವರಾಜ್, ಸುರೇಶ್ ಹರಿಜನ ಸೇರಿದಂತೆ ಹಲವಾರು ಕಲಾವಿದರು ಭಾಗವಹಿಸಿ ಗೌರವ ಸಲ್ಲಿಸಿದರು.



## ರಾಜ್ ಕುಮಾರ್ ವ್ಯಕ್ತಿತ್ವ ಎಲ್ಲರಿಗೂ ಮಾದರಿ




ಮೈಸೂರು: ಸರಳ, ಸಜ್ಜನ, ನಿಷ್ಠಾವಂತ, ಪ್ರಾಮಾಣಿಕ ಕಲಾವಿದ ಹಾಗೂ ಎಲ್ಲ ಸಮುದಾಯದ ಜನರ ಪ್ರೀತಿಗೆ ಪಾತ್ರರಾದ ಡಾ.ರಾಜಕುಮಾರ್ ಅವರ ವ್ಯಕ್ತಿತ್ವ ಎಲ್ಲರಿಗೂ ಮಾದರಿಯಾಗಿದೆ ಎಂದು ಶಾಸಕ ಟಿ.ಎಸ್ ಶ್ರೀವತ್ಸ ಬಣ್ಣಿಸಿದರು.

ಅರಮನೆಯ ಮುಂಭಾಗದ ಡಾ.ರಾಜ್ ಕುಮಾರ್ ಉದ್ಯಾನವನದಲ್ಲಿ ರಾಜಕುಮಾರ್ ಅಭಿಮಾನಿ ಬಳಗದ ವತಿಯಿಂದ ಜೀವದಾರ ರಕ್ತ ನಿಧಿ ಕೇಂದ್ರದ ಸಹಯೋಗದೊಂದಿಗೆ ಆಯೋಜಿಸಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ನಂತರ ಸ್ವಯಂ ಪ್ರೇರಿತ ರಕ್ತದಾನ ಮಾಡಿದ ರಕ್ತದಾನಿಗಳಿಗೆ ಪ್ರಮಾಣ ಪತ್ರ ನೀಡಿ ಮಾತನಾಡಿದರು. ತಮ್ಮ ನಟನೆಯ ಮೂಲಕ ಮನೆ ಮಾತಾಗಿ, ಕೋಟ್ಯಾಂತರ ಅಭಿಮಾನಿ ದೇವರ ಹೃದಯದಲ್ಲಿ ಡಾ.ರಾಜಕುಮಾರ್ ಶಾಶ್ವತ ಸ್ಥಾನ ಪಡೆದುಕೊಂಡಿದ್ದಾರೆ. ಅವರ ವೃತ್ತಿ ಬದುಕು ನಮಗೆಲ್ಲರಿಗೂ ಮಾದರಿಯಾಗುವಂತಹದ್ದು. ಅವರ ಜೀವನದ ಆದರ್ಶಗಳನ್ನು ತಿಳಿದು ನಮ್ಮ ಜೀವನದಲ್ಲೂ ಅನುಕರಣೆ ಮಾಡಿಕೊಳ್ಳಬೇಕಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮುಡಾ ಮಾಜಿ ಸದಸ್ಯೆ ಲಕ್ಷ್ಮೀದೇವಿ, ಬಿಜೆಪಿ ಮುಖಂಡ ಜೋಗಿ ಮಂಜು, ಕೆಎಂಪಿಕೆ ಚಾರಿಟೇಬಲ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಬಿಜೆಪಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಲೋಹಿತ್, ಪ್ರಭು, ಕೀರ್ತಿ, ಕಿಶೋರ್ ಇನ್ನಿತರರು ಹಾಜರಿದ್ದರು.

### ಚೆಲುವಾಂಬ ಬಾಣಂತಿಯರ ಬಿಸಿ ನೀರ ಬೇಡಿಕೆ ಸ್ಥಳದಲ್ಲೇ ಪರಿಹಾರ

## ಸಂಸದರಿಗೆ ಮಕ್ಕಳ ಆಸ್ಪತ್ರೆ ಅವ್ಯವಸ್ಥೆ ದರ್ಶನ




ಮೈಸೂರು: ನಗರದ ಚೆಲುವಾಂಬ ಮಕ್ಕಳ ಆಸ್ಪತ್ರೆಗೆ ಸಂಸದ ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಭೇಟಿ ನೀಡಿ ಅಲ್ಲಿನ ಅವ್ಯವಸ್ಥೆಗಳ ದರ್ಶನ ಮಾಡಿದರಲ್ಲದೆ ಬಾಣಂತಿಯರ ಬಿಸಿನೀರ ಬೇಡಿಕೆಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಿ ನೆರವಾದರು.

ಒಂದು ತಿಂಗಳ ಅವಧಿಯಲ್ಲಿ ಅತಿಹೆಚ್ಚು ಮಕ್ಕಳ ಸಾವನ್ನಪ್ಪಿರುವ ಪ್ರಕರಣ ಹಾಗೂ ನಿನ್ನೆ ಮಗುವೊಂದಕ್ಕೆ ಇರುವೆ ಕಚ್ಚಿ ಸಾವನ್ನಪ್ಪಿರುವ ಆರೋಪದ ಹಿನ್ನೆಲೆಯಲ್ಲಿ ಭೇಟಿ ನೀಡಿ ಅಲ್ಲಿನ ಮಹಿಳೆಯರಿಂದ ವಸ್ತುಸ್ಥಿತಿ ಅರಿಯುವ ಪ್ರಯತ್ನ ನಡೆಸಿದರು. ಈ ವೇಳೆ ನರ್ಸ್ ಹಾಗೂ ಡಿ ಗ್ರೂಪ್ ಸಿಬ್ಬಂದಿ ರೋಗಿಗಳ ಸಂಬಂಧಿಗಳಿಂದ ವಿನಾಕಾರಣ ಹಣ ವಸೂಲಿ, ಬಾಣಂತಿಯರ ವಾರ್ಡಿನಲ್ಲಿ ಸ್ವಚ್ಛತೆ, ಸೂಕ್ತ ಸೌಲಭ್ಯ ಇಲ್ಲದಿರುವುದು ಹಾಗೂ ಮಕ್ಕಳಿಗೆ ಹಾಸಿಗೆ ಕೊರತೆ ಇರುವ ಬಗ್ಗೆ ಮಹಿಳೆಯರು ದೂರು ನೀಡಿದರು. ಬಳಿಕ ಮಾತನಾಡಿ, ತಾಯಿ, ಮಕ್ಕಳ ಆರೈಕೆಗೆ ಹೆಚ್ಚು ಆದ್ಯತೆ ನೀಡಬೇಕು. ಆಸ್ಪತ್ರೆಯಲ್ಲಿ ನವಜಾತ ಶಿಶುಗಳ ಸಾವು, ಹೆಚ್ಚುತ್ತಿರುವ ಮರಣ ಪ್ರಮಾಣ ಸಂಖ್ಯೆಗಳ ಕುರಿತು ವರದಿಯಾಗಿರುವುದು ವಿಷಾದ ನೀಯ. ಜನರ ಕುರಿತು ಯಾವುದೇ ರೀತಿಯ ನಿರ್ಲಕ್ಷ್ಯ ತೋರಬಾರದು. ಇದೇ ರೀತಿಯ ಧೋರಣೆ ಮುಂದುವರಿದರೆ ಕಾನೂನು ಕ್ರಮ ಎದುರಿಸಬೇಕಾದೀತು ಎಂದು ಎಚ್ಚರಿಕೆ ನೀಡಿದರು. ಇದೇ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಲಾಯಿತು. ಎನ್‌ಐಸಿಯು ಘಟಕಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಲಾಯಿತು. ಎಲ್ಲ ವಿಭಾಗದಲ್ಲೂ ಎಲ್ಲ ವೈದ್ಯಕೀಯ ಸಾಧನಗಳನ್ನು ಸೂಕ್ತ ಸ್ಥಿತಿಯಲ್ಲಿ ಇರುವಂತೆ ನೋಡಿಕೊಳ್ಳಬೇಕು. ನಿರ್ವಹಣೆಗಾಗಿ ಮೀಸಲಿರುವ ನಿಧಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಸೂಚಿಸಿದರು.

**ಸ್ಥಳದಲ್ಲೇ ಪರಿಹಾರ:** ರೋಗಿಗಳೊಂದಿಗೆ ಸಂಸದ ಯದುವೀರ್ ಒಡೆಯರ್ ಸಮಾಲೋಚನೆ ನಡೆಸಿದಾಗ ಬಿಸಿ ನೀರಿನ ವ್ಯವಸ್ಥೆ ಇಲ್ಲದಿರುವ ಬಗ್ಗೆ ದೂರು ಸಲ್ಲಿಸಿದರು. ಇದಕ್ಕೆ ಸ್ಪಂದಿಸಿದ ಸಂಸದರು ಕೂಡಲ್ ಬಿಸಿನೀರಿನ ಡಿಸ್ಪೆನ್ಸರ್ ಅನ್ನು ತಮ್ಮ ವೈಯಕ್ತಿಕ ಹಣದಿಂದ ತರಿಸಿ ರೋಗಿಗಳಿಗೆ ನೀಡಿದರು. ಅಲ್ಲದೆ ಪ್ರತಿ ಮೂರು ತಿಂಗಳಿಗೊಮ್ಮೆ ಭೇಟಿ ನೀಡಿ ಪರಿಶೀಲಿಸುವುದಾಗಿ ಹೇಳಿದರು. ಮಾಜಿ ಶಾಸಕ ಎಲ್.ನಾಗೇಂದ್ರ, ಕೆ.ಆರ್. ಆಸ್ಪತ್ರೆ ಡೀನ್ ಡಾ.ಕೆ.ಆರ್.ದಾಕ್ಷಾಯಿಣಿ ಉಪಸ್ಥಿತರಿದ್ದರು.

# ಮಣಿಪಾಲ್ ಆಸ್ಪತ್ರೆಯಿಂದ ಅತ್ಯಾಧುನಿಕ ಇಬಸ್ ತಂತ್ರಜ್ಞಾನ ಬಿಡುಗಡೆ



**ಮೈಸೂರು:** ನಗರದ ಮಣಿಪಾಲ್ ಆಸ್ಪತ್ರೆಯು ಶ್ವಾಸಕೋಶದ ಗಂಭೀರ ಸಮಸ್ಯೆಗಳನ್ನು ಅತ್ಯಂತ ನಿಖರವಾಗಿ ಮತ್ತು ಸುಲಭವಾಗಿ ಪತ್ತೆಹಚ್ಚುವ ಎಂಡೋಬ್ರಾಂಕಿಯಲ್ ಅಲ್ಟ್ರಾಸೌಂಡ್ ಎಂಬ ಅತ್ಯಾಧುನಿಕ ತಂತ್ರಜ್ಞಾನವನ್ನು ನಗರದಲ್ಲಿ ಮೊದಲ ಬಾರಿಗೆ ಪರಿಚಯಿಸಿದೆ.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿ ನಡೆಸಿದ ಮಣಿಪಾಲ್ ಆಸ್ಪತ್ರೆಯ ಡಾ.ಆರ್.ಲಕ್ಷ್ಮಿ ನರಸಿಂಹನ್ ಮಾತನಾಡಿ, ನಮ್ಮ ಎದೆಯ ಭಾಗದಲ್ಲಿ ಹೃದಯ, ಶ್ವಾಸಕೋಶ ಮತ್ತು ಪ್ರಮುಖ ರಕ್ತನಾಳಗಳಿರುವ ಜಾಗದಲ್ಲಿ ಉಂಟಾಗುವ ಸಮಸ್ಯೆಗಳನ್ನು ಪತ್ತೆಹಚ್ಚುವುದು ಸವಾಲಿನ ಕೆಲಸವಾಗಿತ್ತು. ಹಿಂದೆ ಇಂತಹ ಸಂದರ್ಭಗಳಲ್ಲಿ ಶಸ್ತ್ರಚಿಕಿತ್ಸೆ ಅನಿವಾರ್ಯವಾಗಿತ್ತು. ಆದರೆ ಇಬಸ್ ತಂತ್ರಜ್ಞಾನದಲ್ಲಿ ಶಸ್ತ್ರಚಿಕಿತ್ಸೆ ಇಲ್ಲದೆ, ಅಲ್ಟ್ರಾಸೌಂಡ್ ಸಹಾಯದಿಂದ ಶ್ವಾಸನಾಳದ ಒಳಗೆ ಹೋಗಿ, ನೈಜ ಸಮಯದಲ್ಲಿ ಗೆಡ್ಡೆ ಅಥವಾ ಸೋಂಕನ್ನು ವೀಕ್ಷಿಸಬಹುದು. ಅಲ್ಲದೆ, ಅತ್ಯಂತ ನಿಖರವಾಗಿ ಅಲ್ಲಿನ ಅಂಗಾಂಶದ ಮಾದರಿಯನ್ನು (ಟಿಶ್ಯೂ ಸ್ಯಾಂಪಲ್) ಸಂಗ್ರಹಿಸಬಹುದು. ಇದರಿಂದ ರೋಗ ಪತ್ತೆ ಸುಲಭವಾಗುತ್ತದೆ ಎಂದರು.

ಶ್ವಾಸಕೋಶ ವಿಭಾಗದ ವೈದ್ಯೆ ಡಾ.ಕೆ.ಸ್ಫೂರ್ತಿ ಮಾತನಾಡಿ, ಇಬಸ್ ಎಂಬುದು ಕ್ಯಾನ್ಸರ್, ಕ್ಷಯರೋಗ, ಮತ್ತು ಶ್ವಾಸಕೋಶದ ಗೆಡ್ಡೆಗಳನ್ನು ಪತ್ತೆಹಚ್ಚಲು ಇರುವ ಅತ್ಯಂತ ಸುರಕ್ಷಿತ ವಿಧಾನವಾಗಿದೆ. ಇದರಲ್ಲಿ ರೋಗಿಗೆ ಯಾವುದೇ ನೋವಾಗುವುದಿಲ್ಲ ಮತ್ತು ಶೀಘ್ರವಾಗಿ ಚೇತರಿಸಿಕೊಳ್ಳಬಹುದು.

ಮೈಸೂರಿನ ರೋಗಿಗಳು ಇನ್ನು ಮುಂದೆ ಇಂತಹ ಪರೀಕ್ಷೆಗಳಿಗಾಗಿ ಬೆಂಗಳೂರಿನಂತಹ ದೊಡ್ಡ ನಗರಗಳಿಗೆ ಹೋಗುವ ಅಗತ್ಯವಿಲ್ಲ ಎಂದು ತಿಳಿಸಿದರು.

ಮಣಿಪಾಲ್ ಆಸ್ಪತ್ರೆಯ ನಿರ್ದೇಶಕ ಬಿ.ಜೆ.ಸಂದೀಪ್ ಪಟೇಲ್ ಮಾತನಾಡಿ, "ಶಸ್ತ್ರಚಿಕಿತ್ಸೆಯಿಲ್ಲದೆ ನಿಖರವಾಗಿ ಅಂಗಾಂಶದ ಮಾದರಿ ಸಂಗ್ರಹಿಸಲು ಇಬಸ್ (ಇಃಗಖ) ಸಹಕಾರಿ. ಇದರಿಂದ ರೋಗ ಪತ್ತೆ ವೇಗವಾಗಿ ನಡೆದು, ತಕ್ಷಣವೇ ಚಿಕಿತ್ಸೆ ಆರಂಭಿಸಬಹುದು. ಈ ಸೌಲಭ್ಯವು ಮೈಸೂರಿನಲ್ಲೇ ಲಭ್ಯವಿರುವುದರಿಂದ ರೋಗಿಗಳು ಬೇರೆ ನಗರಗಳಿಗೆ ಅಲೆದಾಡುವುದು ತಪ್ಪುತ್ತದೆ ಎಂದರು.

ಯಶಸ್ವಿ ಚಿಕಿತ್ಸೆ: 54 ವರ್ಷದ ತಾಯಮ್ಮ ಹಲವು ತಿಂಗಳುಗಳಿಂದ ಜ್ವರ ಮತ್ತು ನಿರಂತರ ಕೆಮ್ಮಿನಿಂದ ಬಳಲುತ್ತಿದ್ದರು. ಪರೀಕ್ಷೆ ಮಾಡಿದಾಗ ಅವರ ಶ್ವಾಸಕೋಶದ ಅತ್ಯಂತ ಸೂಕ್ಷ್ಮ ಪ್ರದೇಶದಲ್ಲಿ (ಎದೆಯ ಮಧ್ಯಭಾಗ) ಒಂದು ಗೆಡ್ಡೆ ಇರುವುದು ಪತ್ತೆಯಾಯಿತು. ಇದು ಹೃದಯ ಮತ್ತು ಶ್ವಾಸಕೋಶದ ನಡುವಿನ ಬಹಳ ಕಿರಿದಾದ ಜಾಗವಾದ್ದರಿಂದ ಸಾಮಾನ್ಯ ಪರೀಕ್ಷೆಗಳಿಂದ ನಿಖರವಾದ ಮಾಹಿತಿ ತಿಳಿಯುತ್ತಿರಲಿಲ್ಲ. ಹಲವು ಆಸ್ಪತ್ರೆಗಳಿಗೆ ಹೋಗಿದ್ದರೂ ಕಾಯಿಲೆ ಏನೆಂದು ಪತ್ತೆಯಾಗದೆ ಕುಟುಂಬದವರು ಆತಂಕಕ್ಕೆ ಒಳಗಾಗಿದ್ದರು. ಬಳಿಕ ಹೊಸ ತಂತ್ರಜ್ಞಾನದಿಂದ ಕಾಯಿಲೆ ಪತ್ತೆ ಹಚ್ಚಿ ಚಿಕಿತ್ಸೆ ನೀಡಿರುವುದಾಗಿ ಇದೇ ವೇಳೆ ತಿಳಿಸಿದರು.

# ಒಳ ಮೀಸಲಾತಿ ಜಾರಿಗೊಳಿಸಿದರೆ ಉಗ್ರ ಹೋರಾಟ

## ಅಯ್ಯನಪುರ ಶಿವಕುಮಾರ್ ಎಚ್ಚರಿಕೆ

**ಚಾಮರಾಜನಗರ,:** ಒಳ ಮೀಸಲಾತಿ ಜಾರಿ ಸಂಬಂಧ ಇಂದು ನಡೆಯುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ಸಲ್ಲಿಸಿರುವ ವರದಿಯನ್ನು ಸರ್ಕಾರ ತಿರಸ್ಕರಿಸಬೇಕು ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟದ ಚಾಮರಾಜನಗರ ಜಿಲ್ಲಾಧ್ಯಕ್ಷ ಅಧ್ಯಕ್ಷ ಅಯ್ಯನಪುರ ಶಿವಕುಮಾರ್ ಸರ್ಕಾರವನ್ನು ಎಚ್ಚರಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ,ನ್ಯಾ.ನಾಗಮೋಹನ್ದಾಸ್ ವರದಿ ಅವೈಜ್ಞಾನಿಕವಾಗಿದ್ದು ಕೆಲ ಷರತ್ತುಗಳನ್ನು ಉಲ್ಲಂಘಿಸ ಲಾಗಿದೆ. ಸರಿಯಾಗಿ ಸಮೀಕ್ಷೆ ಮಾಡಿಲ್ಲ. ಆದ್ದರಿಂದ ಈ ವರದಿಯನ್ನು ತಿರಸ್ಕಾರ ಮಾಡಬೇಕು. ಒಂದು ವೇಳೆ ಒಳ ಮೀಸಲಾತಿ ನೀಡುವುದಾದರೆ ಈಗಾಗಲೇ ಸರ್ಕಾರ ಮಾಡಿರುವ ಹಿಂದುಳಿದ ವರ್ಗಗಳ ಜನಗಣತಿ ಆಧರಿಸಿ ಜಾರಿ ಮಾಡಲಿ ಎಂದರು.

ಒಳ ಮೀಸಲಾತಿ ನ್ಯಾಯಾಲಯದಲ್ಲಿ ಇರುವುದರಿಂದ ಸರ್ಕಾರ ಒಳಮೀಸಲಾತಿ ಜಾರಿ ಮಾಡುವುದು ನ್ಯಾಯಾಂಗದ ಉಲ್ಲಂಘನೆ ಆಗುತ್ತದೆ.ಮಾನ್ಯತೆ ಹೊಂದಿಲ್ಲದ ದತ್ತಾಂಶ ಇಲ್ಲದ ಹೊರತು. ಯಾವ ಸೂತ್ರವನ್ನು ಬಳಸಿದರು ಪರಿಶಿಷ್ಟ ಜಾತಿಯ ಹಿಂದಿನ ಶೇ.15 ರಷ್ಟು ಒಳ ಮೀಸಲಾತಿ ಅಸಾಧ್ಯವಾಗಿದೆ ಎಂದು ತಿಳಿಸಿದರು.



ಗ್ರಾಮೀಣ ಪ್ರದೇಶಗಳಲ್ಲಿ ಹಾಗೂ ನಗರ ಪ್ರದೇಶದ ಪ್ರತಿ ವಾರ್ಡ್ಗಳಲ್ಲೂ ಬೂತ್ ತೆರೆಯುವುದಾಗಿ ತಿಳಿಸಲಾಗಿತ್ತು. ಆದರೆ, ಒಂದು ಬೂತ್ ಕೂಡ ತೆರೆದಿಲ್ಲ. ಬಲಗೈ ಜಾತಿ ಸಂಖ್ಯೆಯನ್ನು ಕಡಿಮೆ ಮಾಡುವ ಉದ್ದೇಶದಿಂದ 16 ಜಾತಿಗಳನ್ನು ಅಲೆಮಾರಿ ಗುಂಪಿಗೆ ಸೇರಿಸಲಾಗಿದೆ. ಅಲ್ಲದೇ ಬಲಗೈ ಜನಾಂಗಗಳಿಗೆ ಬರಬೇಕಾದ ಆದಿಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಗುಂಪಿಗೆ ಸೇರಿದ 4,74,954 ಜನರನ್ನು ಎಡಗೈ ಹಾಗೂ ಬಲಗೈ ಜನಾಂಗಗಳಿಗೆ ಸಮಾನನಾಗಿ ಹಂಚಿಕೆ ಗಳ ಮಾಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಎಸ್ಸಿ, ಎಸ್ಟಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರಯ್ಯ ವಿರುದ್ಧ ಕ್ರಮವಹಿಸುವಂತೆ ಭಾಸ್ಕರ್ ಪ್ರಸಾದ್ ಹೇಳಿಕೆ ನೀಡಿದ್ದು ಚಂದ್ರಶೇಖರಯ್ಯ ಅವರದ್ದು ವೈಯಕ್ತಿಕ ಹೇಳಿಕೆಯಲ್ಲ. ಅದು ಜನಾಂಗದ ಹೇಳಿಕೆಯಾಗಿದೆ. ಅವರ ವಿರುದ್ಧ ಯಾವುದೇ ಕ್ರಮ ಆಗಬಾರದು. ಅವರ ಹಿಂದೆ ಜನಾಂಗ ನಿಲ್ಲಲಿದೆ ಎಂದರು.

ಬಲಗೈ ಸಮುದಾಯಕ್ಕೆ ಸೇರಿದ 16 ಜಾತಿಗಳ 1.38.653.ಜನಸಂಖ್ಯೆಯನ್ನು ಅಲೆಮಾರಿ ಗುಂಪಿಗೆ ಸೇರಿಸಿರುವುದು. ಬಲಗೈ ಸಮುದಾಯಕ್ಕೆ ಸೇರಿದ 7 ಜಾತಿಗಳ 2.58.915 ಜನಸಂಖ್ಯೆ ಯನ್ನು ಎಡಗೈ ಸೇರಿಸಿರುವುದು. ಆದಿಕರ್ನಾಟಕ, ಆದಿ ದ್ರಾವಿಡ , ಆದಿಆಂಧ್ರ ಈ ಜಾತಿಗಳ ಸುಮಾರು 4.74.954 ಜನಸಂಖ್ಯೆ ಯ ಮೂಲ ಜಾತಿಗಳನ್ನು ಕಂಡುಹಿಡಿಯದೆ ಶೇ.1 ರಷ್ಟು ಮೀಸಲಾತಿ ನಿಗಪಡಿಸಲು ಶಿಫಾರಸ್ಸು ಮಾಡಿರುವುದು ಆದೇಶದ ವಿರುದ್ದವಾಗಿದೆ ಇದನ್ನು ತೀವ್ರವಾಗಿ ಖಂಡಿಸುತ್ತೇನೆ. ಅಲ್ಲದೆ ಸಚಿವ ಸಂಪುಟದಲ್ಲಿ ಶೇ 50–50 ಅನುಪಾತ ಮೀಸಲಾತಿ ಹಂಚಿಕೆ ಮಾಡಿರುವುದು ಸಂವಿಧಾನಕ್ಕೆ ವಿರುದ್ದವಾಗಿ ಎಂದು ದೂರಿದರು.

ಪತ್ರಿಕಾಗೋಷ್ಠಿಯಲ್ಲಿ ತಾ.ಪಂ.ಮಾಜಿ ಅಧ್ಯಕ್ಷ ಆರ್.ಮಹದೇವ್, ಮುಖಂಡರಾದ ಸೋಮೇಶ್ವರ್, ನಗರಸಬಾ ಮಾಜಿ ಸದಸ್ಯ ರ್.ಪಿ.ನಂಜುಂಡಸ್ವಾಮಿ, ನಲ್ಲೂರು ಮಹದೇವಸ್ವಾಮಿ, ಸೋಮಣ್ಣ, ವೀರಭದ್ರಸ್ವಾಮಿ, ಗೋವಿಂದರಾಜು ಹಾಜರಿದ್ದರು.

# ಸ್ಕ್ಯಾನಿಂಗ್ ಕೇಂದ್ರಗಳ ತನಿಖೆಗೆ ಸಮಿತಿ

## ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಪರಿಶೀಲಿಸಲು ಆದೇಶ




**ಮಂಡ್ಯ:** ಕೆ.ಆರ್.ಪೇಟೆ ಪಟ್ಟಣದ ಎರಡು ಖಾಸಗಿ ಡಯಾಗ್ನಾಸ್ಟಿಕ್ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಕಾನೂನುಬಾಹಿರವಾಗಿ ಭ್ರೂಣಲಿಂಗ ಪತ್ತೆ ಮಾಡುತ್ತಿರುವುದು ಲೋಕಾಯುಕ್ತ ಪೋಲೀಸರು ಪತ್ತೆ ಹಚ್ಚಿದ ಹಿನ್ನಲೆಯಲ್ಲಿ ಎಲ್ಲಾ ಸ್ಕಾ ಯನಿಂಗ್ ಸೆಂಟರ್‌ಗಳನ್ನು ಪರಿಶೀಲಿಸಲು ಸಮಿತಿ ರಚನೆ ಮಾಡಬೇಕು ಎಂದು ಡಾ. ಕುಮಾರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಡಯಾಗ್ನಾಸ್ಟಿಕ್ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಕಾನೂನುಬಾಹಿರವಾಗಿ ಭ್ರೂಣಲಿಂಗ ಪತ್ತೆ ಮಾಡುತ್ತಿರುವುದು ಲೋಕಾಯುಕ್ತ ಪೋಲೀಸರು ಪತ್ತೆ ಹಚ್ಚಿದ ಹಿನ್ನಲೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದ್ದು ಸ್ಕಾ ಯನಿಂಗ್ ಸೆಂಟರ್‌ಗಳ ಬಗ್ಗೆ ದೂರು ಸಂಬಂಧ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಸ್ಕಾ ಯನಿಂಗ್ ಸೆಂಟರಗಳಲ್ಲಿ ನಿಯಮನುಸಾರವಾಗಿ ಸ್ಕಾ ಯನಿಂಗ್ ವಿವರಗಳನ್ನು ನಮೂದಿಸಿಲ್ಲದರ ಬಗ್ಗೆ ವರದಿಯಾಗಿದ್ದು ಎಲ್ಲಾ ಅಧಿಕಾರಿಗಳೊಂದಿಗೆ ಜಿಲ್ಲಾ ಸಮಿತಿಯನ್ನು ಕರೆದು ಸಭೆಯನ್ನು ನಡೆಸಲಾಗಿದ್ದು ಗರ್ಭ ಪೂರ್ವ ಪ್ರಸವ ಪೂರ್ವ ಭ್ರೂಣಲಿಂಗ ನಿಷೇಧ ಕಾಯ್ದೆ ಪಿಪಿಸಿಪಿಎನ್ಡಿಟಿ ಕಾಯ್ದೆ ಪ್ರಕಾರ ನಿಯಮ ಉಲ್ಲಂಘನೆ ಮಾಡಿದವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಲೋಕಾಯುಕ್ತ ಪೊಲೀಸರು ಪ್ರಕರಣವನ್ನು ದಾಖಲು ಮಾಡಿರುವ ಬಗ್ಗೆ ಎಲ್ಲಾ ವಿವರಗಳನ್ನು ಇಲಾಖೆಯಿಂದ ಸಮರ್ಪಕವಾಗಿ ನೀಡಿರುತ್ತಾರೆ. ತಪು ಪ ಎಸಗಿರುವ ಸ್ಕಾ ಯನಿಂಗ್ ಸೆಂಟರ್ ಗಳ ವಿರುದ್ಧ ಕೂಡಲೇ ನಿಯಮಾನುಸಾರ ಕ್ರಮವನ್ನು ಜರುಗಿಸುವಂತೆ ಕ್ರಮ ಆಗಬೇಕು ಎಂದರು.

ಅಪ್ರಾಪ್ತ ಬಾಲ ಗರ್ಭಿಣಿಯರನ್ನು ನಿಯಮ ಬಾಹಿರವಾಗಿ ಸ್ಕಾ ಯನಿಂಗ್ ಮಾಡಿರುವ ಮಾಹಿತಿಯನ್ನು ಸಮರ್ಪಕವಾಗಿ ಸಂಬಂಧಪಟ್ಟಂತಹ ಇಲಾಖೆಗೆ ವರದಿ ಸಲ್ಲಿಸದ್ದು ಅಂತಹ ಸ್ಕಾ ಯನಿಂಗ್ ಸೆಂಟರ್ ವಿರುದ್ಧ ಸೂಕ್ತ ಪ್ರಕರಣಗಳನ್ನು ದಾಖಲು ಮಾಡುವುದು ಹಾಗೂ ಅವರ ಸ್ಕಾ ಯನಿಂಗ್ ಸೆಂಟರ್ ನ ಲೈಸೆನ್ಸ್ ಅನ್ನು ರದ್ದುಪಡಿಸಿ ಸ್ಕಾ ಯನಿಂಗ್ ಸೆಂಟರ್ ಗಳನ್ನು ಮುಚ್ಚಲು ಕ್ರಮವಹಿಸುವಂತೆ ಸೂಚಿಸಿದರು.

ತಾಲ್ಲೂಕು ಮಟ್ಟದ ಸಮಿತಿಯನ್ನು ರಚಿಸಲಾಗಿದ್ದು ಸದರಿ ಸಮಿತಿಯ ಸಂಪೂರ್ಣ ಜವಾಬ್ದಾರಿ ತಾಲೂಕು ಆರೋಗ್ಯ ಅಧಿಕಾರಿಗಳು ತೆಗೆದುಕೊಂಡು ಕಳೆದ ಮುಂದಿನ 10 ದಿವಸದ ಒಳಗಡೆ ಜಿಲ್ಲೆಯಲ್ಲಿರುವ ಎಲ್ಲಾ ಸ್ಕಾ ಯನಿಂಗ್ ಸೆಂಟರ್ ಗಳನ್ನು ಕಡ್ಡಾಯವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ತಿಳಿಸಿದರು

ಸದರಿ ಜಾಗೃತ ದಳದವರು ಪರಿಶೀಲನೆ ನಡೆಸಿದ ಬಗ್ಗೆ ಕಳೆದ ಆರು ತಿಂಗಳ ಎಫ್.ಆರ್ ಫಾರಂ ಅನ್ನು ಪಡೆದು ಆಡಿಟ್ ಮಾಡಿಸಬೇಕು ಮತ್ತು ನಿಯಮಾನುಸಾರ ನಿಗದಿ ನಮೂನೆಯಲ್ಲಿ ವರದಿಯನ್ನು ಸಲ್ಲಿಸಬೇಕು ಎಂದು ತಿಳಿಸಿದರು.

18 ವರ್ಷದೊಳಗಿನ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳ ಸ್ಕಾ ಯನಿಂಗ್ ಗೆ ಸಂಬಂಧಪಟ್ಟಂತಹ ಸಂದರ್ಭದಲ್ಲಿ ಅಂತಹ ಪ್ರಕರಣಗಳಿದ್ದಲ್ಲಿ ಪೋಕ್ಸೋ ಕಾಯ್ದೆ ಪ್ರಕಾರ ಸಂಬಂಧಪಟ್ಟ ಸ್ಥಳೀಯ ಪೊಲೀಸ್ ಠಾಣೆ ಮತ್ತು ಸಂಬಂಧಪಟ್ಟ ಪ್ರಾಧಿಕಾರಕ್ಕೆ ವರದಿ ಮಾಡಿ ಕಾನೂನು ಉಲ್ಲಂಘನೆ ಮಾಡಿರುವ ಸ್ಕಾ ಯನಿಂಗ್ ಸೆಂಟರ್ ಗಳ ವಿರುದ್ಧ ಕ್ರಮ ಕೈಗೊಳ್ಳುವುದಲ್ಲದೆ ಕೂಡಲೇ ಪ್ರಕರಣಗಳನ್ನು ದಾಖಲು ಮಾಡಲು ಕ್ರಮ ವಹಿಸಬೇಕು ಎಂದರು .

ಎಲ್ಲಾ ಸ್ಕಾ ಯನಿಂಗ್ ಸೆಂಟರ್ ಗಳಿಗೆ ಸಂಬಂಧಪಟ್ಟಂತೆ ಕಾಲ ಕಾಲಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಬೇಕು ಹಾಗೂ ಉಪ ವಿಭಾಗ ಅಧಿಕಾರಿಗಳು ಪಿ.ಸಿ.ಪಿ.ಎನ್.ಡಿ.ಟಿ ಕಾಯ್ದೆ ಪ್ರಕಾರ ಉಪ ವಿಭಾಗಾಧಿಕಾರಿಗಳ ನೇತೃತ್ವದಲ್ಲಿ ಮೇಲ್ವಿಚಾರಣೆ ಮಾಡಿ ಮಾಸಿಕ ವರದಿಯನ್ನ ಸಲ್ಲಿಸುವುದು ಹಾಗೂ ಭ್ರೂಣಲಿಂಗ ಪತ್ತೆಯು ಅಪರಾಧ ಎಂಬುದರ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಹಾಗೂ ಆಸ್ಪತ್ರೆ, ಕ್ಲಿನಿಕ್, ಲ್ಯಾಬ್, ಸ್ಕಾ ಯನಿಂಗ್ ಸೆಂಟರ್ ಗಳಿಗೆ ಕಡ್ಡಾಯವಾಗಿ ಮುಂದಿನ 10 ದಿವಸದೊಳಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಿಗದಿತ ನಮೂನೆಯಲ್ಲಿ ವರದಿಯನ್ನು ಸಲ್ಲಿಸಲು ಕ್ರಮವನ್ನು ವಹಿಸಲು ಸೂಚಿಸಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಆನಂದ.ಎಂ,ಜಿಲ್ಲಾ ಉಪ ವಿಭಾಗ ಅಧಿಕಾರಿ ಶಿವಮೂರ್ತಿ, ಪಾಂಡವಪುರ ಉಪ ವಿಭಾಗ ಅಧಿಕಾರಿ ಶ್ರೀನಿವಾಸ್, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ಬೆಟ್ಟಸ್ವಾಮಿ, ಕುಷ್ಠ ರೋಗ ನಿರ್ಮೂಲನ ಅಧಿಕಾರಿ ಸೋಮಶೇಖರ್,ಜಿಲ್ಲಾ ಸರ್ವೇಕ್ಷಣ ಅಧಿಕಾರಿ ಡಾ. ಕುಮಾರ್, ಮಲೇರಿಯಾ ನಿಯಂತ್ರಣ ಅಧಿಕಾರಿ ಕಾಂತರಾಜು, ಡಾ. ಕೆ. ಪಿ. ಅಶ್ವಥ್ ರವರು ಉಪಸ್ಥಿತರಿದ್ದರು.

# ಅಹಂ ಇಲ್ಲದ ಮೇರುನಟ ರಾಜ್

## ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಿ.ಪಿ.ಪ್ರಕಾಶ್ ಅಭಿಪ್ರಾಯ



ಮಂಡ್ಯ: ಡಾ.ರಾಜ್ ಕುಮಾರ್ ಮೇರು ನಟರಾಗಿದ್ದರೂ ಸಹ ಸ್ವಲ್ಪವೂ ಕೂಡ ಅಹಂ ಇಲ್ಲದೆ ಸಾಮಾನ್ಯರಲ್ಲಿ ಸಾಮನ್ಯರಾಗಿದ್ದು ಕನ್ನಡ ಚಿತ್ರರಂಗಕ್ಕೆ ಅಪಾರ ಕೀರ್ತಿ ತಂದು ಕೊಟ್ಟವರು ಅವರ ಸರಳ ಜೀವನ ಶೈಲಿ ಹಾಗೂ ನೈತಿಕ ಮೌಲ್ಯ ಆದರ್ಶಗಳನ್ನು ಯುವ ಜನತೆಯೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್ ರವರು ತಿಳಿಸಿದರು.

ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸರ್ಕಾರಿ ಮಹಿಳಾ ಕಾಲೇಜು (ಸ್ವಾಯತ್ತ) ಇವರ ಸಂಯುಕ್ತಾಶ್ರಯದಲ್ಲಿ ನಗರದ ಸರ್ಕಾರಿ ಮಹಿಳಾ ಕಾಲೇಜಿನ (ಸ್ವಾಯತ್ತ)ಸಭಾಂಗಣ ದಲ್ಲಿ ನಡೆದ *ವರನಟ ಡಾ. ರಾಜ್ ಕುಮಾರ್ ರವರ 97 ನೇ ಜನ್ಮದಿನಾಚರಣೆ

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಡಾ. ರಾಜ್ ಕುಮಾರ್ ರವರು ಉನ್ನತ ಪ್ರಶಸ್ತಿಯನ್ನು ಪಡೆದು ನಿರ್ಮಾಪಕರನ್ನೇ ಅನ್ನದಾತರೆಂದು ಅವರಿಗೆ ಗೌರವ ಪೂರ್ವಕವಾಗಿ ನಡೆಸಿಕೊಳ್ಳುತ್ತಿದ್ದರು ಅವರ ಸರಳ ಜೀವನ ಎಲ್ಲರಿಗೂ ಮಾದರಿ ಎಂದರು.

ಮೈಸೂರು ಮಹಾರಾಣಿ ಮಹಿಳಾ ಮತ್ತು ನಿರ್ವಹಣಾ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಡಾ. ನಾಗರಾಜ ಪಿ. ವಿ ರವರು ವಿಶೇಷ ಉಪನ್ಯಾಸ ನೀಡಿ ಕನ್ನಡ ಚಿತ್ರರಂಗದ ಮೇರುನಟ, ಗಾಯಕ ಮತ್ತು ಸಾಂಸ್ಕೃತಿಕ ಐಕಾನ್. 'ನಟಸಾರ್ವಭೌಮ' ಎಂದೇ ಕರೆಯಲ್ಪಡುವ ಇವರು 5 ದಶಕಗಳ ವೃತ್ತಿಜೀವನದಲ್ಲಿ 200ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದಾರೆ. ಪದ್ಮಭೂಷಣ ಮತ್ತು ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತರಾದ ಇವರು, ಕನ್ನಡ ಚಿತ್ರರಂಗದ ಧ್ರುವತಾರೆ ಎಂದು ತಿಳಿಸಿದರು.

ಕನ್ನಡ ಚಿತ್ರಗಳಲ್ಲಿ ಪೌರಾಣಿಕ. ಸಾಮಾಜಿಕ. ಕೌಟುಂಬಿಕ ಸೇರಿದಂತೆ ಸಮಾಜಕ್ಕೆ ಎಲ್ಲಾ ರೀತಿಯಲ್ಲೂ ಕಲಾ ಮಾಧ್ಯಮದ ಮೂಲಕ ಉತ್ತಮ ಸಂದೇಶವನ್ನು ನೀಡಿದ ಮೇರು ನಟ ರಾಜಕುಮಾರ ರವರ ಎಲ್ಲಾ ಚಿತ್ರಗಳು ಯಾವುದೇ ಪಾತ್ರ. ಸಂಭಾಷಣೆ ಹಾಗೂ ಹಾಡುಗಳು ಸಹ ಸೆನ್ಸಾರ್ ಕತ್ತರಿಗೆ ಒಳಪಟ್ಟಿಲ್ಲ ಹೀಗಾಗಿ ಒಳ್ಳೆಯ ಸಂಸ್ಕಾರ ಕಲಿಯಲು ಆದರ್ಶವನ್ನು ಅಳವಡಿಸಿಕೊಳ್ಳಲು ರಾಜ್ ಕುಮಾರ ರವರ ಚಿತ್ರಗಳು ಮಾದರಿಯಾಗಿವೆ ಎಂದರು.

ಯುವ ಸಮೂಹವು ನೈತಿಕತೆ, ಮಾನವೀ ಯತೆ ಮೌಲ್ಯಗಳನ್ನು ಬೆಳಿಸಿಕೊಳ್ಳಬೇಕು ಹಾಗೂ ದೇಶ ಅಭಿವೃದ್ಧಿ ಹಾಗೂ ಭವಿಷ್ಯ ಯುವ ಜನತೆಯಿಂದ ಮಾತ್ರ ಸಾಧ್ಯ ಯುವ ಜನತೆಯೂ ಮಾನವೀಯತೆಯ ಮೌಲ್ಯಗಳನ್ನು ಬೆಳಿಸಿಕೊಳ್ಳಬೇಕು ಎಂದು ತಿಳಿಸಿದರು.

ಇದೆ ಸಂದರ್ಭದಲ್ಲಿ ಸರ್ಕಾರಿ ಮಹಿಳಾ ಕಾಲೇಜಿನ ಸಮಾಜ ಶಾಸ್ತ್ರ ಪ್ರಾಧ್ಯಾಪಕರಾದ ಮನ್ಸೂರ್ ಪಾಷ ರಾಜ್ ಕುಮಾರ ಚಿತ್ರಗೀತೆಯನ್ನು ಹಾಡಿ ಗಮನಸೆಳೆದರು.

ವೇದಿಕೆಯಲ್ಲಿ ವಾರ್ತಾ ಮತ್ತು ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ಟಿ .ಕೆ . ಹರೀಶ್, ಸರ್ಕಾರಿ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ರವಿಕಾಂತ್ ಲಂಬಾಣಿ, ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ವೇದಿಕೆ ರಾಜ್ಯ ಅಧ್ಯಕ್ಷರಾದ ಸಂದೇಶ್. ಹಿರಿಯ ಪತ್ರಕರ್ತರಾದ ದೇವರಾಜು ಕೊಪ್ಪ. ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕರಾದ ದಾನೇಗೌಡ, ಶಿವರಾಜು ಹಾಗೂ ಕಾಲೇಜಿನ ಪ್ರಾಧ್ಯಾಪಕರುಗಳು ಉಪಸ್ಥಿತರಿದ್ದರು.

# ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆ




ಮಂಡ್ಯ: ಮೇ ತಿಂಗಳಲ್ಲಿ ಬರುವ ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮೇ ಮಾಹೆಯಲ್ಲಿ ಬರುವ ಮಹನೀಯರು ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮೇ 1ರಂದು ಭಗವಾನ್ ಬುದ್ಧ ಜಯಂತಿ, ಮೇ 10ರಂದು ಶಿವಶರಣೆ ಹೇಮರೆಡ್ಡಿ, ಮಲ್ಲಮ್ಮ ಜಯಂತಿಯನ್ನು ಎಲ್ಲಾರ ಸಹಕಾರ ಸಮನ್ವಯತೆ ಹಾಗೂ ಸಾಮರಸ್ಯದಿಂದ ಮಹನೀಯರ ಚಿಂತನೆ ಮತ್ತು ಆದರ್ಶಗಳನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಕಾರ್ಯಕ್ರಮವನ್ನು ಆಚರಿಸಲು ಸೂಚಿಸಿದರು. ಜನ್ಮ ದಿನದ ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ಗಣ್ಯರಿಗೆ ಹಾಗೂ ಎಲ್ಲಾ ಅಧಿಕಾರಿಗಳು ಹಾಗೂ ಸಂಘ ಸಂಘಟನೆಗಳಿಗೆ ತಲುಪಿಸುವಂತೆ ಸೂಚಿಸಿದರು.

ವೇದಿಕೆಯನ್ನು ಸ್ವಚತೆಯಿಂದ ನೋಡಿ ಕೊಳ್ಳುವುದು. ಮಹನೀ ಯರ ಭಾವಚಿತ್ರಗಳ ಬ್ಯಾನರ್ ಗಳನ್ನು ಅಳವಡಿಸಬೇಕು ಮತ್ತು ಸಮುದಾಯದಲ್ಲಿ ಸಾಧನೆ ಮಾಡಿರುವಂತಹ ಸಮುದಾಯದ ಗಣ್ಯರಿಗೆ ಗೌರವವನ್ನು ಸೂಚಿಸಬೇಕು.ಸಮುದಾಯದ ವಿಚಾರಕರು ಮತ್ತು ಚಿಂತಕರಿಂದ ಸಮುದಾಯದ ಅರಿವಿನ ಬಗ್ಗೆ ಉಪನ್ಯಾಸವನ್ನು ಮಾಡಿಸಬೇಕು ಎಂದು ಹೇಳಿದರು. ವೇದಿಕೆ ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ವೇದಿಕೆ ಅಲಂಕಾರ–ಸೌಂಡ್ಸ್ ಲೈಟಿಂಗ್ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಬಿ. ವಿ. ನಂದೀಶ್,ನಾಗರೀಕ ಹಿರಿಯ ಹಾಗೂ ಅಂಗವಿಕಲರ ಕಲ್ಯಾಣ ಅಧಿಕಾರಿ ಕೋಮಲ್ ಕುಮಾರ್, ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಲೋಕೇಶ್ ಮೂರ್ತಿ ಮುಖಂಡರಾದ ಅಮ್ಜದ್ ಪಾಶ, ಡಾ. ಶಿವರಾಜು, ಡಾ. ವೆಂಕಟೇಶ್, ರಾಮಯ್ಯ, ವೆಂಕಟಗಿರಿ ಉಪಸ್ಥಿತರಿದ್ದರು.

# ಅಕ್ರಮ ಪರಿಹಾರ: ಕ್ರಮಕ್ಕೆ ಆಗ್ರಹ




**ಮಂಡ್ಯ:** ಬೆಂಗಳೂರು– ಮೈಸೂರು ರಾಷ್ಟ್ರೀಯ ಹೆದ್ದಾರಿ ಭೂ–ಸ್ವಾಧೀನದಲ್ಲಿ ಸರಕಾರಿ ರಸ್ತೆಗೆ ಅಕ್ರಮವಾಗಿ ಪರಿಹಾರ ಪಡೆದವರ ವಿರುದ್ಧ ಸೂಕ್ತ ಕ್ರಮವಹಿಸುವಂತೆ ಕರುನಾಡ ಸೇವಕರು ಸಂಘಟನೆಯ ರಾಜ್ಯ ವಕ್ತಾರ ಎಂ.ಬಿ.ನಾಗಣ್ಣಗೌಡ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೂದನೂರು ಗ್ರಾ.ಪಂ ವ್ಯಾಪ್ತಿಯ ಬೂದನೂರು ಸರ್ವೇ ನಂ.382/7ರಲ್ಲಿ ಮಂಡ್ಯ ನಗರ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿರ್ಮಿಸಿರುವ ಬ್ಯಾಂಕ್ ಕಾಲೋನಿ ರಸ್ತೆ ಸರಕಾರದ ಆಸ್ತಿಯಾಗಿದೆ. ಅದನ್ನು ನಿಯಮ ಬಾಹಿರವಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಅಕ್ರಮ ಪರಿಹಾರ ಪಡೆದಿದ್ದಾರೆ ಎಂದು ದೂರಿದರು. ಈ ಸಂಬಂಧ ವಿಶೇಷ ರಾಷ್ಟ್ರೀಯ ಹೆದ್ದಾರಿ–275ರ ಬೆಂಗಳೂರು–ಮೈಸೂರು ವಿಭಾಗದ ಭೂಸ್ವಾಧೀನಾಧೀಕಾರಿ ಹಾಗೂ ಸಮಕ್ಷಮ ಪ್ರಾಧಿಕಾರಿಗೆ ಜಿಲ್ಲಾಧಿಕಾರಿ ಡಾ.ಕುಮಾರ ಅವರ ಪತ್ರ ಬರೆದು ಪರಿಹಾರ ವಸೂಲಿ ಮಾಡುವಂತೆ ಸೂಚಿಸಿದ್ದಾರೆ. ಎಂದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಗೂಗಲ್ ನಕ್ಷೆ ಸಮೀಕ್ಷೆಯ ಪಟ್ಟಿ ಬಿಡುಗಡೆ ಮಾಡಬೇಕು. ಕರ್ತವ್ಯ ಲೋಪವೆಸಗಿದ ವಿನಯ್‌ಕುಮಾರ್ ಅಮಾನತು ಮಾಡಬೇಕು. ಪರಿಹಾರ ವಸೂಲಿ ಮಾಡಿ ಬೂದನೂರು ಗ್ರಾ.ಪಂಗೆ ವಾಪಸ್ ನೀಡಬೇಕು. ಅಕ್ರಮವಾಗಿ ವಶಪಡಿಸಿಕೊಂಡ ಸಿ.ಎ ಸೈಟ್‌ಗಳನ್ನು ಗ್ರಾ.ಪಂ ವಶಕ್ಕೆ ನೀಡಬೇಕು. ಅಕ್ರಮದಲ್ಲಿ ಭಾಗಿಯಾದ ಎಲ್ಲರ ಮೇಲು ಕ್ರಿಮಿನಲ್ ಮೊಕದ್ದಮೆ ಹೂಡಬೇಕೆಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಸ್ವಂತಮನೆ ನಮ್ಮ ಹಕ್ಕು ಹೋರಾಟ ಸಮಿತಿಯ ಸಂಚಾಲಕ ಬಿ.ಕೆ.ಸತೀಶ್, ರೈತ ಸಂಘದ ತಾಲೂಕು ಅಧ್ಯಕ್ಷ ಬಿ.ಸಿ.ಪುಟ್ಟಸ್ವಾಮಿ, ರಾಜುಗೌಡ ಇತರರಿದ್ದರು.

# ಪ್ರತಿಯೊಬ್ಬರು ಸೇವಾ

## ಮನೋಭಾವನೆ ಬೆಳೆಸಿಕೊಳ್ಳಿ: ಜಿಟಿಡಿ



ಮೈಸೂರು: ಜೀವನದಲ್ಲಿ ಪ್ರತಿಯೊಬ್ಬರು ಸೇವಾ ಮನೋಭಾವನೆ ಬೆಳೆಸಿಕೊಂಡು, ಬಡ, ಮಧ್ಯಮ ವರ್ಗದ ಜನರಿಗೆ ತಮ್ಮಿಂದಾಗುವ ಸೇವಾ ಕಾರ್ಯಗಳನ್ನು ಮಾಡಬೇಕು ಎಂದು ಶಾಸಕ ಜಿ.ಟಿ.ದೇವೇಗೌಡ ಅಭಿಪ್ರಾಯಪಟ್ಟರು.

ದಿ.ಡಾ.ರಾಜ್ ಕುಮಾರ್ 97ನೇ ಜನ್ಮದಿನಾಚರಣೆ ಅಂಗವಾಗಿ ಇಲ್ಲಿನ ದಟ್ಟಗಳ್ಳಿಯಲ್ಲಿರುವ ನಯನಕುಮಾರ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಡಾ.ರಾಜ್‌ಕುಮಾರ್ ಅವರ ಬಗ್ಗೆ ಅಪಾರ ಪ್ರೀತಿ, ಅಭಿಮಾನ ಹೊಂದಿರುವ ಕುಮಾರ್ ಅವರು ಜನಸೇವೆಯಲ್ಲಿ ಎಂದಿಗೂ ಮುಂದು. ಇದೇ ನಿಟ್ಟಿನಲ್ಲಿ ನಯನ ಕುಮಾರ್ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಾಣ ಮಾಡಿ, ಅತಿ ಕಡಿಮೆ ದರದಲ್ಲಿ ಬಡ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುತ್ತಿದ್ದಾರೆ. ಸುಮಾರು 4 ವರ್ಷದ ಹಿಂದೆ ಲೋಕಾರ್ಪಣೆಗೊಂಡ ಆಸ್ಪತ್ರೆಯಲ್ಲಿ ಸಾಕಷ್ಟು ಜನರಿಗೆ ಉಚಿತ ಚಿಕಿತ್ಸೆಯನ್ನೂ ಒದಗಿಸುವ ಮೂಲಕ ಸೇವಾ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ ಎಂದರು

# "ಸವಾಲು ಎದುರಿಸಿ, ಸಾರ್ಥಕತೆ ಪಡೆಯಿರಿ"



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 05



ಬದುಕು ಅನಿಶ್ಚಿತತೆಗಳ ಸಾಗರ. ಇಲ್ಲಿ ಎದುರಾಗುವ ಸವಾಲುಗಳು ಬದುಕನ್ನು ಆಸಕ್ತಿದಾಯಕ ವಾಗಿಸಿದರೆ, ಅವುಗಳನ್ನು ಮೆಟ್ಟಿ ನಿಲ್ಲುವ ಛಲವು ಜೀವನವನ್ನು ಅರ್ಥಪೂರ್ಣವಾಗಿಸುತ್ತದೆ. ಇಂದಿನ ಯುವ ಪೀಳಿಗೆಗೆ ಸೋಲು ಎನ್ನುವುದು ಅಂತ್ಯವಲ್ಲ, ಅದು ಹೊಸ ಅಧ್ಯಾಯದ ಮುನ್ನುಡಿ ಎಂಬ ಸತ್ಯದ ಅರಿವಾಗಬೇಕಿದೆ.

ಪಾಂಡವರ ಅಶ್ವಮೇಧ ಯಾಗದ ಸಂದರ್ಭದಲ್ಲಿ, ಮಹಾವೀರ ಅರ್ಜುನನಿಗೇ ಸವಾಲು ಹಾಕಿದವನು ಅವನ ಪುತ್ರ ಬಬ್ರುವಾಹನ. ತನ್ನೆದುರಿಗಿರುವುದು ಅಜೇಯ ವೀರ ಅರ್ಜುನನೆಂದು ತಿಳಿದಿದ್ದರೂ ಬಬ್ರುವಾಹನ ಎದೆಗುಂದಲಿಲ್ಲ. ಮಮಕಾರ ಮತ್ತು ಅಹಂಕಾರದ ಸವಾಲುಗಳನ್ನು ಮೀರಿ ನಿಂತ ಆತ, ತನ್ನ ಗುರಿನಿಷ್ಠೆಯಿಂದ ಅರ್ಜುನನನ್ನೇ ಮಣಿಸಿದನು. ಈ ಕಥೆ ನಮಗೆ ಕಲಿಸುವುದು ಏನೆಂದರೆ ಸವಾಲು ಎಷ್ಟೇ ದೊಡ್ಡದಿದ್ದರೂ, ಅಚಲ ಆತ್ಮವಿಶ್ವಾಸವಿದ್ದರೆ ಅಸಾಧ್ಯವಾದುದನ್ನೂ ಸಾಧಿಸಬಹುದು.

ಸೋಲು ಎಂಬುದು ನಮಗೆ ವಿಧಿಸಿದ ಶಿಕ್ಷೆಯಲ್ಲ, ಬದಲಿಗೆ ಅದು ನಮ್ಮ ದೋಷಗಳನ್ನು ತಿದ್ದಿ ಮತ್ತಷ್ಟು ಗಟ್ಟಿಗೊಳಿಸುವ ಉತ್ತಮ ಶಿಕ್ಷಕ. ಜೀವನದ ಸವಾಲುಗಳಿಗೆ ಶರಣಾಗುವ ಬದಲು, ಅವುಗಳನ್ನು ಎದುರಿಸುವ ಧೈರ್ಯ ತೋರಿದಾಗ ಮಾತ್ರ ಬದುಕಿನಲ್ಲಿ ನಿಜವಾದ ಸಾರ್ಥಕತೆ ಲಭಿಸುತ್ತದೆ. ನಮ್ಮ ಗುರಿ ಸದಾ ಸ್ಪಷ್ಟವಾಗಿರಲಿ; ಏಕೆಂದರೆ ಯಾವುದೇ ಶ್ರಮವಿಲ್ಲದೆ ಸುಲಭವಾಗಿ ಸಿಗುವ ಗೆಲುವಿಗಿಂತ, ಹೋರಾಡಿ ಪಡೆಯುವ ಯಶಸ್ಸು ಹೆಚ್ಚು ಮೌಲ್ಯಯುತವಾದುದು ಮತ್ತು ದೀರ್ಘಕಾಲ ಬಾಳುವಂತದ್ದು.

ಯುವ ಮಿತ್ರರೇ, ಸವಾಲುಗಳು ನಿಮ್ಮನ್ನು ಸೋಲಿಸಲು ಬರುವುದಿಲ್ಲ, ಬದಲಿಗೆ ನಿಮ್ಮೊಳಗಿನ ಸುಪ್ತ ಶಕ್ತಿಯನ್ನು ಜಾಗೃತಗೊಳಿಸಲು ಬರುತ್ತವೆ. ಸಂಕಷ್ಟಗಳ ಸುಳಿಯಿಂದ ಧೀರತನದಿಂದ ಮೇಲೆದ್ದು ಬಂದಾಗ ಮಾತ್ರ ನಿಮ್ಮ ವ್ಯಕ್ತಿತ್ವಕ್ಕೆ ಮೆರುಗು ಸಿಗುತ್ತದೆ. ಬಬ್ರುವಾಹನನಂತೆ ಸವಾಲುಗಳನ್ನು ಸ್ವಾಗತಿಸಿ, ಛಲದಿಂದ ಹೋರಾಡಿ ನಿಮ್ಮ ಜೀವನವನ್ನು ಸಾರ್ಥಕವಾಗಿಸಿಕೊಳ್ಳಿ.

# ಅಗಣಿತ ಆರೋಗ್ಯ ಭಾಗ್ಯಗಳ ರಾಜ ಈ ಕರಬೂಜ ಬೀಜ



✍ಸೌಮ್ಯಸನತ್

ಬೇಸಿಗೆಯ ಸುಡುವ ಬಿಸಿಲು ಮತ್ತು ಬಿಸಿಲಿನ ವಾತಾವರಣದಲ್ಲಿ, ದೇಹಕ್ಕೆ ತಂಪು ಮತ್ತು ತಾಜಾತನವನ್ನು ನೀಡುವ ಹಣ್ಣುಗಳಲ್ಲಿ, ಬಹಳ ಜನಪ್ರಿಯವಾದ ಹಣ್ಣು ಕರಬೂಜ. ಈ ಹಣ್ಣು ಮಸ್ಕ್ ಮೆಲನ್, ಶಮಾಮ್, ಕರಬೂಜ ಎಂಬ ವಿವಿಧ ಹೆಸರುಗಳಿಂದ ಕರೆಯಲ್ಪಡುತ್ತದೆ. ಇದು ಸಿಹಿ ರುಚಿ, ನೀರಿನ ಅಂಶದಿಂದ ಸಮೃದ್ಧವಾಗಿದ್ದು ದೇಹಕ್ಕೆ ಉಲ್ಲಾಸವನ್ನು ಕೊಡುವುದಲ್ಲದೆ ಶಾಖದಿಂದ ಪರಿಹಾರ ನೀಡಿ ಆರೋಗ್ಯಕ್ಕೂ ಹಲವು ವಿಧಗಳಲ್ಲಿ ಪ್ರಯೋಜನಕಾರಿಯಾಗಿದೆ. ಕರಬೂಜ ಹಣ್ಣಿನಲ್ಲಿ ಸುಮಾರು 90% ನೀರು ಇದ್ದು, ಬೇಸಿಗೆಯಲ್ಲಿ ನಿರ್ಜಲೀಕರಣವನ್ನು ತಡೆಯಲು ಸಹಾಯ ಮಾಡುತ್ತದೆ. ದಿನದ ಗದ್ದಲ ಮತ್ತು ಬಿಸಿಲಿನ ನಂತರ ಕರಬೂಜ ತಿನ್ನುವುದು ದೇಹವನ್ನು ತಂಪಾಗಿಸುತ್ತದೆ.

ಕರ್ಬೂಜ ಹಣ್ಣನ್ನು ಕತ್ತರಿಸುವ ಸಂದರ್ಭದಲ್ಲಿ ಸಿಪ್ಪೆಯ ಜೊತೆಯಲ್ಲಿ ಅದರ ಬೀಜವನ್ನು ಎಸೆದುಬಿಡುತ್ತೇವೆ. ಈ ರೀತಿ ಮಾಡುವುದರಿಂದ ನಮಗೆ ತಿಳಿಯದಂತೆ ನಮ್ಮ ದೇಹಕ್ಕೆ ಸೇರಬೇಕಿದ್ದ ಉತ್ತಮ ಪೋಷಕಾಂಶವನ್ನು ಕಳೆದುಕೊಳ್ಳುತ್ತೇವೆ.

ಆರೋಗ್ಯ ಭಾಗ್ಯ

ಖರ್ಬೂಜದ ಬೀಜಗಳು ವಿಟಮಿನ್ ಎ. ಕೆ ,ಸಿ , ಬಿ1, ಇ ಹಾಗೂ ಸತು, ಪ್ರೊಟೀನ್, ಆರೋಗ್ಯಕರ ಕೊಬ್ಬುಗಳು ಮತ್ತು ಕಾರ್ಬೋಹೈಡ್ರೇಟ್ ಅಂಶಗಳನ್ನು ಹೇರಳವಾಗಿ ಹೊಂದಿರುತ್ತದೆ.

ಭಾರತೀಯ ಅಡುಗೆ ಮನೆಗಳಲ್ಲಿ ಕರ್ಬೂಜದ ಬೀಜಗಳನ್ನು ನಾನಾ ರೀತಿಯಲ್ಲಿ ಬಳಕೆ ಮಾಡುತ್ತಾರೆ. ಕರ್ಬೂಜದ ಬೀಜಗಳ ಪ್ರಯೋಜನಗಳನ್ನು ನಾವಿಲ್ಲಿ ತಿಳಿದುಕೊಳ್ಳೋಣ.

**ಸೇವಿಸುವ ಆಹಾರದಲ್ಲಿ ಕರ್ಬೂಜಬೀಜದ ಸತ್ವವಿರಲಿ**



ಕರ್ಬೂಜದ ಬೀಜಗಳನ್ನು ಅಡುಗೆಯಲ್ಲಿ ಬಳಕೆ ಮಾಡುವ ಮುನ್ನ ಇದನ್ನು ಚೆನ್ನಾಗಿ ತೊಳೆದು ಒಣಗಿಸಿಕೊಳ್ಳಬೇಕು. ಬೀಜಗಳನ್ನು ತಿರುಳಿನಿಂದ ಬೇರ್ಪಡಿಸಿದ ಬಳಿಕ ಅದನ್ನು ಚೆನ್ನಾಗಿ ತೊಳೆದುಕೊಳ್ಳಿ. ಸಂಪೂರ್ಣವಾಗಿ ಬೀಜಗಳು ತಿರುಳಿನಿಂದ ಹೊರಬಂದ ಬಳಿಕ ಸಾಮಾನ್ಯ ಶಾಖದಲ್ಲಿ ಅದನ್ನು ಒಣಗಿಸಲು ಬಿಡಿ.




ಬೀಜದ ತೇವಾಂಶಗಳೆಲ್ಲ ಮಾಯವಾಗಿ ಅವುಗಳು ಒಣಗಿದ ಬಳಿಕ ಬೀಜಗಳನ್ನು ನೇರವಾಗಿ ಹಾಗೆಯೇ ಸೇವಿಸಬಹುದು. ಇಲ್ಲವಾದಲ್ಲಿ ಸಲಾಡ್ಗಳಲ್ಲಿ, ಬ್ರೆಡ್, ಬನ್ ಇಲ್ಲವೇ ಕೇಕ್ಗಳಲ್ಲಿ ಸಿಂಪಡಿಸಿ ಕೂಡ ತಿನ್ನಬಹುದು. ಯಾವುದೇ ಸಿಹಿತಿಂಡಿಗಳು, ಸ್ಮೂದಿಗಳಲ್ಲಿ ಕೂಡ ಕರ್ಬೂಜದ ಬೀಜಗಳನ್ನು ಬಳಕೆ ಮಾಡ ಬಹುದಾಗಿದೆ.

ಸಸ್ಯಾಹಾರಿಗಳು ತಮ್ಮ ದೇಹದಲ್ಲಿ ಪ್ರೊಟೀನ್ ಶೇಖರಣೆಯನ್ನು ಹೆಚ್ಚಿಸಿಕೊಳ್ಳಲು ಕರ್ಬೂಜದ ಬೀಜಗಳು ಒಳ್ಳೆಯ ಕೊಡುಗೆ ನೀಡುತ್ತವೆ. ಅಲ್ಲದೇ ಹಾರ್ಮೋನ್ಗಳ ಆರೋಗ್ಯಕ್ಕೆ ಕೂಡ ಸಹಾಯ ಮಾಡುತ್ತವೆ. ದೇಹದಲ್ಲಿ ಕೊಲೆಸ್ಟ್ರಾಲ್ ಕಡಿಮೆ ಮಾಡುವ ಮತ್ತು ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವ ಸಾಮರ್ಥ್ಯ ಕೂಡ ಈ ಬೀಜಗಳಿಗೆ ಇದೆ. ಈ ಬೀಜಗಳು ಗಾತ್ರದಲ್ಲಿ ಚಿಕ್ಕದಾಗಿದ್ದರೂ ಸಹ ಹೃದಯದ ಆರೋಗ್ಯವನ್ನು ಸುಧಾರಿಸುವಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತವೆ.

1) ತಿತೂಕ ಇಳಿಸುವ ಯೋಚನೆಯಲ್ಲಿದ್ದರೆ ಕರ್ಬೂಜ ಹಣ್ಣಿನ ಬೀಜಗಳನ್ನು ಸೇವಿಸಬೇಕು. ಈ ಬೀಜಗಳು ಫೈಬರ್ ಅಂಶದಲ್ಲಿ ಸಮೃದ್ಧವಾಗಿವೆ, ಇದು ತೂಕವನ್ನು ಕಡಿಮೆ ಮಾಡಲು ಸಹಕಾರಿ.

) ಕರ್ಬೂಜ ಹಣ್ಣಿನ ಬೀಜಗಳನ್ನು ಸೇವಿಸುವುದರಿಂದ ಮೆದುಳಿನಲ್ಲಿ ಉತ್ತಮ ರಕ್ತ ಪರಿಚಲನೆ ಉಂಟಾಗುತ್ತದೆ, ಇದರಿಂದ ಮನಸ್ಸು ಶಾಂತವಾಗಿರುತ್ತದೆ



3) ಕರಬೂಜ ಹಣ್ಣು ಬೀಟಾ ಕ್ಯಾರೋಟಿನ್ ಅಂಶ ಹೊಂದಿದ್ದು, ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ, ಇದು ದೃಷ್ಟಿಗೆ ಹೊಳಪು ನೀಡುವುದಲ್ಲದೇ ಕಣ್ಣಿನ ಪೊರೆಯನ್ನು ತಡೆಯುತ್ತದೆ.

4) ಕರಬೂಜವು ಹೆಚ್ಚಿನ ಶೇಕಡಾವಾರು ನೀರನ್ನು ಹೊಂದಿರುತ್ತದೆ, ಇದು ಅಜೀರ್ಣ, ಮಲಬದ್ಧತೆ ಮತ್ತು ಗ್ಯಾಸ್ ಸೇರಿದಂತೆ ಎಲ್ಲಾ ರೀತಿಯ ಜೀರ್ಣಕಾರಿ ಸಮಸ್ಯೆಗಳಿಗೆ ಸಹಾಯ ಮಾಡುತ್ತದೆ.

5) ಬಿ ಜೀವಸತ್ವಗಳು, ವಿಶೇಷವಾಗಿ ಬಿ6, ನರಮಂಡಲವನ್ನು ಬೆಂಬಲಿಸುತ್ತವೆ ಮತ್ತು ಮೆದುಳಿಗೆ "ಹಿತವಾದ ಭಾವನೆ" ನೀಡುವ ರಾಸಾಯನಿಕವಾದ ಸಿರೊಟೋನಿನ್ ಅನ್ನು ಉತ್ಪಾದಿಸಲು ಸಹಾಯ ಮಾಡುತ್ತದೆ.

6) ಜೀರ್ಣತೆ ಹಾಗೂ ಮಲಬದ್ಧತೆಯ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಕರ್ಬುಜ ಹಣ್ಣು ಒಂದು ಒಳ್ಳೆಯ ಔಷಧಿಯಾಗಿದೆ.

7) ಅಧಿಕ ರಕ್ತದೊತ್ತಡ ಸಮಸ್ಯೆಯಿಂದ ಬಳಲುತ್ತಿರುವವರು ಕರ್ಬೂಜ ಹಣ್ಣನ್ನು ನಿಯಮಿತವಾಗಿ ಸೇವಿಸುವುದು ಉತ್ತಮ.

8) ಕರ್ಬೂಜಹಣ್ಣಿನಲ್ಲಿ ವಿಟಮಿನ್ ಸಿ ಅಂಶ ಅಧಿಕವಾಗಿದೆ. ಇದರಲ್ಲಿರುವ ಆಂಟಿ ಆಕ್ಸಿಡೆಂಟ್ ಅಂಶಗಳು ರೋಗ ನಿರೋಧಕ ಶಕ್ತಿಯ ಹೆಚ್ಚಳಕ್ಕೆ ಸಹಾಯ ಮಾಡುತ್ತವೆ.

9) ಕರ್ಬೂಜದ ಬೀಜಗಳು ಉತ್ತಮ ಪೋಷಕಾಂಶಗಳನ್ನು ಅಗಾಧ ಪ್ರಮಾಣದಲ್ಲಿ ಹೊಂದಿರುವುದರಿಂದ ಸೂಪರ್ ಫುಡ್ ಎಂದೇ ಕರೆಯಬಹುದಾಗಿದೆ.

10) ಕರಬೂಜ ಬೀಜಗಳಲ್ಲಿ ಮೈಗ್ರೇನ್, ನಿದ್ರಾಹೀನತೆ, ಖಿನ್ನತೆಯ ಅಸ್ವಸ್ಥತೆ ಮುಂತಾದ ರೋಗಲಕ್ಷಣಗಳನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

11) ಕರಬೂಜದ ಜ್ಯೂಸ್ ಕುಡಿಯುತ್ತಿದ್ದರೆ ಕಜ್ಜಿ, ಗಜಕರ್ಣದಂತಹ ಚರ್ಮರೋಗ ವಾಸಿಯಾಗುತ್ತದೆ

12) ನಿದ್ರಾಹೀನತೆಯಿಂದ ಬಳಲುತ್ತಿರುವವರು ಈ ಹಣ್ಣು ಸೇವನೆ ಮಾಡಿದರೆ ಪರಿಹಾರ ಕಾಣಬಹುದು.

13) ಇದರಲ್ಲಿರುವ ವಿಟಮಿನ್ ಬಿ ಅಂಶ ಕೂದಲು ಉದುರುವುದನ್ನು ನಿಯಂತ್ರಿಸುತ್ತದೆ. ಶ್ಯಾಂಪೂ ಹಾಕಿ ಕೂದಲು ತೊಳೆದು ಕರಬೂಜ ಹಣ್ಣಿನ ತಿರುಳಿನಿಂದ ಮಸಾಜ್ ಮಾಡಿ, 10 ನಿಮಿಷದ ಬಳಿಕ ತೊಳೆಯಬೇಕು.

14) ಈ ಹಣ್ಣಿನಲ್ಲಿ ವಿಟಮಿನ್ ಸಿ ಚರ್ಮ ಸುಕ್ಕಾಗದಂತೆ ತಡೆಯುತ್ತದೆ. ಅಕಾಲ ಮುಪ್ಪನ್ನು ತಡೆಯುತ್ತದೆ.

15) ಕರಬೂಜ ಹಣ್ಣು ಸೌಂದರ್ಯವರ್ಧಕವೂ ಆಗಿದೆ. ಈ ಹಣ್ಣಿನಲ್ಲಿ ನೀರಿನಾಂಶ ಹೆಚ್ಚಿರುವುದರಿಂದ ಇದರ ಸೇವನೆಯಿಂದ ಚರ್ಮ ಕಾಂತಿಯುಕ್ತಯಾಗುತ್ತದೆ.

**ಯಾರೆಲ್ಲ ಸೇವಿಸಬಾರದು**

1) ಅಲರ್ಜಿ ಅಥವಾ ಚರ್ಮದ ಸಮಸ್ಯೆಗಳಿಂದ ಬಳಲುತ್ತಿರುವವರು ಕರಬೂಜ ಹಣ್ಣನ್ನು ತಿನ್ನಬಾರದು ಎಂದು ತಜ್ಞರು ಹೇಳುತ್ತಾರೆ. ಏಕೆಂದರೆ ಕೆಲವರಿಗೆ ಈ ಹಣ್ಣನ್ನು ಸೇವಿಸಿದ ತಕ್ಷಣ ದದ್ದುಗಳು, ತುರಿಕೆ, ಊತ ಉಂಟಾಗುತ್ತದೆ. ಹಾಗಾಗಿ ಅಂತವರು ವೈದ್ಯರ ಸಲಹೆಯ ಮೇರೆಗೆ ಮಾತ್ರ ಈ ಹಣ್ಣಿನ ಸೇವನೆ ಮಾಡುವುದು ಬಹಳ ಉತ್ತಮ.


2) ಸಾಮಾನ್ಯವಾಗಿ ಸಕ್ಕರೆ ಕಾಯಿಲೆ ಇರುವವರು ಕರಬೂಜ ಹಣ್ಣನ್ನು ಹೆಚ್ಚು ತಿನ್ನಬಾರದು. ತಜ್ಞರ ಪ್ರಕಾರ, ಈ ಹಣ್ಣಿನ ಗ್ಲೈಸೆಮಿಕ್ ಸೂಚ್ಯಂಕವು 60– 80 ರ ನಡುವೆ ಇರುತ್ತದೆ. ಇದನ್ನು ಅತಿಯಾಗಿ ಸೇವಿಸಿದರೆ, ರಕ್ತದಲ್ಲಿನ ಸಕ್ಕರೆ ಮಟ್ಟವು ಹೆಚ್ಚಾಗಬಹುದು. ಆದ್ದರಿಂದ ಮಧುಮೇಹ ಹೊಂದಿರುವವರು ಇದನ್ನು ತಿನ್ನುವ ಮೊದಲು ವೈದ್ಯರ ಸಲಹೆ ಪಡೆಯುವುದು ಉತ್ತಮ.

**ಸೂಚನೆ :** ಈ ಲೇಖನವು ಮನೆಮದ್ದುಗಳು ಮತ್ತು ಸಾಮಾನ್ಯ ಮಾಹಿತಿಯನ್ನು ಆಧರಿಸಿದೆ. ಇದನ್ನು ಅಳವಡಿಸಿಕೊಳ್ಳುವ ಮೊದಲು ವೈದ್ಯಕೀಯ ಸಲಹೆಯನ್ನು ತಪ್ಪದೇ ತೆಗೆದುಕೊಳ್ಳಿ.

## ಪದ ಬಂಧ

ಜ್ಯೋತಿ ರಾಜೇಶ್






### ಎಡದಿಂದ ಬಲಕ್ಕೆ

1. ಮನಸಿಗಾದ ಈ ಅಸಂತೃಪ್ತಿಯಲ್ಲಿ ಮಾನ ಅಡಗಿದೆ.....(5)
3. ಮರಣದಿಂದಾದ ಮೈಲಿಗೆ ಇದು......(3)
5. ವಸ್ತುವನ್ನು ಗೋಚರಿಸುವಂತೆ ಮಾಡಿದ ಕೆಲಸ ಹಿಂದುಮುಂದಾಗಿದೆ....(5)
7. ಕುದುರೆಯ ಮೇಲೆ ಹಾಸುವ ಚರ್ಮದ ವಸ್ತುವಿದು....(2)
9. ಮೂರಕ್ಷರದ ತಾಳ್ಮೆಯಿದು......(3)
11. ಮೋಸ ಮಾಡಿದವ ಹಾಕಿದ್ದೇ ಇದು?....(2)
13. ......ಇಲ್ಲಿ ನಿಮ್ಮಿಷ್ಟದ ಪದ ಬರೆಯಿರಿ.......(5)
15. ಕಾಯುವಿಕೆಗೆ ಹೀಗೊಂದು ಪದ....(3)
16. ಮಳೆಯಲ್ಲಿ ಭೀಕರವಾಗಿರುವ ಗಾಳಿ ತಿರುಗು ಮುರುಗಾಗಿ ಬೀಸುತ್ತಿದೆ.....(5)

### ಮೇಲಿನಿಂದ ಕೆಳಕ್ಕೆ.....

1. ನಾಲ್ಕಕ್ಷರದ ಚಿನ್ನ ಕೊನೆಯಲ್ಲಿ ದೀರ್ಘವಾಗಿದೆ..(4)
2. ರಣದಲ್ಲಿ ಧರಿಸಿದ್ದನ್ನು ಹೀಗೆ ಹೇಳಿ.....(3)
4. ಲೌಕಿಕವಾದ ಯಾವ ಹಿಡಿತಕ್ಕೂ ಒಳಗಾಗದ್ದು ಅಡಿ ಮೇಲಾಗಿದೆ.....(3)
6. ನಡವಳಿಕೆಯನ್ನು ಹೀಗೆ ಬರೆಯಿರಿ.....(3)
8. ನೆಗಡಿಯಾದಾಗ ಬಂದಿದ್ದು ತಲೆ ಕೆಳಗಾಗಿದೆ.....(2)
9. ಸುಲಭ ದ ಸಮಾನಾರ್ಥಕ ಪದ, ಒಂದು ಹೆಸರಂತಿದೆ.....(3)
10. ಎರಡಕ್ಷರದ ಜಳಕ ಕೊನೆಯಲ್ಲಿ ದೀರ್ಘವಾಗಿದೆ.....(2)
12. ಎಲ್ಲ ಮಕ್ಕಳ ಪ್ರೀತಿಯ ಮಾಮ ತಲೆ ಕೆಳಗಾಗಿದ್ದಾನೆ.....(4)
13. ಹರೆಯದ ಹುಡುಗಿ ಕೊನೆಯಲ್ಲಿ ದೀರ್ಘವಾಗಿದ್ದಾಳೆ.....(3)
14. ಗದ್ದೆಯ ಅಂಚಿಗಿರುವ ಸಣ್ಣ ದಿಬ್ಬಕ್ಕೆ ಹೀಗೊಂದು ಹೆಸರು.....(3)

# "ಅಕ್ಷರಗಳ ಮೇಲಿನ ಅತ್ಯಾಚಾರ" ಅಂದಿಗಿಂತಲೂ ಇಂದೇ ಭಯಾನಕ...!



✍ಹಿರಿಯೂರು ಪ್ರಕಾಶ್.

ಇಡೀ ವಿಶ್ವವನ್ನೆಲ್ಲಾ ಸುತ್ತುತ್ತಲೇ ವಿಶ್ವೇಶ್ವರನಾಗಿರುವ ಮಾಧ್ಯಮಲೋಕದ ಹಿರಿಯ ಪತ್ರಕರ್ತರೊಬ್ಬರ ಅಂಕಣ ಬರಹದ ವಾಣಿಯೊಂದನ್ನು ಎರಡು ದಿನಗಳ ಹಿಂದೆ ಓದಿದೆ.

ಅವರ ಆ ಬರಹದಲ್ಲಿ ದಶಕಗಳ ಹಿಂದಿನ ದಿನಗಳಲ್ಲಿ ಪತ್ರಿಕಾ ಮಾಧ್ಯಮಗಳು , ಸುದ್ದಿಗಳು, ಪತ್ರಕರ್ತರಿಗೆ ರಾಜಕಾರಣಿಗಳಿಂದ ಸಿಗುತ್ತಿದ್ದ ಗೌರವ ಹಾಗೂ ಸಮಾಜದಲ್ಲಿ ಮಾಧ್ಯಮಗಳಿಗಿದ್ದ ಬೆಲೆ, ಘನತೆ , ಮೌಲ್ಯ....ಇತ್ಯಾದಿ ವಿಚಾರಗಳ ಬಗೆಗೆ ಅಚ್ಚುಕಟ್ಟಾಗಿ ಅವಲೋಕಿಸಿದ್ದಾರೆ. ಅಂದಿನ ಮಾಧ್ಯಮಲೋಕದ ವಿದ್ಯಮಾನಗಳನ್ನು ಇಂದಿನ ಕಾಲಘಟ್ಟಕ್ಕೆ ಹೋಲಿಸುತ್ತಲೇ ಅಂದು ಕಡೆಗಣಿಸಲ್ಪಟ್ಟಿದ್ದ ಓದುಗ ಇಂದು ಎಷ್ಟು ಮಹತ್ವವುಳ್ಳವನೆಂಬುದನ್ನು ಸ್ವಾರಸ್ಯಕರವಾಗಿ ವಿವರಿಸಿದ್ದಾರೆ.

ಇಂದಿನ ಪತ್ರಿಕಾ ಓದುಗ, ಪತ್ರಕರ್ತನಿಗಿಂತ ಮುಂದಿದ್ದಾನೆ. ಟಿವಿ ವೀಕ್ಷಕ, ಆಂಕರ್ ಗಿಂತ ಚೆನ್ನಾಗಿ ತಿಳಿದುಕೊಂಡಿದ್ದಾನೆ. ಸಾಹಿತಿಗಿಂತ ಓದುಗನೇ ವಿಷಯವನ್ನು ಚೆನ್ನಾಗಿ ಮಂಡಿಸಬಲ್ಲ. ನುರಿತ ವಿಮರ್ಶಕನಿಗಿಂತ ಒಂದು ಕೈ ಮೇಲಾಗಿ ಪುಸ್ತಕವನ್ನಾಗಲಿ, ಸಿನಿಮಾವನ್ನಾಗಲಿ, ವಿಮರ್ಶೆ ಮಾಡಬಲ್ಲ. ಪತ್ರಕರ್ತನ ಬರಹದಲ್ಲಿರುವ ತಪ್ಪುಗಳನ್ನು ಪಟ್ಟಿ ಮಾಡಿ, ಎಲ್ಲರ ಎದುರು ಬೆತ್ತಲೆಯಾಗಿಸಬಲ್ಲ... ಇತ್ಯಾದಿಯಾಗಿ ಮಾಧ್ಯಮ ಕುರಿತಾದ ಅಂದಿನ ಮತ್ತು ಇಂದಿನ ವಾತಾವರಣವನ್ನು ಎಳೆ ಎಳೆಯಾಗಿ ಬಿಡಿಸಿದ್ದಾರೆ.

ಈ ಎಲ್ಲವೂ ಸರಿ.

ಆದರೆ ಜಗತ್ತಿನವಾಣಿಯ ಸಂಪಾದಕರು ವಾಸ್ತವದ ಒಂದು ಮುಖವನ್ನಷ್ಟೇ ಹೇಳಿದ್ದಾರೆಯೇ ಹೊರತು ಇನ್ನೊಂದು ಮುಖದ ಬಗ್ಗೆ ಚಕಾರವನ್ನೇ ಎತ್ತಿಲ್ಲ. ಇಂದು ಮಾಧ್ಯಮಗಳ ಟ್ರೆಂಡು ಬದಲಾಗಿರುವುದನ್ನು ಒತ್ತಿ ಹೇಳುವುದರ ಜೊತೆಗೆ ಡಿಜಿಟಲ್ ಮೀಡಿಯಾಗಳು ಸೋಷಿಯಲ್ ಮೀಡಿಯಾಗಳು ಉಂಟು ಮಾಡುತ್ತಿರುವ ಅಪಾಯಕಾರಿ ಸಂವಹನದ ಪರಿಣಾಮಗಳ ಬಗೆಗೂ ಆ ಹಿರಿಯ ಪತ್ರಕರ್ತರು ಬೆಳಕು ಚೆಲ್ಲಬೇಕಿತ್ತು. ಅಸಲು ಅದೇ ಸೆನ್ಸಿಟೀವ್ ಟಾಪಿಕ್ಕು.

ಹಿಂದೆ ಸೋಷಿಯಲ್ ಮೀಡಿಯಾಗಳು ಇಲ್ಲದಿದ್ದ ಕಾಲದಲ್ಲಿ ಪತ್ರಿಕೆಗಳಲ್ಲಿ ಬಂದಿದ್ದನ್ನೇ ಬಹುಪಾಲು ಜನ ನಂಬಲೇ ಬೇಕಾದ ವಾತಾವರಣವಿದ್ದರೂ ಅದು ಸಮಾಜಕ್ಕೆ ಅಂಥಾ ಅಪಾಯಕಾರಿಯಾಗಿರಲಿಲ್ಲ. ಏಕೆಂದರೆ ಯಾವ ಪತ್ರಿಕೆಯಾಗಲೀ ಅಥವಾ ಮಾಧ್ಯಮಗಳಾಗಲೀ ತೀರ ಮೂರೂಬಿಟ್ಟು ಫೇಕು ಸುದ್ದಿಗಳನ್ನು ಪ್ರಕಟಿಸುವ ಕೀಳುಮಟ್ಟಕ್ಕೆ ಹೋಗುತ್ತಿರಲಿಲ್ಲ. ಅಷ್ಟರಮಟ್ಟಿಗೆ ಮಾಧ್ಯಮಕ್ಕೆ ಘನತೆ ಉಳಿದಿತ್ತು. ಆದರೆ ಇಂದಿನ ಯೂಟ್ಯೂಬುಗಳ ಪ್ರಜಾಪ್ರಭುತ್ವೀಕರಣದ ಕಾಲಘಟ್ಟದಲ್ಲಿ ಸುಳ್ಳುಸುದ್ದಿಗಳೇ ಎಲ್ಲಾ ಡಿಜಿಟಲ್ ಮೀಡಿಯಾಗಳಲ್ಲಿ ರಾರಾಜಿಸುತ್ತಿವೆ. ಎಲ್ಲರೂ ರಚನಾತ್ಮಕತೆಗಿಂತ ರೋಚಕತೆಯ ಹಿಂದೆ ಬಿದ್ದು ಸುಳ್ಳುಗಳನ್ನು ಹುಟ್ಟಿಸಿ, ಹರಡಿಸಿ ಮಜಾ ತೆಗೆದುಕೊಳ್ಳುತ್ತಿದ್ದಾರೆ. ವಿದ್ಯಾವಂತರೂ ಬುದ್ಧಿವಂತರೂ ಸಹಾ ಕೆಲವೊಂದು ಫೇಕು ಸುದ್ದಿಗಳೆಂದು ಗೊತ್ತಿದ್ದರೂ ಒಂದೊಮ್ಮೆ ಅದು ತಮಗಾಗದವರ ಬಗ್ಗೆ ಇದ್ದಲ್ಲಿ ಅದನ್ನು ಬೇಕಾಗಿಯೇ ಜಾಲತಾಣಗಳಲ್ಲಿ ಹರಡಿ ವಿಕೃತ ಆನಂದ ಪಡೆಯುತ್ತಿದ್ದಾರೆ. ಜನರಿಗೆ ಸುಳ್ಳುಸುದ್ದಿಗಳೇ ಹೆಚ್ಚು ಸಂತೋಷ ಕೊಡುವಂತಹ ವಿಕೃತ ವಾತಾವರಣ ಸೃಷ್ಟಿಯಾಗಿದೆ. ಅದರಲ್ಲೂ ಜಾತಿ ,ಮತ, ಧರ್ಮ ರಾಜಕೀಯಗಳಂತಹ ಸೂಕ್ಷ್ಮ ವಿಚಾರಗಳಲ್ಲಿ ಜನರ ನಡುವೆ ಕಂದಕಗಳನ್ನು ಸೃಷ್ಟಿಸುವ ಪ್ರವೋಕಿಂಗ್ ಸುದ್ದಿಗಳು ಮಾತ್ರವೇ ರಾರಾಜಿಸುತ್ತಿವೆ.

ರಾಜಕೀಯ ಪಕ್ಷಗಳಂತೂ ತಮ್ಮ ಐಟಿ ಸೆಲ್ ಗಳನ್ನು ಇಂಥಾ ಸುಳ್ಳುಸುದ್ದಿಗಳನ್ನು ಸೃಷ್ಟಿಸುವ ಕಾರ್ಖಾನೆಗಳನ್ನಾಗಿ ಮಾಡಿಕೊಂಡು ಅದಕ್ಕೆಂದೇ ಕೋಟ್ಯಂತರ ಹಣ ಚೆಲ್ಲುತ್ತಿದ್ದಾರೆ. ಫೋನ್ ಕದ್ದಾಲಿಕೆ, ಕ್ಯಾಸೆಟ್, ಪೆನ್ ಡ್ರೈವು, ಪೆನ್ ಕ್ಯಾಮೆರಾ , ಸಿಡಿ ಗಳ ಕಾಲ ಮುಗಿದು ಈಗೇನಿದ್ದರೂ ಎಐ ಗಳ ಮೂಲಕ ಹೊಸ ಲೋಕವನ್ನೇ ಸೃಷ್ಟಿಸಿ ಹಸಿ ಸುಳ್ಳನ್ನೂ ಅಪ್ಪಟ ಸತ್ಯವನ್ನಾಗಿಸಿ ಜನರ ಕಿವಿಯಲ್ಲಿ ಹೂ ಇಟ್ಟಿದ್ದಾರೆ. ಫೇಕು ಸುದ್ದಿಗಳನ್ನು ಸೃಷ್ಟಿಸುವವರಿಗೆ, ಎದುರಾಳಿಗಳ ತೇಜೋವಧೆ ಮಾಡುವವರಿಗೆ, ರಾಜಕೀಯ ಲಾಭ ಪಡೆಯುವವರಿಗೆ



, ಸಮಾಜಘಾತುಕ ಶಕ್ತಿಗಳಿಗೆ ಇವೆಲ್ಲವೂ ಬೆಲ್ಲದಷ್ಟೇ ಸವಿಯಾದ ಸ್ಟಫ್ ಆಗಿವೆ. ಅಂತೂ ಯಾರನ್ನು ಹೇಗೆ ಬೇಕಾದರೂ ತೋರಿಸುವ ನಂಬಿಸುವ ಸುಳ್ಳನ್ನೇ ನಿಜವೆಂದು ಭಯಾನಕ ಕ್ಯಾನ್ಸರ್ ನಂತೆ ಹರಡುತ್ತಿರುವ ಇಂದಿನ ಸುದ್ದಿಗಳ ಬಗೆಗೆ ವಿಶ್ವಮಟ್ಟದ ಸಂಪಾದಕರು ಸಹಜ ಆತಂಕದ ಜೊತೆಗೆ ಅರಿವಿನ ಬೆಳಕು ಚೆಲ್ಲಿದ್ದರೆ ಬರಹ ಪರಿಪೂರ್ಣವಾಗಿರುತ್ತಿತ್ತು.

ಅವರಿಗೆ ಇವೆಲ್ಲಾ ಗೊತ್ತಿಲ್ಲವೆಂದಲ್ಲ. ಆದರೆ ತಮಗೆ ಯಾವುದು ಬೇಕೋ ಅದನ್ನಷ್ಟೇ ಆರಿಸಿ ಬರೆಯುವ ಕಲೆ ಅವರಿಗೆ ಚೆನ್ನಾಗಿ ಗೊತ್ತು.

ಅದಿರಲಿ. ಆದರೆ ಇಡೀ ಬರಹದಲ್ಲಿ ಗಮನ ಸೆಳೆದದ್ದು, ಲೇಖಕರು ಈ ಮಾತುಗಳನ್ನು ಹೇಳುವ ಭರದಲ್ಲಿ ಅನಗತ್ಯವಾಗಿ ಇಂದು ನಮ್ಮೊಂದಿಗಿಲ್ಲದ ಕನ್ನಡದ ಹಿರಿಯ ಬರಹಗಾರರು ಹಾಗೂ ಪತ್ರಕರ್ತರಾಗಿದ್ದ ಪಿ.ಲಂಕೇಶ್ ಮತ್ತು ರವಿಬೆಳಗೆರೆಯವರನ್ನು ಉಲ್ಲೇಖಿಸಿ ಅವರನ್ನು ಪರೋಕ್ಷವಾಗಿ ಹೀಗಳೆಯುವ ಯತ್ನಕ್ಕೆ ಕೈಹಾಕಿದ್ದು ಮಾತ್ರ ಮಾಧ್ಯಮಲೋಕದವರ ಮತ್ಸರವನ್ನು ಅನಾವರಣ ಮಾಡಿಕೊಂಡಂತಿತ್ತು.

ಎಂಭತ್ತರ ದಶಕದಲ್ಲಿ ಕನ್ನಡದಲ್ಲಿ ಮೊಟ್ಟಮೊದಲ ಟ್ಯಾಬ್ಲಾಯ್ಡ್ ಪತ್ರಿಕೆಯನ್ನು ಜಾಹೀರಾತಿಲ್ಲದೇ ಹೊರತಂದು, ಅದನ್ನು ಕನ್ನಡದ ಜಾಣ ಜಾಣೆಯರ ಪತ್ರಿಕೆಯನ್ನಾಗಿ ರೂಪಿಸಿ ತಮ್ಮ ಪತ್ರಿಕೆಯನ್ನೇ ಸಮರ್ಥ ವಿರೋಧಪಕ್ಷವನ್ನಾಗಿಸಿ ಸರ್ಕಾರಕ್ಕೆ ನಡುಕ ಹುಟ್ಟಿಸುವಲ್ಲಿ ಯಶಸ್ವಿಯಾಗಿದ್ದ ಪಿ.ಲಂಕೇಶ್ ಕನ್ನಡ ಟ್ಯಾಬ್ಲಾಯ್ಡ್ ಲೋಕದ ಪಿತಾಮಹ. ಅವರ ಬಗೆಗೆ ಏನೆಲ್ಲಾ ಟೀಕೆ ಟಿಪ್ಪಣಿಗಳು ವೈರುಧ್ಯಗಳಿದ್ದರೂ ಅಧಿಕಾರದಲ್ಲಿದ್ದು ಅಡ್ಡದಾರಿ ಹಿಡಿದವರನ್ನೂ ಭ್ರಷ್ಟರನ್ನೂ ಮುಲಾಜಿಲ್ಲದೇ ಬಯಲಿಗೆಳೆದು ಮುಖವಾಡ ಕಳಚುತ್ತಿದ್ದ ಲಂಕೇಶರ ಅಂದಿನ ಸಾಹಸ ಕನ್ನಡ ಪತ್ರಿಕೋದ್ಯಮದಲ್ಲೇ ನವ ಮನ್ವಂತರಕ್ಕೆ ನಾಂದಿಹಾಡಿತ್ತು. ಜೊತೆಗೆ ಕನ್ನಡಿಗರ ಸಾಕ್ಷಿ ಪ್ರಜ್ಞೆಯಂತೆ , ಆಕ್ರೋಶದ ಸಂಕೇತದಂತೆ ಲಂಕೇಶ್ ಪತ್ರಿಕೆ ಬೆಳಗಿತ್ತು. ಕತ್ತಿಗಿಂತ ಪೆನ್ನು ಹರಿತ ಎಂಬ ಮಾತು ಅವರ ಬರಹಗಳಲ್ಲಿ ಅಕ್ಷರಶಃ ಧ್ವನಿಸುವಂತಿತ್ತು.

ಇನ್ನು ಲಂಕೇಶರ ಚಿಂತನೆಗಳಿಗಿಂತ ಭಿನ್ನವಾಗಿದ್ದರೂ ಇದೇ ಟ್ಯಾಬ್ಲಾಯ್ಡ್ ಲೋಕಕ್ಕೆ ಪಾಪಿಗಳ ಲೋಕದ ಪಾಕವನ್ನು ಬ್ಲೆಂಡ್ ಮಾಡಿ ಅದನ್ನು ತಮ್ಮದೇ ಆದ ಶೈಲಿಯಲ್ಲಿ ಅಕ್ಷರಗಳಲ್ಲಿ ಬೆಳಗಿಸಿದ್ದ ರವಿ ಬೆಳಗೆರೆ ತಮ್ಮ ಹಾಯ್ ಬೆಂಗಳೂರ್ ಮೂಲಕ ಪತ್ರಿಕೋದ್ಯಮದ ದಿಕ್ಕು ದೆಸೆಯನ್ನೇ ವಿಶಿಷ್ಟವನ್ನಾಗಿಸಿ ಓದುಗರ ಸಂಖ್ಯೆಯನ್ನು ಹೆಚ್ಚಿಸಿದ್ದರು.

ವಾಸ್ತವ ವರ್ತಮಾನ

ಇವರಿಬ್ಬರ ಬಗ್ಗೆ ವಿಶ್ವವಾಣಿಯ ಸಂಪಾದಕರು ತಮ್ಮ ಲೇಖನದಲ್ಲಿ ಉಲ್ಲೇಖಿಸುತ್ತಾ....

" ತಾಕತ್ತಿದ್ದರೆ ಲಂಕೇಶ್ ಮತ್ತು ರವಿ ಬೆಳಗೆರೆ ಈಗ ಪತ್ರಿಕೋದ್ಯಮ ಮಾಡಬೇಕಿತ್ತು. ಅವರ ಕಾಲದಲ್ಲಿ ಸಂವಹನವು ಏಕಮುಖವಾಗಿತ್ತು. ಅವರು ಬರೆದಿದ್ದನ್ನು ಓದಿ ಜನ ಮೆಚ್ಚಿಕೊಳ್ಳಬೇಕಿತ್ತೇ ಹೊರತು, ಪ್ರಶ್ನೆ ಮಾಡುವ ವೇದಿಕೆಗಳು ಇರಲಿಲ್ಲ. ಪ್ರಶ್ನೆ ಮಾಡುವವರ ಮೇಲೆ ಅವರು ಪ್ರಹಾರ ಮಾಡಿ ಬಾಯಿ ಮುಚ್ಚಿಸುತ್ತಿದ್ದರು. ಈಗ ಆ ತಂತ್ರಗಳು ನಡೆಯುವುದಿಲ್ಲ. ಈಗ ಓದುಗರು ಹಿಡಿಯುವ ಭೂತಗನ್ನಡಿ ಶಾಖಕ್ಕೆ ಅವರಿಬ್ಬರೂ ಸುಟ್ಟು ಹೋಗುತಿದ್ದರು. " ಇವೇ ಮುಂತಾದ ಟೀಕಾಸ್ತ್ರಗಳಿಂದ ಅವರಿಬ್ಬರನ್ನು ತಿವಿದಿದ್ದಾರೆ. ಲಂಕೇಶ್ ಮತ್ತು ಬೆಳಗೆರೆ ಪರಿಪೂರ್ಣರೂ ಅಲ್ಲ ಟೀಕಾತೀತರೂ ಅಲ್ಲ. ಆ ಮಾತು ಬೇರೆ. ಆದರೆ ಹೀಗೆ ಹೀಗಳೆಯುವ ಮೂಲಕ ಅವರ ಮೇಲಿನ ತಮ್ಮೊಳಗಿನ ಅಸಹನೆಯನ್ನೋ ಈರ್ಷ್ಯೆಯನ್ನೋ ಹೊರಹಾಕುವ ಅಥವಾ ತಾವು ಸೋಷಿಯಲ್ ಮೀಡಿಯಾಗಳಿಲ್ಲದ ಅವರ ಕಾಲದಲ್ಲೂ ಮತ್ತು ಇಂದಿನ ಸಂಕೀರ್ಣ ಮಾಧ್ಯಮಲೋಕದ ವಾತಾವರಣದಲ್ಲೂ ನಡೆಯುತ್ತಿರುವ ನಾಣ್ಯವೇ ಎಂಬುದನ್ನು ಸೂಚ್ಯವಾಗಿ ಹೈಲೈಟ್ ಮಾಡಿ ಕೊಚ್ಚಿಕೊಂಡಿದ್ದಾರೆ.

ರೈಟ್.... ಎದುರಾಳಿಯನ್ನು ಕಾಲೆಳೆಯುವುದೂ ಅಥವಾ ಆತ್ಮರತಿಯ ಅಂತಃಪುರದಲ್ಲೇ ಅಮಲೇರಿಸಿಕೊಂಡು ಅಕ್ಷರಗಳೊಂದಿಗೆ ತಾವೂ ಅಲ್ಲಾಡುವುದು... ಇದಾವುದೂ ಮಾಧ್ಯಮಲೋಕದ ಕೆಲವು ಸ್ಟಾರ್ ಬರಹಗಾರರ ಖಯಾಲಿಗಳಿಗೆ ಹೊಸತೂ ಅಲ್ಲ ಅಚ್ಚರಿಯೂ ಅಲ್ಲ. ಅದಕ್ಕೆ ಇವರೂ ಹೊರತೂ ಅಲ್ಲ.

ಆದರೆ ಲಂಕೇಶ್ ಬಗ್ಗೆ ಭ್ರಷ್ಟರಿಗೆ , ರಾಜಕೀಯದವರಿಗೆ ಮಾತ್ರ ಹೆದರಿಕೆ ಇತ್ತು. ಆಬಗ್ಗೆ ಅವರೇನೇ ಬರೆದರೂ ಅದು ಜನಸಾಮಾನ್ಯರ ಭಾವನೆಗಳ ಮೇಲೆ ನಿತ್ಯ ಬದುಕಿನ ಮೇಲೆ ಅಡ್ಡ ಪರಿಣಾಮ ಬೀರಿರಲಿಲ್ಲ. ಇನ್ನು ರವಿ ಬೆಳಗೆರೆ ಒಂದಷ್ಟು ಜನರ ವೈಯಕ್ತಿಕ ತೇಜೋವಧೆ ಮಾಡಿ ದುಡ್ಡು ಹೆಸರು ಮಾಡಿಕೊಂಡರೂ ಅದನ್ನು ಬೆಳಗೆರೆಯವರ ಚಾರಿತ್ರ್ಯದ ಮೇಲೆ ಜನ ವ್ಯಾಖ್ಯಾನಿಸಿ ಮಾತನಾಡಿಕೊಳ್ಳಬಲ್ಲರೇ ವಿನಃ ಅದರಿಂದ ಸಮಾಜಕ್ಕೆ ಸಾಮಾನ್ಯ ಜನರ ಬದುಕಿಗೆ ನೇರ ಪರಿಣಾಮ ಇರಲಿಲ್ಲ. ವಿಶ್ವವಾಣಿಯ ಸಂಪಾದಕರು ಬರೆದಂತೆ ಪಿ.ಲಂಕೇಶ್ ಮತ್ತು ರವಿ ಬೆಳಗೆರೆ ಅಷ್ಟು ಸುಲಭವಾಗಿ ಸುಟ್ಟುಹೋಗಬಲ್ಲ ತರಗಲೆಗಳಂತೂ ಅಲ್ಲ

ಆದರೆ ಇಂದು.....? ಈ ಯೂಟ್ಯೂಬು, ಡಿಜಿಟಲ್/ ಸೋಷಿಯಲ್ ಮೀಡಿಯಾಗಳ ಸುಳ್ಳುಸುದ್ದಿಗಳ ಸಾಗರದಲ್ಲಿ , ಪತ್ರಿಕಾಧರ್ಮವನ್ನೇ ಮರೆತು ಒಂದು ರಾಜಕೀಯ ಪಕ್ಷದ ತುತ್ತೂರಿಗಳಂತಾಗಿರುವ ನಮ್ಮ ಎಲೆಕ್ಟ್ರಾನಿಕ್ ಮೀಡಿಯಾಗಳ ಭರಾಟೆಯಲ್ಲಿ ಹೊರಬರುತ್ತಿರುವ ಜನರ ದಾರಿ ತಪ್ಪಿಸುತ್ತಿರುವ ಬಹುತೇಕ ಸುದ್ದಿಗಳು ಸಮಾಜಕ್ಕೆ ಅಪಾಯಕಾರಿಯಲ್ಲವೇ....? ಜಾತಿ ಮತ ಧರ್ಮ ದ್ವೇಷಗಳ ಪ್ರಚೋದಕ ಸುದ್ದಿಗಳಿಂದ ಜನರ ನಿತ್ಯ ಬದುಕಿಗೆ ಹಾನಿಯಾಗುತ್ತಿಲ್ಲವೇ..? ಇದು ಯಾವ ಸಾಮಾಜಿಕ ಭಯೋತ್ಪಾದನೆಗಿಂತ ಕಡಿಮೆಯಿದೆ ?

ಇಂತಹ ಸೂಕ್ಷ್ಮ ವಿಷಯಗಳ ಬಗೆಗೆ ಅರಿವು ಮೂಡಿಸಿ ಮಾಧ್ಯಮಲೋಕದ ಘನತೆಯನ್ನು ಕಾಪಾಡಿಕೊಳ್ಳಬೇಕಾದ ಅಗತ್ಯತೆಯನ್ನು ಹೇಳಬೇಕಾದ ವಿಶ್ವವಾಣಿಯ ಹಿರಿಯ ಪತ್ರಕರ್ತರು ಆದನ್ನು ಲಂಕೇಶ್ ಮತ್ತು ಬೆಳಗೆರೆಯವರ ಮೇಲಿದ್ದ ತಮ್ಮೊಳಗಿನ ಈರ್ಷ್ಯೆಯನ್ನೋ ಅಸಹನೆಯನ್ನೋ ಹೊರಹಾಕಲು ಬಳಸಿಕೊಂಡಿದ್ದು ಸಿನಿಕತನದ ಸಂಕೇತದಂತಿತ್ತು.

ಅವರು ಇದ್ದಿದ್ದರೂ ಅಥವಾ ಇವರು ಇಲ್ಲದಿದ್ದರೂ ಯಾವುದು ಏನಾಗಬೇಕೋ ಅದು ಆಗಿಯೇ ತೀರುತ್ತದೆ. ಒಬ್ಬ ವ್ಯಕ್ತಿ ತನ್ನನ್ನು ತಾನು ವೈಭವೀಕರಿಸಿಕೊಳ್ಳುವುದು ತಪ್ಪಲ್ಲ. ಆದರೆ ಆ ನಿಟ್ಟಿನಲ್ಲಿ ನಮ್ಮೆದುರು ಜೀವಂತವಾಗಿಲ್ಲದ ವ್ಯಕ್ತಿಗಳ ಬಗ್ಗೆ ಕ್ಷುಲ್ಲಕವಾಗಿ ಕಾಲೆಳೆಯುವುದು ತಪ್ಪು.

ಅವನೆಂಥಾ ಸೆಲೆಬ್ರಿಟಿ ಜರ್ನಲಿಸ್ಟೇ ಆಗಿರಲೀ, ಪತ್ರಕರ್ತನ ಅತಿ ಬುದ್ಧಿವಂತಿಕೆಗಿಂತ, ಅವನಲ್ಲಿನ ವಸ್ತುನಿಷ್ಠತೆಯನ್ನು ಜನ ಬಯಸುತ್ತಾರೆ ಎಂಬ ಸಣ್ಣ ಅರಿವು ಈ ಮನಃಸ್ಥಿತಿಯವರಲ್ಲಿ ಇರಬೇಕಾಗಿರುವುದು ಮುಖ್ಯ.

**ಮರೆಯುವ ಮುನ್ನ:** ಇಂದಿನ ಬಹುತೇಕ ಸೋಷಿಯಲ್ ಮೀಡಿಯಾಗಳು, ಡಿಜಿಟಲ್ ಮಾಧ್ಯಮಗಳು, ಯೂಟ್ಯೂಬ್ ಚಾನೆಲ್ಲುಗಳು ಮತ್ತು ಟೀವಿ ನ್ಯೂಸ್ ಚಾನೆಲ್ಲುಗಳವರು ಹಿಡಿದಿರುವ ಹಾದಿ ನೋಡಿದಾಗ , ಅಧಿಕಾರದಲಿರುವವರಿಗೆ ಅಥವಾ ಕೆಲವು ರಾಜಕೀಯ ಪಕ್ಷಗಳಿಗೆ ತಮ್ಮನ್ನೇ ತಾವು ಮಾರಿಕೊಂಡಿರುವ ಕೆಲವು ಮಾಧ್ಯಮಲೋಕದ ಮುಖವಾಡಗಳನ್ನು ಕಂಡಾಗ , ವೃತ್ತಿಬದ್ಧತೆಯನ್ನೇ ಮರೆತು ಯಾವುದೋ ಪಕ್ಷದ ಮುಖವಾಣಿಯಂತೆ ಒದರಿ ಬೂಟು ನೆಕ್ಕುವ ಮನಃಸ್ಥಿತಿಯ , ಇಲ್ಲವೇ ಗಾಳಿ ಬಂದಾಗ ತೂರಿಕೋ ಎಂಬ ನೀತಿಯಡಿಯಲ್ಲಿ ಪತ್ರಿಕಾಧರ್ಮವನ್ನೇ ಗಾಳಿಗೆ ತೂರಿ ಎಲ್ಲ ಸಿದ್ಧಾಂತಗಳಿಗೂ ಬೀಸಣಿಕೆ ಬೀಸುತ್ತಾ ಓಲಾಡುವ ಅಡ್ನಾಡಿ ಪತ್ರಕರ್ತರಿಗಿಂತ....

ನಮಗೇನೋ ಅವರ ವೈಯಕಿಕ ತಪರಾಕಿಗಳ ಹೊರತಾಗಿಯೂ ಲಂಕೇಶ್ ಮತ್ತು ರವಿಬೆಳಗೆರೆಯವರೇ ಸಮಾಜಕ್ಕೆ ಕಡಿಮೆ ಅಪಾಯಕಾರಿಯಾಗಿದ್ದರೆಂದು ಅನಿಸಿದರೆ ಅಚ್ಚರಿಯೇನಲ್ಲ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,